ಸಂಪುಟ: 14 Volume | ಸಂಚಿಕೆ: 39 Issue | ಪುಟಗಳು 08 Pages | ಗುರುವಾರ 14 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**
ನಮ್ಮ ಹೆಚ್ಚಿನ ದುಃಖ, ಸಂಕಟಗಳಿಗೆ ನಾವೇ ಕಾರಣ.
–ಸಾಫೋಕ್ಲಿಸ್

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

## ತುರಡಗಿ ಗ್ರಾಮ ದೇವತೆಗೆ ಉಡಿ ತುಂಬುವ ಕಾರ್ಯಕ್ರಮ



**ಮುದಗಲ್:** ಸಮೀಪದ ತುರಡಗಿ ಗ್ರಾಮದ ಶ್ರೀ ದುರ್ಗಾ ದೇವಿ ಹಾಗೂ ಶ್ರೀ ದ್ಯಾಮಮ್ಮ ದೇವಿಯ ಉಡಿ ತುಂಬುವ ಕಾರ್ಯಕ್ರಮ ಮಂಗಳವಾರ ಅದ್ದೂರಿಯಾಗಿ ಜರುಗಿತು. ಮಹಿಳೆಯರ ಕುಂಬ, ಕಳಸ,ಡೊಳ್ಳು,ಭಾಜಭಜಂತ್ರಿ ಹಾಗೂ ವಿವಿಧ ವಾದ್ಯ ಮೇಳದೊಂದಿಗೆ ಗಂಗೆ ಸ್ಥಳದ ವರಗೆ ದೇವಿಯ ಮೂರ್ತಿ ಪಲ್ಲಕ್ಕಿ ಮೆರವಣಿಗೆ ನಡೆಯಿತು ಗಂಗೆ ಸ್ಥಳದಲ್ಲಿ ಶ್ರೀ ದುರ್ಗಾ ದೇವಿಯ ಪೂಜಾರಿ ದುರುಗಪ್ಪ ಪೂಜಾರಿ ರವರು ದೇವರಿಗೆ ಪೂಜೆ ಸಲ್ಲಿಸಿ ನಂತರ ಈ ವರ್ಷದ ಮಳೆ ಬೆಳೆ ಕುರಿತು ಭವಿಷ್ಯವಾಣಿ ನುಡಿದರು. ತುರಡಗಿ ಗ್ರಾಮಸ್ಥರು ಸೇರಿದಂತೆ ಸುತ್ತಮುತ್ತಲಿನ ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



ಕೇರಳ ಮಂಜೇಶ್ವರದಲ್ಲಿ ಗೆಲುವು ಸಾಧಿಸಿರುವ ಯುಡಿಎಫ್ ಶಾಸಕ ಎ. ಕೆ. ಎಂ.ಅಶ್ರಫ್ ಅವರು ಸಚಿವ ಜಮೀರ್ ಅಹಮದ್ ಖಾನ್ ಅವರನ್ನು ಭೇಟಿ ಮಾಡಿ ಕೃತಜ್ಞತೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಸಚಿವರು ಅಶ್ರಫ್ ಅವರಿಗೆ ಅಭಿನಂದನೆ ಸಲ್ಲಿಸಿದರು. ಸಚಿವ ರಹೀಮ್ ಖಾನ್ ಉಪಸ್ಥಿತರಿದ್ದರು.



ಹುಣಸೂರು ನಗರದ ಮುಸ್ಲಿಂ ಬ್ಲಾಕ್ ನಿವಾಸಿ ಪ್ರಥಮ ವಿದ್ಯುತ್ ಗುತ್ತಿಗೆದಾರರು ಅಕ್ಮಲ್ ಹಜ್ ಯಾತ್ರೆಗೆ ತೆರಳುತ್ತಿರುವ ಯಾತ್ರಿಗಳಿಗೆ ರವರಿಗೆ ಜೆಡಿಎಸ್ ನಗರ ಅಧ್ಯಕ್ಷ ಸರವಣ ಮಾಜಿನಗರ ಸಭೆ ಸದಸ್ಯರಾದ ಕೃಷ್ಣರಾಜಗುಪ್ತ ಶಿರಾಜ್ ಪಾಷಾ ಗೌರವಿಸಿ ಸನ್ಮಾನಿಸಿದರು.

## ಅಗತ್ಯವಿರುವಷ್ಟು ಮೇವು ಲಭ್ಯ

**ಬೀದರ್:** ಪ್ರಸ್ತುತ ಹುಲಸೂರು ತಾಲ್ಲೂಕಿನಲ್ಲಿ ಪಶುಗಳಿಗೆ ಅಗತ್ಯವಿರುವಷ್ಟು ಮೇವು ಲಭ್ಯವಿದೆ ಮತ್ತು ತಾಲ್ಲೂಕಿನಲ್ಲಿ ಲಭ್ಯವಿರುವ ಒಣ ಹಾಗೂ ಹಸಿರು ಮೇವು ಸುಮಾರು 22 ವಾರಗಳ ಕಾಲ ಸಾಕಾಗುವಷ್ಟು ಸಂಗ್ರಹ ಇರುತ್ತದೆ ಎಂದು ಬೀದರ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹುಲಸೂರು ತಾಲ್ಲೂಕು ವ್ಯಾಪ್ತಿಯಲ್ಲಿ ಮೇವಿನ ಕೊರತೆ ಉಂಟಾಗಿದೆ ಎಂಬ ಬಗ್ಗೆ ಇತ್ತೀಚೆಗೆ ಕೆಲವು ಪತ್ರಿಕೆಗಳಲ್ಲಿ ವರದಿಯಾಗಿರುವುದು ನಮ್ಮ ಗಮನಕ್ಕೆ ಬಂದಿರುತ್ತದೆ. ಪಶುಪಲನಾ ಇಲಾಖೆಯು ನಿರಂತವಾಗಿ ಮೇವಿನ ಲಭ್ಯತೆಯ ಮೇಲೆ ನಿಗಾ ಇರಿಸಿದ್ದು ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ಸನ್ನದ್ದವಾಗಿದೆ ಎಂದು ಅವರು ತಿಳಿಸಿದ್ದಾರೆ.

## ದಾದಿಯರೇ ಆಸ್ಪತ್ರೆಯ ಬೆನ್ನೆಲುಬು..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವೈದ್ಯರ ಚಿಕಿತ್ಸೆಯ ಜೊತೆಗೆ ದಾದಿಯರ ನಿಸ್ವಾರ್ಥ ಸೇವೆ ರೋಗಿಗಳನ್ನು ಬೇಗ ಗುಣಮುಖರಾಗಿಸುತ್ತದೆ ಎಂದು ಕೆಬಿಎನ ವಿಶ್ವವಿದ್ಯಾಲಯದ ಸಮ ಉಪಕುಲಪತಿ ಪ್ರೊ ಅಶಫಾಕ ಅಹ್ಮದ ಹೇಳಿದರು. ಅವರು ಮಂಗಳವಾರ ಕೆಬಿಎನ ಟೀಚಿಂಗ ಮತ್ತು ಜನರಲ ಆಸ್ಪತ್ರೆಯಲ್ಲಿ ಅಂತಾರಾಷ್ಟ್ರೀಯ ದಾದಿಯರ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಫ್ಲೋರೆನ್ಸ್ ನೈಟ್ಯಾನಂಗಲ ಅವರ ಜನ್ಮದಿನದಂದು ಅಂತರಾಷ್ಟ್ರೀಯ ದಾದಿಯರ ದಿನವನ್ನಾಗಿ ಆಚರಿಸಲಾಗುತ್ತದೆ. ಅವರೆಲ್ಲ ಆಸ್ಪತ್ರೆಯ ಬೆನ್ನೆಲುಬು. ಅವರ ಸಹನೆ ಮತ್ತು ತಾಳ್ಮೆಗೆ ಅಭಿನಂದನೆಗಳು ಎಂದರು. ಅವರು ಸಲ್ಲಿಸಿತ್ತಿರುವ ಸೇವೆ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ಈ ಸಂದರ್ಭದಲ್ಲಿ ಅವರು ಕೆಬಿಎನ ಆಸ್ಪತ್ರೆಯ



ಎಲ್ಲ ದಾದಿಯರಿಗೆ ಪ್ರತಿಜ್ಞೆ ಯನ್ನು ಬೋಧಿಸಿದರು. ನಂತರ ಕೇಕ್ ಕತ್ತರಿಸಿ ಸಂಭ್ರಮೀಸಲಾಯಿತು. ಮೆಡಿಕಲ ಡೀನ ಡಾ ಗುರುಪ್ರಸಾದ, ಮೆಡಿಕಲ ಸುಪ್ರಿಟೆಂಡೆಂಟ ಡಾ ಸಿದ್ದಲಿಂಗ ಚೆಂಗಟಿ, ಆಡಳಿತ ಅಧಿಕಾರಿ ಡಾ ರಾಧಿಕಾ, ಆಸ್ಪತ್ರೆಯ ಎಲ್ಲ ಶುಶ್ರುಕಿಯರು ಹಾಜರಿದ್ದರು.

## ಕೆಐಎಡಿಬಿ ಅಧಿಕಾರಿಯಾಗಿ ಗೋವಿಂದ ರೆಡ್ಡಿ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಸರ್ಕಾರವು ಹಿರಿಯ ಐಎಎಸ್ ಅಧಿಕಾರಿ ಗೋವಿಂದ ರೆಡ್ಡಿ ಅವರನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರಾಗಿ ನೇಮಕ ಮಾಡಿ ಆದೇಶ ಹೊರಡಿಸಿದೆ.

ಪ್ರಸ್ತುತ ಮೂಲಸೌಕರ್ಯ ಅಭಿವೃದ್ಧಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಗೋವಿಂದ ರೆಡ್ಡಿ ಅವರನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ.

ಈ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಡಾ. ಮಹೇಶ್ ಎಂ. ಅವರನ್ನು ವರ್ಗಾವಣೆ ಮಾಡಿದ ಹಿನ್ನೆಲೆಯಲ್ಲಿ, ಅವರ ಸ್ಥಾನಕ್ಕೆ ಗೋವಿಂದ ರೆಡ್ಡಿ



ಅವರನ್ನು ನೇಮಕ ಮಾಡಲಾಗಿದೆ ಎಂದು ಸರ್ಕಾರದ ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

# ನೀಟ್ ಕರ್ಮಕಾಂಡದ ಕಿಡಿ

### ನೀಟ್ ಪರೀಕ್ಷೆಯಲ್ಲಿ ಅಕ್ರಮ | ದೇಶಾದ್ಯಂತ ಆಕ್ರೋಶ ಭುಗಿಲು | ರಾಜ್ಯದಲ್ಲೂ ಕಾರ್ಯಕರ್ತರ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ನೀಟ್ ಪರೀಕ್ಷೆಯಲ್ಲಿ ಅಕ್ರಮ ನಡೆದಿದ್ದು ದೇಶಾದ್ಯಂತ ಗಮನ ಸೆಳೆದಿದೆ. ಇದರಿಂದ ಪರೀಕ್ಷೆ ರದ್ದುಗೊಂಡಿದೆ. ಕೇಂದ್ರ ಸರ್ಕಾರದ ಈ ನಡೆಯನ್ನು ಖಂಡಿಸಿದ ಯೂತ್ ಕಾಂಗ್ರೆಸ್ ರಾಜ್ಯದ ಅನೇಕ ಕಡೆಗಳಲ್ಲಿ ಪ್ರತಿಭಟನೆ ನಡೆಸಿದೆ.

**ನಿವಾಸದ ಮುಂದೆ ಧಿಕ್ಕಾರ:** ಬೆಂಗಳೂರಿನಲ್ಲಿ ಸಂಸದ ಡಾ. ಕೆ ಸುಧಾಕರ್ ಅವರ ಮನೆಯ ಮುಂದೆಯೂ ಪ್ರತಿಭಟಿಸುವ ಮೂಲಕ ಕಾರ್ಯಕರ್ತರು ಆಕ್ರೋಶ ಹೊರಹಾಕಿದ್ದಾರೆ. ಸದಾಶಿವನಗರದಲ್ಲಿರುವ ಸಂಸದರ ಮನೆ ಮುಂದೆ ಕೂತು ಯುವ ಕಾರ್ಯಕರ್ತರು, ಕೇಂದ್ರದ ವಿರುದ್ಧ ಧಿಕ್ಕಾರ ಕೂಗಿದ್ದಾರೆ

**ಮರು ಪರೀಕ್ಷೆಯೇ ಬೇಡ:** ಸಂಸದರ ಮನೆಗೆ ನುಗ್ಗಲು ಯೂತ್ ಕಾಂಗ್ರೆಸ್ ಕಾರ್ಯಕರ್ತರು ಪ್ರಯತ್ನ ನಡೆಸಿದ್ದು, ಈ ವೇಳೆ ತಡೆದ ಪೊಲೀಸರು, ಕಾರ್ಯಕರ್ತರನ್ನು ವಶಕ್ಕೆ ಪಡೆದಿದ್ದಾರೆ. ಈ ವೇಳೆ ಮಾತಾಡಿದ ಪ್ರತಿಭಟನಾ ಕಾರರು, ನೀಟ್ ಮರು ಪರೀಕ್ಷೆ ನಡೆಸಬಾರದು ಎಂದು ಆಗ್ರಹಿಸಿದ್ದಾರೆ.

### ಬಿಜೆಪಿಯ ವಾದ..?

ನೀಟ್ ಅಕ್ರಮದ ಬಗ್ಗೆ ಪ್ರತಿಪಕ್ಷದ ನಾಯಕ ಆರ್ ಆಶೋಕ್ ಪ್ರತಿಕ್ರಿಯಿಸಿ, ನೀಟ್ ಪರೀಕ್ಷೆ ಪಾರದರ್ಶಕವಾಗಿ ನಡೆಯಬೇಕು. ಪ್ರಶ್ನೆ ಪತ್ರಿಕೆಯ ಸೋರಿಕೆ ಆಗಿದೆ, ತಪ್ಪಾಗಿದೆ. ಕೇಂದ್ರ ಸರ್ಕಾರ ತಕ್ಷಣ ಪ್ರಕರಣ ಸಿಬಿಐಗೆ ಕೊಟ್ಟಿದೆ. ಕಾಂಗ್ರೆಸ್ ಸರ್ಕಾರ ಇದ್ದಿದ್ರೆ ವಿಳಂಬ ಮಾಡುತ್ತಿದ್ದರು. ಕೇಂದ್ರ ಸರ್ಕಾರ ತುರ್ತು ಕ್ರಮ ವಹಿಸಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

### ನಾಸಿಕ್ ಟು ಕೇರಳ ಲಿಂಕ್

ನೀಟ್ ಪ್ರವೇಶ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ತನಿಖೆ ಕೈಗೆತ್ತಿಕೊಂಡ ರಾಜಸ್ಥಾನ ಪೊಲೀಸರ ವಿಶೇಷ ಕಾರ್ಯಪಡೆ ಸೋರಿಕೆಯ ಮೂಲ ಪತ್ತೆ ಮಾಡಿದೆ. ಮಹಾರಾಷ್ಟದ ನಾಸಿಕ್‌ನಲ್ಲಿ ಸೋರಿಕೆಯಾದ ಪತ್ರಿಕೆ ರಾಜಸ್ಥಾನದ ಸಿಕರ್ ತಲುಪಿದೆ. ಇಲ್ಲಿಂದ ಹರಿಯಾಣ, ಕೇರಳದ ಮೂಲಕ ದೇಶದ ವಿವಿಧ ರಾಜ್ಯಗಳ ವಿದ್ಯಾರ್ಥಿಗಳಿಗೆ ವಾಟ್ಸಪ್ ಮೂಲಕ ಹರಿಯ ಬಿಡಲಾಗಿದೆ.




### ಕೇಂದ್ರದ ವಿರುದ್ಧ ಕಿಡಿ

ಮೈಸೂರು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ನೀಟ್ ಪರೀಕ್ಷಾ ಪತ್ರಿಕೆ ಸೋರಿಕೆ ವಿರುದ್ಧ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ಕೆ.ಆರ್. ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಹೊಯ್ಸಳ ಎಂ.ಆರ್ ಅವರ ನೇತೃತ್ವದಲ್ಲಿ ಮೈಸೂರು–ಕೊಡಗು ಸಂಸದರ ಕಚೇರಿಗೆ ಮುತ್ತಿಗೆ ಹಾಕಿ, ಕೇಂದ್ರದ ನಿರ್ಲಕ್ಷ್ಯದ ಧೋರಣೆಯ ವಿರುದ್ಧ ಆಕ್ರೋಶ ಹೊರಹಾಕಲಾಗಿದೆ.

### ಪ್ರಶ್ನೆಪತ್ರಿಕೆ ಸೋರಿಕೆ..?

ನಾಸಿಕ್ ಸರಕಾರಿ ಮುದ್ರಣಾಲಯದಿಂದಲೇ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ. ಮುದ್ರಣಾಲಯದಲ್ಲಿ ಕೆಲಸ ಮಾಡುತ್ತಿದ್ದ ವ್ಯಕ್ತಿಯೇ ಸೋರಿಕೆ ಮಾಡಿರುವ ಶಂಕೆ ಇದೆ. ಪರೀಕ್ಷಾ ಅಕ್ರಮ ನೆಟ್ವರ್ಕ್‌ನಿಂದ ಗುರುಗ್ರಾಮದ ವೈದ್ಯನ ಕೈ ಸೇರಿದ ಪತ್ರಿಕೆಯನ್ನು ಜೈಪುರದ ಖಾತಿಕ್ ಖರೀದಿಸಿದ್ದಾನೆ. ಬಳಿಕ ನೀಟ್ ಕೋಚಿಂಗ್ ಸೆಂಟರ್ ಜತೆ ನಂಟು ಹೊಂದಿದ್ದ ರಾಕೇಶ್‌ಗೆ ಮಾರಿದ್ದಾನೆ ಎನ್ನಲಾಗಿದೆ.

## ಅರಣ್ಯ ಸಚಿವರ ಬೀದರ್ ಜಿಲ್ಲಾ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮೇ.14ರಿಂದ 16ರವರೆಗೆ ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ಮೇ.14 ರಂದು ಬೆಳಿಗ್ಗೆ 11 ಗಂಟೆಗೆ ಬೀದರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಶಾಸಕರ ಪ್ರದೇಶಾಭಿವೃದ್ಧಿ ನಿಧಿ, ಲೋಕಸಭಾ ಸದಸ್ಯರ ಪ್ರದೇಶಾಭಿವೃದ್ಧಿ ನಿಧಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ಮಧ್ಯಾಹ್ನ 2 ರಿಂದ ಸಂಜೆ 6 ರವರೆಗೆ ಬೀದರ್ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಬೀದರ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆ. ಮೇ.15 ರಂದು ಬೆಳಿಗ್ಗೆ 11 ಗಂಟೆಗೆ ಬೀದರನ ಸ್ಕೌಟ್ಸ್ ಮತ್ತು ಗೈಡ್ಸ್ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

## ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಜತೆ ಆಟ

• ಮಲ್ಲಮ್ಮ ನುಡಿ ವಾರ್ತೆ ಬೀದರ್

2026ನೇ ಸಾಲಿನ ಯುಜಿ ನೀಟ್ 2026 ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದನ್ನು ಕಾಂಗ್ರೆಸ್ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಜಾರ್ಜ್ ಫರ್ನಾಂಡೀಸ್ ತೀವ್ರವಾಗಿ ಖಂಡಿಸಿದ್ದಾರೆ.

ನೀಟ್ ಪರೀಕ್ಷೆ ಅಕ್ರಮದ ಕುರಿತು ಪದೇ ಪದೇ ಆರೋಪಗಳು ಕೇಳಿ ಬರುತ್ತಿರುವುದರಿಂದ ಪರೀಕ್ಷೆ ವಿದ್ಯಾರ್ಥಿಗಳು ಹಾಗೂ ಪಾಲಕರ ವಿಶ್ವಾಸ ಕಳೆದುಕೊಳ್ಳುತ್ತಿದೆ ಎಂದು ತೀವ್ರ ಆತಂಕ ವ್ಯಕ್ತಪಡಿಸಿದ್ದಾರೆ.

ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ನಿರ್ಧರಿಸುವ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗುವುದು ಆಘಾತಕಾರಿ. ಹಿಂದೆಯೂ ಪರೀಕ್ಷೆ ಅಕ್ರಮದ ಆರೋಪಗಳು ಕೇಳಿ ಬಂದಿದ್ದವು. ಆದರೂ, ಕೇಂದ್ರ ಸರ್ಕಾರ ಗಂಭೀರವಾಗಿಲ್ಲ ಎಂದು ಆರೋಪಿಸಿದ್ದಾರೆ.

ನೀಟ್ ಅಕ್ರಮದಲ್ಲಿ ಯಾರೇ ಭಾಗಿಯಾದ್ದರೂ ಅವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು. ಯಾವುದೇ ಲೋಪಕ್ಕೆ ಅವಕಾಶ ನೀಡದಂತೆ ನೀಟ್ ಮರು ಪರೀಕ್ಷೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

## ಬಾಬಾನಗರ ಜಲಸಂಗ್ರಹಗಾರಕ್ಕೆ ಡಿಸಿ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಬೇಸಿಗೆ ದಿನಗಳಲ್ಲಿ ಜನ–ಜಾನುವಾರುಗಳನ್ನು ನೀರಿನ ತಾಪತ್ರಯದಿಂದ ಪಾರು ಮಾಡಬೇಕು ಎಂಬ ದೂರದೃಷ್ಟಿಯೊಂದಿಗೆ ತಿಕೋಟಾ ತಾಲೂಕಿನ ಬಾಬಾನಗರದಲ್ಲಿ ನಿರ್ಮಾಣಗೊಳ್ಳಲಿರುವ ಜಲ ಸಂಗ್ರಹಗಾರ ನಿರ್ಮಾಣ ಸ್ಥಳಕ್ಕೆ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಬುಧವಾರ ಭೇಟಿ ನೀಡಿ ಪರಿಶೀಲಿಸಿದರು.

ಕರ್ನಾಟಕ ನೀರಾವರಿ ನಿಗಮದಿಂದ 600 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಈ ಬೃಹತ್ ಜಲ ಸಂಗ್ರಹಗಾರ 0.70 ಟಿಎಂಸಿ ನೀರಿನ ಸಾಮರ್ಥ್ಯ ಹೊಂದಿದ್ದು, ಬಾಬಾನಗರ ಸೇರಿದಂತೆ ಸುತ್ತಲಿನ ಹಳ್ಳಿಗಳ ಜನತೆಗೆ ಬಿರು ಬೇಸಿಗೆಯಲ್ಲಿ ಜನ ಹಾಗೂ ಜಾನುವಾರುಗಳು ನೀರಿಗಾಗಿ ಪರದಾಡಬಾರದು ಎಂದು ಕನಸು ಕಂಡ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅವರು ಈ ಜಲಸಂಗ್ರಹಗಾರ ನಿರ್ಮಾಣಕ್ಕೆ ಡಿಪಿಆರ್ ಸಿದ್ದಪಡಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ ಎಂದು ಕರ್ನಾಟಕ ನೀರಾವರಿ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಅಂಬಣ್ಣ ಹರಳಯ್ಯ ಅವರು, ಜಿಲ್ಲಾಧಿಕಾರಿಗಳಿಗೆ ವಿವರಿಸಿದರು. ಜಿಲ್ಲೆಯ ಮಹತ್ವಾಕಾಂಕ್ಷಿ ಯೋಜನೆಯಾಗಿರುವ ತುಬಚಿ–ಬಬಲೇಶ್ವರ ಬೃಹತ್ ನೀರಾವರಿ ಯೋಜನೆಯಡಿ ಈ ಬೃಹತ್ ಜಲಸಂಗ್ರಹಗಾರಕ್ಕೆ ನೀರು ಸರಬರಾಜು ಮಾಡಲಾಗುವುದು ಎಂದು ಅಂಬಣ್ಣ ಹರಳಯ್ಯ ಜಿಲ್ಲಾಧಿಕಾರಿಗಳಿಗೆ ವಿವರಿಸಿದರು.



### ಜಲಸಂಗ್ರಹಗಾರಕ್ಕೆ 545 ಎಕರೆ ಜಮೀನು ಅವಶ್ಯ

ಈ ಬೃಹತ್ ಜಲಸಂಗ್ರಹಗಾರ ನಿರ್ಮಾಣಕ್ಕೆ 545 ಎಕರೆ ಜಮೀನಿನ ಅವಶ್ಯಕತೆಯಿದೆ. ಹಾಗಾಗಿ ನಿರ್ಮಾಣವಾಗಲಿರುವ ಜಲ ಸಂಗ್ರಹಗಾರದ ಸುತ್ತಲಿರುವ ಸರ್ಕಾರಿ ಜಮೀನನ್ನು ಇದೇ ವೇಳೆ ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಸರ್ಕಾರಿ ಜಮೀನನ್ನು ಕರ್ನಾಟಕ ನೀರಾವರಿ ನಿಗಮಕ್ಕೆ ಹಸ್ತಾಂತರಿಸುವುದಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು,ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಅಗತ್ಯ ಸೂಚನೆ ನೀಡಿದರು.

## ಕ್ಯಾನ್ಸರ್ ಚಿಕಿತ್ಸಾ ಘಟಕ ನಿರ್ಮಾಣಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಕ್ಯಾನ್ಸರ್ ಒಂದು ಅಪಾಯಕಾರಿ ಕಾಯಿಲೆಯಾಗಿದ್ದು, ಆರಂಭಿಕ ಹಂತದಲ್ಲಿ ಪತ್ತೆಯಾದರೆ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಬುಧವಾರ ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬ್ರಿಮ್ಸ್) ಆವರಣದಲ್ಲಿ ಬೀದರ ಜಿಲ್ಲಾಡಳಿತ, ಬೀದರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಸಹಯೋಗದಲ್ಲಿ 36 ಕೋಟಿ ರೂ. ಮೊತ್ತದ 100 ಹಾಸಿಗೆಗಳ ಕಿದ್ವಾಯಿ ಫೆರಿಫರಲ್ ಕ್ಯಾನ್ಸರ ಚಿಕಿತ್ಸಾ ಘಟಕ ನಿರ್ಮಾಣ ಕಾಮಗಾರಿ ಶಂಕುಸ್ಥಾಪನೆ ನೆರವೇರಿಸಿ ಮಾತನಾಡುತ್ತಾ, ಇತ್ತೀಚಿನ ದಿನಗಳಲ್ಲಿ ಗುಟ್ಕಾ, ತಂಬಾಕು ಸೇವನೆಯಿಂದ ಬಾಯಿ ಕ್ಯಾನ್ಸರ ಪ್ರಕರಣಗಳು ಹೆಚ್ಚುತ್ತಿದ್ದು, ಮಹಿಳೆಯರ ಸ್ತನ ಕ್ಯಾನ್ಸರ ಪ್ರಮಾಣವು ಏರಿಕೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಚಿಕಿತ್ಸೆಗಿಂತ ಮುನ್ನೆಚ್ಚರಿಕೆ ಅತ್ಯಂತ ಮುಖ್ಯ, ಸಾರ್ವಜನಿಕರು ಗುಟ್ಕಾ ಸೇರಿದಂತೆ ಆರೋಗ್ಯಕ್ಕೆ ಹಾನಿಕಾರವಾದ ದುಶ್ಚಟಗಳಿಂದ ದೂರವಿರಬೇಕು ಎಂದರು.

ಕಾರ್ಯಕ್ರಮದಲ್ಲಿ ಕಾಡಾ ಅಧ್ಯಕ್ಷರಾದ ಬಾಬು ಹೊನ್ನಾನಾಯಕ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಬ್ರಿಮ್ಸ್ ನಿರ್ದೇಶಕರಾದ ಡಾ.ಶಾಂತಲಾ ಕೌಜಲಗಿ, ಗುಲಬರ್ಗಾ ಕಿದ್ವಾಯಿ ಆಸ್ಪತ್ರೆಯ ಡಾ.ಗುರುರಾಜ ದೇಶಪಾಂಡೆ, ಡಾ. ಉಮಾ ದೇಶಮುಖ ಸೇರಿದಂತೆ ಬ್ರಿಮ್ಸ್ ಸಿಬ್ಬಂದಿ ವರ್ಗ ಸೇರಿದಂತೆ ನರ್ಸಿಂಗ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



### ಜೀವಗಳನ್ನು ಉಳಿಸಲು ಈ ಕೇಂದ್ರ ಸಹಕಾರಿ

ಬೀದರನಲ್ಲಿ ಕಿದ್ವಾಯಿ ಸಂಸ್ಥೆಯ ಸಹಯೋಗದೊಂದಿಗೆ ಆಧುನಿಕ ಮತ್ತು ಸುಧಾರಿತ ತಂತ್ರಜ್ಞಾನ ಹೊಂದಿದ ಹೊಸ ಕ್ಯಾನ್ಸರ ಚಿಕಿತ್ಸಾ ಘಟಕ ನಿರ್ಮಾಣ ಆಗುತ್ತಿರುವುದು ಜಿಲ್ಲೆಯ ಜನೆಗೆ ಮಹತ್ತರವಾದ ಆರೋಗ್ಯ ಸೇವೆಯಾಗಲಿದೆ. ಆರಂಭಿಕ ಹಂತದಲ್ಲೆ ರೋಗ ಪತ್ತೆ ಮತ್ತು ಸಮರ್ಪಕ ಚಿಕಿತ್ಸೆ ನೀಡುವ ಮೂಲಕ ಅನೇಕ ಜೀವಗಳನ್ನು ಉಳಿಸಲು ಈ ಕೇಂದ್ರ ಸಹಕಾರಿ ಆಗಲಿದೆ ಎಂದರು.

**ಮೇ.14-15ರಂದು ನಡೆಯೋ ಬ್ರಿಕ್ಸ್‌ನ ವಿದೇಶಾಂಗ ಮಂತ್ರಿ ಸಭೆಗಾಗಿ ಅಬ್ಬಾಸ್ ಅರಗ್ಚಿ ಭಾರತ ಪ್ರವಾಸ; ಭೇಟಿ ವೇಳೆ ಜೈಶಂಕರ್ ಜೊತೆ ಚರ್ಚೆ**

## ಜೆಸ್ಕಾಂ ಅಧಿಕಾರಿಗಳು ರೈತರಿಗೆ ಹಾಗೂ ಗ್ರಾಹಕರಿಗೆ ಯಾಕೆ ತೊಂದರೆ ಕೊಡುತ್ತಾರೆ?

ವಿದ್ಯುತ್ ಎನ್ನುವುದು ಇಂದಿನ ಜೀವನದ ಅವಿಭಾಜ್ಯ ಅಂಗವಾಗಿದೆ. ರೈತರ ಕೃಷಿ ಚಟುವಟಿಕೆಗಳಿಂದ ಹಿಡಿದು ಸಾಮಾನ್ಯ ಜನರ ದಿನನಿತ್ಯದ ಬದುಕಿನವರೆಗೆ ವಿದ್ಯುತ್ ಅತ್ಯಗತ್ಯವಾಗಿದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ, ವಿಶೇಷವಾಗಿ ರೈತರು ಹಾಗೂ ಸಾಮಾನ್ಯ ಗ್ರಾಹಕರು ವಿದ್ಯುತ್ ಇಲಾಖೆಯ ಕೆಲವು ಅಧಿಕಾರಿಗಳ ನಿರ್ಲಕ್ಷ್ಯ, ವಿಳಂಬ ಮತ್ತು ಬೇಜವಾಬ್ದಾರಿತನದಿಂದ ಸಾಕಷ್ಟು ತೊಂದರೆ ಅನುಭವಿಸುತ್ತಿರುವುದು ವಿಷಾದನೀಯ ಸಂಗತಿಯಾಗಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಬಹುತೇಕ ಕಡೆಗಳಲ್ಲಿ ಟ್ರಾನ್ಸ್‌ಫಾರ್ಮರ್ ಸುಟ್ಟರೆ ದಿನಗಳ ಕಾಲ ಬದಲಾವಣೆ ಆಗುವುದಿಲ್ಲ. ವಿದ್ಯುತ್ ತಂತಿಗಳು ತುಂಡಾದರೂ ಸರಿಪಡಿಸಲು ವಿಳಂಬ ಮಾಡಲಾಗುತ್ತದೆ. ರೈತರು ಪಂಪ್‌ಸೆಟ್ ಸಂಪರ್ಕಕ್ಕಾಗಿ ಕಚೇರಿಗಳಿಗೆ ಅಲೆದಾಡಬೇಕಾಗುತ್ತದೆ. ಕೆಲವೆಡೆ ಬಿಲ್‌ಗಳಲ್ಲಿ ತಪ್ಪುಗಳಿದ್ದರೂ ಸರಿಪಡಿಸಲು ಅಧಿಕಾರಿಗಳು ಮುಂದೆ ಬರುವುದಿಲ್ಲ. ಇದರಿಂದ ರೈತರು ಹಾಗೂ ಬಡ ಗ್ರಾಹಕರು ಮಾನಸಿಕವಾಗಿ ಹಾಗೂ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ.

ವಿದ್ಯುತ್ ಇಲಾಖೆ ಸಾರ್ವಜನಿಕರ ಸೇವೆಗಾಗಿ ಇರುವ ಸಂಸ್ಥೆಯಾಗಿದೆ. ಆದರೆ ಕೆಲವು ಅಧಿಕಾರಿಗಳು ಜನಸಾಮಾನ್ಯರ ಸಮಸ್ಯೆಗಳನ್ನು ಆಲಿಸುವ ಮನೋಭಾವ ತೋರಿಸದೇ ಅಧಿಕಾರದ ದರ್ಪದಲ್ಲಿ ವರ್ತಿಸುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ. ಗ್ರಾಮೀಣ ಭಾಗಗಳಲ್ಲಿ ವಿದ್ಯುತ್ ವ್ಯತ್ಯಯ ಹೆಚ್ಚಾದಾಗ ರೈತರ ಬೆಳೆಗಳಿಗೆ ಅಪಾರ ನಷ್ಟ ಉಂಟಾಗುತ್ತದೆ. ರಾತ್ರಿ ಸಮಯದಲ್ಲಿ ವಿದ್ಯುತ್ ಪೂರೈಕೆ ನೀಡುವುದರಿಂದ ರೈತರು ಜಮೀನಿನಲ್ಲಿ ಅಪಾಯದ ಪರಿಸ್ಥಿತಿಯಲ್ಲಿ ಕೆಲಸ ಮಾಡಬೇಕಾಗುತ್ತದೆ.

ಗ್ರಾಹಕರು ಸರಿಯಾದ ಸಮಯಕ್ಕೆ ಬಿಲ್ ಪಾವತಿಸಿದರೂ ಗುಣಮಟ್ಟದ ಸೇವೆ ದೊರೆಯದಿದ್ದರೆ ಜನರಲ್ಲಿ ಇಲಾಖೆಯ ಮೇಲಿನ ನಂಬಿಕೆ ಕುಸಿಯುತ್ತದೆ. ಕೆಲ ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಂಪೂರ್ಣ ಇಲಾಖೆಯ ಹೆಸರು ಹಾಳಾಗುತ್ತಿದೆ ಎಂಬುದನ್ನು ಸಂಬಂಧಪಟ್ಟವರು ಅರಿತುಕೊಳ್ಳಬೇಕು.

ಸರ್ಕಾರ ಹಾಗೂ ಹಿರಿಯ ಅಧಿಕಾರಿಗಳು ಈ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ, ಸಾರ್ವಜನಿಕರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳುವಂತೆ ಸಿಬ್ಬಂದಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆ ರೂಪಿಸಬೇಕು. ಟ್ರಾನ್ಸ್‌ಫಾರ್ಮರ್ ದುರಸ್ತಿ, ಹೊಸ ಸಂಪರ್ಕ, ಬಿಲ್ ಸಮಸ್ಯೆ ಸೇರಿದಂತೆ ಎಲ್ಲ ಸೇವೆಗಳು ಪಾರದರ್ಶಕವಾಗಿ ಮತ್ತು ವೇಗವಾಗಿ ನಡೆಯಬೇಕು. ರೈತರು ದೇಶದ ಬೆನ್ನೆಲುಬು. ಗ್ರಾಹಕರು ಇಲಾಖೆಯ ಜೀವಾಳ. ಇವರಿಗೆ ತೊಂದರೆ ನೀಡುವುದಲ್ಲ, ಉತ್ತಮ ಸೇವೆ ನೀಡುವುದೇ ಯಾವುದೇ ಸರ್ಕಾರಿ ಇಲಾಖೆಯ ಮುಖ್ಯ ಕರ್ತವ್ಯವಾಗಬೇಕು.

## ವಿದ್ಯುತ್ ವ್ಯತ್ಯಯ

**ಬೀದರ:** ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗ ಗು.ವಿ.ಸ.ಕಂ ವ್ಯಾಪ್ತಿಯಲ್ಲಿ ಬರುವ 220ಕೆ.ವಿ ಹುಮನಾಬಾದ ವಿದ್ಯುತ್ ಸ್ವೀಕರಣ ಕೇಂದ್ರದ 10ಎಂವಿಎ, 110/11ಕೆವಿ ಪರಿವರ್ತಕದ ತುರ್ತು ಕೆಲಸದ ಪ್ರಯುಕ್ತ ದಿನಾಂಕ: 15–05–2026 ರಂದು ಬೆಳಗ್ಗೆ 8 ರಿಂದ 1 ಗಂಟೆವರೆಗೆ 11ಕೆವಿ ಕೆ.ಐ.ಡಿ.ಬಿ, 11ಕೆವಿ ಮುಸ್ತಾಪುರ, 11ಕೆವಿ ಆರ್.ಟಿ.ಒ, 11ಕೆವಿ ನೇಕ್ಟರ ಮತ್ತು 11ಕೆವಿ ಇಂಡಸ್ಟ್ರೀಯಲ್ ಫೀಡರ ಮಾರ್ಗದ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುತ್ತದೆ. ಕಾರಣ ಗ್ರಾಹಕರು ಸಹಕರಿಸಬೇಕೆಂದು ಹುಮನಾಬಾದ 220ಕೆವಿ ಕಾರ್ಯಚರಣೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನ ಸಂಪರ್ಕ ಸಭೆ 16ರಂದು

**ಬೀದರ:** ಜೆಸ್ಕಾಂ ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗ ವ್ಯಾಪ್ತಿಯ ಹುಮನಾಬಾದ, ಮನ್ನಾಏಖೇಳ್ಳಿ ಹಾಗೂ ಬಸವಕಲ್ಯಾಣ ಉಪ ವಿಭಾಗಗಳಲ್ಲಿ ದಿನಾಂಕ: 16–05–2026 ರಂದು ಗ್ರಾಹಕರ ಕುಂದು ಕೊರತೆ ನಿವಾರಣಾ ಸಭೆಯನ್ನು ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಗುವಿಸಕಂನಿ ಹುಮನಾಬಾದ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಗಿರುತ್ತದೆ. ದಿನಾಂಕ: 16–05–2026 ರಂದು ಬೆಳಿಗ್ಗೆ 11 ರಿಂದ 1 ಗಂಟೆಯವರೆಗೆ ಹುಮನಾಬಾದ ಉಪ ವಿಭಾಗದ ದುಬಲಗುಂಡಿ ಶಾಖೆ ಕಛೇರಿಯಲ್ಲಿ, ಮನ್ನಾಏಖೇಳ್ಳಿ ಉಪ ವಿಭಾಗದ ನಿರ್ಣಾ ಶಾಖೆ ಕಛೇರಿಯಲ್ಲಿ ಹಾಗೂ ಬಸವಕಲ್ಯಾಣ ಉಪ ವಿಭಾಗದ ಮುಚಳಂಬ ಶಾಖೆ ಕಛೇರಿಯಲ್ಲಿ ಸಭೆಗಳು ಏರ್ಪಡಿಸಲಾಗಿರುತ್ತದೆ.ಆದಕಾರಣ ಸಾರ್ವಜನಿಕರು ಹಾಗೂ ಗುವಿಸಕಂನಿ ಗ್ರಾಹಕರು ಸಭೆಯಲ್ಲಿ ಉಪಸ್ಥಿತರಿದ್ದು, ಕುಂದು ಕೊರತೆಯ ಅರ್ಜಿಗಳನ್ನು ಸಲ್ಲಿಸುವಂತೆ ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರಿಂದ ಆಕ್ಷೇಪಣೆ ಆಹ್ವಾನ

**ಕಲಬುರಗಿ:** ಆಳಂದ ತಾಲೂಕಿನ ಆಳಂದ ಗ್ರಾಮದ ಸರ್ವೇ ನಂ. 233/3 ರಲ್ಲಿ 1495.56 ಚ.ಮೀಟರ್ ಅಳತೆಯ ಸಿ.ಎ.ನಿವೇಶನ ಇದ್ದು, ಈ ನಿವೇಶನವನ್ನು ತಾಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು ಆಳಂದ ಇವರಿಗೆ ಲೀಜ್ ಮೇಲೆ ಒದಗಿಸಲಾಗುತ್ತಿದ್ದು, ಈ ಕುರಿತು ಸಾರ್ವಜನಿಕರಿಂದ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ ಏಳು ದಿನದೊಳಗಾಗಿ ಆಳಂದ ಪುರಸಭೆ ಕಚೇರಿಯಲ್ಲಿ ಸಲ್ಲಿಸಬೇಕೆಂದು ಆಳಂದ ಪುರಸಭೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

## ಗ್ರಾಹಕರ ಕುಂದುಕೊರತೆ ಸಭೆ

**ಕಲಬುರಗಿ:** ಜೆಸ್ಕಾಂ ವಿಭಾಗೀಯ ಕಚೇರಿ–1ರ ವ್ಯಾಪ್ತಿಯಲ್ಲಿನ ಕಾರ್ಯ ಮತ್ತು ಪಾಲನೆ ಉಪ–ವಿಭಾಗದ ವ್ಯಾಪ್ತಿಯ ಕಲಬುರಗಿ ಗ್ರಾಮೀಣ, ಕಮಲಾಪುರ, ಆಳಂದ, ಕಡಗಂಚಿ, ಅಫಜಲಪೂರ ಹಾಗೂ ಚೌಡಾಪೂರ ಉಪ–ವಿಭಾಗಗಳ ಕಚೇರಿಗಳಲ್ಲಿ ಇದೇ ಮೇ 16 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಗೃಹಜ್ಯೋತಿ ಗ್ಯಾರಂಟಿ ಯೋಜನೆ ಅನುಷ್ಠಾನದ ಕುರಿತು ಹಾಗೂ ಗ್ರಾಹಕರ ಕುಂದುಕೊರತೆ ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ. ಈ ಸಭೆಯು ಕಲಬುರಗಿ ವೃತ್ತ ಕಚೇರಿಯ ಅಧೀಕ್ಷಕ ಅಭಿಯಂತರರು ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರವರ ಅಧ್ಯಕ್ಷತೆಯಲ್ಲಿ ಜರುಗಲಿದ್ದು, ಸಾರ್ವಜನಿಕರು ತಮ್ಮ ವಿದ್ಯುತ ಸ್ಥಾವರಗಳ ಸಂಬಂಧಿತ ಸಮಸ್ಯೆ ನಿವಾರಣೆಗಾಗಿ ಮೇಲ್ಕಂಡ ದಿನದಂದು ನಡೆಯುವ ಈ ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆಯಬೇಕೆಂದು ಅವರು ತಿಳಿಸಿದ್ದಾರೆ.

# ಮಕ್ಕಳನ್ನು ರಕ್ಷಿಸಲು ಹಮ್ಮಿಕೊಂಡ ಕಾರ್ಯಾಚರಣೆಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿ ಜಿಲ್ಲೆಯಲ್ಲಿ ಬಾಲ ಭಿಕ್ಷಾಟನೆ/ಬಾಲಕಾರ್ಮಿಕತೆಯಲ್ಲಿ ತೊಡಗಿರುವ ಮಕ್ಕಳ ರಕ್ಷಿಸಲು ಹಮ್ಮಿಕೊಳ್ಳಲಾದ ಕಾರ್ಯಾಚರಣೆಗೆ ಕಲಬುರಗಿ ದಕ್ಷಿಣ ವಿಭಾಗದ ಎ.ಸಿ.ಪಿ.ರಾದ ಶರಣಪ್ಪ ಅವರು ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಮಂಗಳವಾರ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.



2026–27ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆಯಂತೆ ಪ್ರತಿ ಮಾಹೆಯ 2ನೇ ಮಂಗಳವಾರ ಹಾಗೂ 4ನೇ ಮಂಗಳವಾರ ಜಿಲ್ಲಾ ಹಾಗೂ ತಾಲ್ಲೂಕುಗಳ ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದ್ದು, ಕಲಬುರಗಿ ನಗರದ ಪ್ರಮುಖ ಸಾರ್ವಜನಿಕ ಸ್ಥಳಗಳಾದ ಶ್ರೀ ಶರಣಬಸವೇಶ್ವರ ದೇವಸ್ಥಾನ, ಮಾರ್ಕೆಟ್, ಗಂಜ, ಹುಮನಾಬಾದ ರಿಂಗ್ ರೋಡ್, ಖರ್ಗೆ ಪೆಟ್ರೋಲ್ ಪಂಪ್, ತಿಮ್ಮಾಪುರ ಸರ್ಕಲ್, ರೈಲ್ವೆ ಸ್ಟೇಷನ್, ರಾಮಮಂದಿರ, ವಿವಿಧ ಸ್ಥಳಗಳಲ್ಲಿ ರಕ್ಷಣಾ ಕಾರ್ಯಾಚರಣೆ ಕೈಗೊಂಡು 4 ಜನ ಮಕ್ಕಳನ್ನು ರಕ್ಷಣೆ ಮಾಡಲಾಗಿದೆ. ಅದರಲ್ಲಿ 1 ಹೆಣ್ಣು ಮಗು ಭಿಕ್ಷಾಟನೆ, 1 ಗಂಡು ಮಗು ಬಾಲಕಾರ್ಮಿಕತೆ ಹಾಗೂ ಎರಡು (1 ಗಂಡು ಮತ್ತು 1 ಹೆಣ್ಣು) ಚಿಂದಿ ಆಯುವ ಮಕ್ಕಳು ಸೇರಿದಂತೆ ಒಟ್ಟು 4 ಜನ ಮಕ್ಕಳನ್ನು ರಕ್ಷಣೆ ಮಾಡಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರುಪಡಿಸಲಾಗಿದೆ.

ಈ ಮಕ್ಕಳನ್ನು ಪೋಷಣೆ ಮತ್ತು ರಕ್ಷಣೆಗಾಗಿ ಸರ್ಕಾರಿ ಬಾಲಕರ ಹಾಗೂ ಬಾಲಕಿಯರ ಬಾಲಮಂದಿರಗಳಲ್ಲಿ ದಾಖಲಿಸಲಾಗಿದೆ. ಇದೇ ರೀತಿ ಸಾರ್ವಜನಿಕ ಸ್ಥಳಗಳಲ್ಲಿ ಬಾಲ ಭಿಕ್ಷಾಟನೆ ಮತ್ತು ಬಾಲ ಕಾರ್ಮಿಕತೆ ಮಕ್ಕಳು ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ 1098/112 ಗೆ ಕರೆ ಮಾಡಿ ತಿಳಿಸಬೇಕು. ಕರೆ ಮಾಡಿದವರ ಮಾಹಿತಿಯು ಗೌಪ್ಯವಾಗಿಡಲಾಗುತ್ತದೆ.

ಕಲಬುರಗಿ ಜಿಲ್ಲೆಯಲ್ಲಿ ಬಾಲ ಭಿಕ್ಷಾಟನೆ ಹಾಗೂ ಬಾಲ ಕಾರ್ಮಿಕತೆಗೆ ಸಂಬಂಧಿಸಿದಂತೆ ಭಿಕ್ಷೆ ಬೇಡುವುದು, ಚಿಂದಿ ಆಯುವುದು, ಹೋಟೆಲ್‌ಗಳಲ್ಲಿ ಕೆಲಸ ಮಾಡುವುದು, ವಿವಿಧ ವಲಯಗಳಲ್ಲಿ ಮಕ್ಕಳು ಬಾಲ ಭಿಕ್ಷಾಟನೆ ಹಾಗೂ ಬಾಲ ಕಾರ್ಮಿಕತೆಯಲ್ಲಿ ಹೆಚ್ಚಾಗಿ ಕಂಡು ಬರುತ್ತಿರುವುದರಿಂದ ಜಿಲ್ಲಾಧಿಕಾರಿಗಳ ಆದೇಶದಂತೆ ಭಿಕ್ಷಾಟನೆಯನ್ನು ತಡೆಗಟ್ಟಲು ಹಾಗೂ ನಿಷೇಧಿಸಲು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿಗಳು ಹಾಗೂ ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಡಾನ್ ಬಾಸ್ಕೋ ಸಂಸ್ಥೆ, ಮಾರ್ಗದರ್ಶಿ ಸಂಸ್ಥೆ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲಾ ಮಟ್ಟದಲ್ಲಿ ಕಾರ್ಯಾಚರಣೆಯನ್ನು ಕೈಗೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ತಿಳಿಸಿದ್ದಾರೆ.

## ಜಿಲ್ಲಾ ರಂಗಭೂಮಿ ಸಾಹಿತ್ಯ ಕಾರ್ಯಕ್ರಮ 18ಕ್ಕೆ

• ಮಲ್ಲಮ್ಮ ನುಡಿ ವಾರ್ತೆ ಬೀದರ

ನಗರದ ಅಂಬೇಡ್ಕರ್ ವೃತ್ತದ ಸಮೀಪ ಇರುವ ಸವಿತಾ ಸಮಾಜ ಸಾಂಸ್ಕೃತಿಕ ಸಭಾಂಗಣದಲ್ಲಿ ಮೇ 18, 2026 ರಂದು ಬೆಳಿಗ್ಗೆ 10:30 ಗಂಟೆಗೆ 2025–26ನೇ ಸಾಲಿನ ಪರಿಶಿಷ್ಟ ಜಾತಿ ಸಂಘ ಸಂಸ್ಥೆಗಳ ಯೋಜನೆಯಡಿ ಜಿಲ್ಲಾ ಮಟ್ಟದ ರಂಗಭೂಮಿ ಕಲಾವಿದರ ಸಾಹಿತ್ಯ–ಸಾಂಸ್ಕೃತಿಕ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.



ಈ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಹಾಗೂ ಜೈ ಭವಾನಿ ರಂಗಭೂಮಿ ಕಲಾವಿದರ ಸಂಘ, ಚಿಟ್ಟಾ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಜಿಲ್ಲೆಯ ರಂಗಭೂಮಿ ಕಲಾವಿದರು, ಕವಿಗಳು ಹಾಗೂ ವಿವಿಧ ಸಾಂಸ್ಕೃತಿಕ ಕಲಾವಿದರು ಭಾಗವಹಿಸಲಿದ್ದಾರೆ.

ಜಿಲ್ಲೆಯ ಹಿರಿಯ ಸಾಹಿತಿಗಳಾದ ಡಾ. ಜಗನಾಥ್ ಹೆಬ್ಬಾಳೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಕರ್ನಾಟಕ ಪ್ರದೇಶ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಡಾ. ಸಂಜುಕುಮಾರ್ ಅತಿವಾಳೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಸಿದ್ರಾಮ ಶಿಂಧೆ ಭಾಗವಹಿಸಲಿದ್ದಾರೆ.

ಈ ಕುರಿತು ಜೈ ಭವಾನಿ ರಂಗಭೂಮಿ ಕಲಾವಿದರ ಸಂಘ ಬೀದರ ಅಧ್ಯಕ್ಷರಾದ ಶ್ರೀ ಶೇಷಾಪ್ಪ ಚಿಟ್ಟಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ಕೊಟ್ಟೂರು ಸ್ವಾಮಿಗಳ 31ನೇ ಪಟ್ಟಾಭಿಷೇಕ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಮೆ12 ನಗರದ ಪ್ರಸಿದ್ಧ ಕಲ್ಮಠದ ಅಧ್ಯಕ್ಷರಾದ ಶ್ರೀ ಡಾ. ಕೊಟ್ಟೂರು ಮಹಾ ಸ್ವಾಮಿಗಳು ಅವರ 31ನೇ ವರ್ಷದ ಪಟ್ಟಾಭಿಷೇಕ ಮಹೋತ್ಸವವು ಮಂಗಳವಾರ ನಗರದಲ್ಲಿ ಭಕ್ತಿ, ಭಾವ ಮತ್ತು ಸಂಭ್ರಮದ ವಾತಾವರಣದಲ್ಲಿ ವಿಜೃಂಭಣೆಯಿಂದ ಜರುಗಿತು.

ಈ ಶುಭ ಸಂದರ್ಭದಲ್ಲಿ ಗಂಗಾ ವತಿ ತಾಲೂಕು ವಾಲ್ಮೀಕಿ ಸಮುದಾ ಯದ ಅಧ್ಯಕ್ಷರಾದ ವಿ. ವೀರಭದ್ರಪ್ಪ ನಾಯಕ ಅವರ ನೇತೃತ್ವದಲ್ಲಿ ಸಮಾ ಜದ ಹಿರಿಯ ಮುಖಂಡರು ಮಹಾ ಸ್ವಾಮಿಗಳನ್ನು ಸನ್ಮಾನಿಸಿ ಹಾರ್ದಿಕ ಶುಭಾಶಯಗಳನ್ನು ಸಲ್ಲಿಸಿದರು.

ಈ ವೇಳೆ ಮಾತನಾಡಿದ ವೀರಭದ್ರಪ್ಪ ನಾಯಕ ಅವರು, "ಧಾರ್ಮಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಅಪಾರ ಸೇವೆ ಸಲ್ಲಿಸುತ್ತಾ ಸಮಾಜಕ್ಕೆ ಮಾರ್ಗದರ್ಶನ ನೀಡುತ್ತಿರುವ ಪೂಜ್ಯಶ್ರೀ ಡಾ. ಕೊಟ್ಟೂರು ಮಹಾಸ್ವಾಮಿಗಳು ಅವರು ಪಟ್ಟಾಭಿಷೇಕಗೊಂಡು 31 ವರ್ಷ ಪೂರೈಸಿರುವುದು ಸಮಾ ಜದ ಎಲ್ಲರಿಗೂ



ಹೆಮ್ಮೆಯ ಸಂಗತಿ. ಶ್ರೀಗಳ ಆಶೀರ್ವಾದ ಸದಾ ಸಮಾ ಜದ ಮೇಲೆ ಇರಲಿ. ಭಗವಂತನು ಅವರಿಗೆ ಆಯುರಾರೋಗ್ಯ ನೀಡಿ ಕಾಪಾಡಲಿ," ಎಂದು ಪ್ರಾರ್ಥಿಸಿದರು. ಮಹೋತ್ಸವದ ಅಂಗವಾಗಿ ಕಲ್ಮಠದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು, ಪೂಜೆ ಕಾರ್ಯಕ್ರಮಗಳು ದಿನವಿಡೀ ಜರುಗಲಿದ್ದು, ಭಕ್ತರು ಹಾಗೂ ನಗರದ ಗಣ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಾಯಕ ಸಮಾಜದ ಪ್ರಮುಖರಾದ ಹೊಸ ಮಲಿ ಮಲ್ಲೇಶಪ್ಪ ನಾಯಕ, ಬಸಪ್ಪ ನಾಯಕ, ಹನುಮಂತಪ್ಪ ಚೌಡ್ಕಿ, ಗುಡ್ಡೆಕಲ್ಲು ಮಾರೇಪ್ಪ ಸೇರಿದಂತೆ ಇತರರು ಇದ್ದರು.

# ಶಿವನಗರ ವಾಕಿಂಗ್ ಟ್ರ್ಯಾಕ್ ಕಾಮಗಾರಿ ವಿಳಂಬ: ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಬೀದರ

ನಗರದ ಶಿವನಗರ ಪ್ರದೇಶದಲ್ಲಿರುವ ಸಾರ್ವಜನಿಕರ ವಾಕಿಂಗ್ ಸ್ಥಳದ ಅಭಿವೃದ್ಧಿ ಕಾಮಗಾರಿ ವಿಳಂಬವಾಗುತ್ತಿರುವ ಹಿನ್ನೆಲೆ ಸ್ಥಳೀಯ ನಿವಾಸಿಗಳು ರಸ್ತೆ ತಡೆ ಎಚ್ಚರಿಕೆ ಈ ಕುರಿತು ಬುಧವಾರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶದ ಅಧಿಕಾರಿ ಅರುಣಕುಮಾರ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.



ಕಳೆದ ಹಲವು ತಿಂಗಳುಗಳಿಂದ ಚರಂಡಿ ಹಾಗೂ ಫುಟ್ಪಾತ್ ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದ್ದರೂ ಇದುವರೆಗೆ ಪೂರ್ಣಗೊಂಡಿಲ್ಲ. ಇದರಿಂದ ಶಿವನಗರ ಬಡಾವಣೆಯ ಸಾರ್ವಜನಿಕರು, ಹಿರಿಯ ನಾಗರಿಕರು ಹಾಗೂ ಮಹಿಳೆಯರು ಪ್ರತಿದಿನ ವಾಕಿಂಗ್ ಮಾಡಲು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ನಿವಾಸಿಗಳು ದೂರಿದ್ದಾರೆ.

ಮಹಾನಗರ ಪಾಲಿಕೆ ಹಾಗೂ ಜಿಲ್ಲಾಡಳಿತವು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಜೊತೆಗೆ ಕಾಮಗಾರಿಯಲ್ಲಿ ನಿರ್ಲಕ್ಷ್ಯ ತೋರಿದ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಇನ್ನೂ ಒಂದು ವಾರದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಶಿವನಗರ ಬಡಾವಣೆಯ ಹಿರಿಯರು ಹಾಗೂ ನಿವಾಸಿಗಳು ಆಗ್ರಹಿಸಿದ್ದಾರೆ, ಇಲ್ಲವಾದಲ್ಲಿ ಶಿವನಗರ, ಗುರುನಾನಕ ನಗರ, ವೈಷ್ಣವಿ ಕಾಲೋನಿ ಹಾಗೂ ಭವಾನಿ ಕಾಲೋನಿಯ ನಿವಾಸಿಗಳು ಶಿವನಗರ ಸಿಗ್ನಲ್ ಬಳಿ ರಸ್ತೆ ತಡೆ (ರಾಸ್ತಾ ರೋಕೊ) ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಆದ್ದರಿಂದ ಮಹಾನಗರ ಪಾಲಿಕೆ ಹಾಗೂ ಜಿಲ್ಲಾಡಳಿತವು ತಕ್ಷಣ ಸ್ಪಂದಿಸಿ ಕಾಮಗಾರಿಯನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕೆಂದು ಸ್ಥಳೀಯ ನಿವಾಸಿಗಳು ಮನವಿ ಪತ್ರ ನೀಡಿದ್ದಾರೆ.

ಈ ಸಂದರ್ಭದಲ್ಲಿ ಅಶೋಕ ಕುಮಾರ ಕರಂಜಿ, ಪ್ರಭುಶೇಟಿ ಮುಲ್ಗೆ, ಬಸವರಾಜ ನೇಕಾರ, ರವಿ ಕೀರಣ ಪಬ್ಬಾ, ಮಲ್ಲಿಕಾರ್ಜುನ ಚೇಲುವ, ಅನೀಲ್ ಬೆಲ್ದಾರ್, ಮನೋಹರ ಪಾಟೀಲ್ ಶ್ರೀಮಂಡಲ್, ರಾಜೇಂದ್ರ ಚಿಂತಲ್ಗೆರಾ, ಎಸ್.ಎನ್. ಬಿರಾದರ, ವೀರಭದ್ರಪ್ಪ ಭೊಯಾ, ಅಶೋಕ ಅಂಬಾಟೆ, ಸಂಜೀವ ರೆಡ್ಡಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# 185ನೇ ಅನುಭವ ಮಂಟಪ ತಿಂಗಳ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ನಗರದ ಡಾ. ಚನ್ನಬಸವಪಟ್ಟದೇವರ ಪ್ರಸಾದನಿಲಯದಲ್ಲಿ ದಿನಾಂಕ 11/05/2026 ರಂದು ಸಂಜೆ 6:30 ಗಂಟೆಗೆ 185 ನೇ ತಿಂಗಳ ಅನುಭವ ಮಂಟಪ ಕಾರ್ಯಕ್ರಮ, ಡಾ. ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಹಾಗೂ ಡಾ. ತೋಂಟದ ಸಿದ್ಧಲಿಂಗ ಪ್ರೌಢ ಶಾಲೆಯ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಗ್ರಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಜರುಗಿತು.



ಸಾನ್ನಿಧ್ಯವಹಿಸಿರುವ ಪರಮ ಪೂಜ್ಯ ನಾಡೋಜ ಶ್ರೀ ಡಾ. ಬಸವಲಿಂಗ ಪಟ್ಟದ್ದೇವರು ಆಶೀರ್ವಚನ ನೀಡುತ್ತ, ಮಕ್ಕಳು ಪ್ರೀತಿ, ಗೌರವ, ಉತ್ತಮ ಸಂಸ್ಕೃತಿ ಮತ್ತು ಸಂಸ್ಕಾರದಿಂದ ಕಷ್ಟಪಟ್ಟು ಅಧ್ಯಯನ ಮಾಡಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡುವಂತೆ ತಮ್ಮ ಪ್ರತಿಭೆಯ ಬೆಳಕು ಬೀರುವಂತೆ ಬದುಕು ಸಾರ್ಥಕ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.

ಅಕ್ಕಮಹಾದೇವಿ ಮಹಿಳಾ ಕಾಲೇಜಿನ ನಿವೃತ್ತ ಪ್ರಾಚಾರ್ಯ ಹಾಗೂ ದಾಸೋಹಿಗಳಾದ ಪ್ರೊ. ಲೀಲಾವತಿ ಚಾಕೊತೆ ರವರು ಬಸವ ಗುರುವಿನ ಪೂಜೆ ಸಲ್ಲಿಸಿ, ದೀಪ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತ, ಬಸವಾದಿ ಶರಣರು ಸತ್ಯದ ಆರಾಧಕರಾಗಿದ್ದು, ಸತ್ಯವೇ ದೇವರೆಂದು ಮನಗಂಡಿದ್ದರು. ಬಸವಣ್ಣನವರು ಹೇಳುವಂತೆ, ಸತ್ಯವೇ ದೇವಲೋಕ, ಮಿಥ್ಯವೇ ಮರ್ತ್ಯ ಲೋಕ ಎಂದು ಸಾರಿದ್ದಾರೆ. ಸತ್ಯದಲ್ಲಿ ಅದ್ಭುತ ಶಕ್ತಿ ಇದೆ. ಲಿಂಗೈಕ್ಯ ಡಾ. ಚನ್ನಬಸವ ಪಟ್ಟದ್ದೇವರು ಬಸವಣ್ಣನವರ ತತ್ವವಾದ ಕಾಯಕವೇ ಕೈಲಾಸ ಎಂಬುವುದನ್ನು ತಮ್ಮ ಉಸಿರಾಗಿಸಿಕೊಂಡು ಸಮಾಜದಲ್ಲಿಯ ಜನರ ನೋವನ್ನು ಅರಿತು ಅದಕ್ಕೆ ಸ್ಪಂದಿಸಿದ್ದಾರೆ. ಅವರೊಬ್ಬರು ಕನ್ನಡದ ಗುರುಗಳಾಗಿದ್ದು, ನಡೆದಾಡುವ ದೇವರೆಂದೆ ಮನೆ–ಮನಕ್ಕೆ ಮಾತಾಗಿದ್ದಾರೆ ಎಂದು ತಿಳಿಸಿದರು. ಹೀರೆಮಠ ಸಂಸ್ಥಾನದ ಪೀಠಾಧಿಪತಿಯಾದ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು.

ಕರ್ನಾಟಕ ಸಾಹಿತ್ಯ ಸಂಘ ಬೀದರಿನ ಅಧ್ಯಕ್ಷರಾದ ಡಾ. ಜಗನ್ನಾಥ ಹೆಬ್ಬಾಳೆ ರವರು ಪೂಜ್ಯರ ಅಮೃತ ಮಹೋತ್ಸವದ ಕುರಿತು ಅನುಭಾವ ಮಂಡಿಸುತ್ತ, ಡಾ. ಬಸವಲಿಂಗ ಪಟ್ಟದ್ದೇವರ 75ನೇ ಹುಟ್ಟು ಹಬ್ಬವನ್ನು ಅಮೃತ ಮಹೋತ್ಸವವನ್ನಾಗಿ 2026ನೇ ಸಾಲಿನಲ್ಲಿ ನಡೆದಿದ್ದು ಸಂತಸದ ವಿಷಯವಾಗಿದೆ, ಅವರು ಶೈಕ್ಷಣಿಕ, ಆಧ್ಯಾತ್ಮಿಕ, ಸಾಂಸ್ಕೃತಿಕ, ಸಮಾಜ ಸೇವೆ ಮಾಡುತ್ತಿರುವುದು ಮಠಾಧೀಶರಿಗೆ ಮಾದರಿಯಾಗಿದ್ದಾರೆ. ಮುಂದುವರೆದು ಮಾತನಾಡುತ್ತ, ಹೀರೆಮಠ ಸಂಸ್ಥಾನ ಪರಂಪರೆ ನೋಡಿದರೆ ಡಾ. ಚನ್ನಬಸವ ಪಟ್ಟದ್ದೇವರು ಕರ್ನಾಟಕ ಏಕೀಕರಣಕ್ಕಾಗಿ ಬಹು ದೊಡ್ಡ ಚಳುವಳಿ ಮಾಡಿದ್ದಾರೆ, ನಿಜಾಮನ ದುರಾಡಳಿತದಲ್ಲಿ ಕನ್ನಡದ ಕಲಿಕೆಯಲ್ಲಿ ಮಕ್ಕಳಿಗೆ ಹೊರಗೆ ಉರ್ದು ನಾಮಫಲಕ ಹಾಕಿ ಕನ್ನಡ ಭಾಷೆಯನ್ನು ಕಲಿಸಿದ್ದು ಸರ್ವಶ್ರೇಷ್ಠ ಸೇವೆಯಾಗಿದ್ದು, ಬಡ ಮಕ್ಕಳಿಗೆ ಅನ್ನ, ಶಿಕ್ಷಣ, ಆಶ್ರಯ ನೀಡಿ ಅವರ ಜೀವನ ಕಟ್ಟಿಕೊಟ್ಟಿದ್ದಾರೆ. ಅದರಂತೆ ಜಾತಿ, ಮತ ಭೇದ ಮಾಡಲಾರದೆ ಕೆಳಜಾತಿಯವರಿಗೆ ಲಿಂಗದೀಕ್ಷೆಯನ್ನು ನೀಡಿ ಸಮಾನತೆಯನ್ನು ತಂದು–ಕೊಟ್ಟ ಹರಿಕಾರರಾಗಿದ್ದಾರೆ. ಆ ಪರಂಪರೆಯಲ್ಲಿ ಪೂಜ್ಯರ ಮಾರ್ಗದರ್ಶನದಂತೆ ಡಾ. ಬಸವಲಿಂಗ ಪಟ್ಟದ್ದೇವರು ಮತ್ತು ಗುರುಬಸವ ಪಟ್ಟದ್ದೇವರು ಪ್ರಸ್ತುತ ಸಮಯದಲ್ಲಿ ಸೇವೆ ಮಾಡುತ್ತಿದ್ದಾರೆ. ಡಾ. ಬಸವಲಿಂಗ ಪಟ್ಟದ್ದೇವರು ಅಂತರ್ಜಾತಿ ವಿವಾಹ, ಅಂಗವಿಕಲರ, ಅಬಲೆಯರ, ಅನಾಥ ಮಕ್ಕಳ, ಹಸಿದವರಿಗೆ ಅನ್ನ, ಶಿಕ್ಷಣ ಕೊಡುವ ಮಾತೃ ಹೃದಯವಾಗಿದ್ದಾರೆ. ಇವರು 1992 ರಲ್ಲಿ ಗುರುಕುಲ ಸ್ಥಾಪನೆ ಮಾಡುವುದರ ಮೂಲಕ ಮೌಲಿಕ ಶಿಕ್ಷಣ ಕೊಡುತ್ತಿದ್ದಾರೆ. ಗುರುಕುಲ ಶಿಕ್ಷಣದ ಅಡಿಯಲ್ಲಿ 60 ಅಂಗ ಸಂಸ್ಥೆಗಳಿದ್ದು, 20 ಸಾವಿರ ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. 2 ಸಾವಿರ ಬೋಧಕರು ಸೇವೆ ಸಲ್ಲಿಸುತ್ತಿದ್ದಾರೆ. ಇಲ್ಲಿ ಕಲಿತ ಮಕ್ಕಳು ಐ.ಐ.ಟಿ. ವೈದ್ಯರು, ವಿಜ್ಞಾನಿಗಳಾಗಿ ಹೊರಹೊಮ್ಮುತ್ತಿದ್ದಾರೆ. ಪೂಜ್ಯರಿಗೆ ಬಸವಶ್ರೀ, ನಾಡೋಜ ಪ್ರಶಸ್ತಿ ಅನೇಕ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ. ವಚನ ವಿಶ್ವವಿದ್ಯಾಲಯ ಪರಿಕಲ್ಪನೆ, ಅನುಭವ ಮಂಟಪ ಸ್ಥಾಪನೆ ಇವರ ದೂರದೃಷ್ಠಿಯಾಗಿದೆ. ಇವರೊಬ್ಬರು ಧರ್ಮ ಸಂಸ್ಕೃತಿಯ ರಾಯಭಾರಿಗಳಾಗಿದ್ದಾರೆ ಮತ್ತು ಕನ್ನಡದ ಸಂತರಾಗಿದ್ದಾರೆ ಎಂದು ವಿಷಯ ಪ್ರತಿಪಾದಿಸಿದರು. ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯದ ಸಂಚಾಲಕರಾದ ಸುವರ್ಣಾ ಚಿಮಕೋಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಅನುಭವನ ಮಂಟಪ ಸಂಸ್ಕೃತಿ ವಿದ್ಯಾಲಯದ ವಿದ್ಯಾರ್ಥಿನಿಯರಾದ ಪ್ರತಿಜ್ಞಾ ಮತ್ತು ಅರ್ಪಿತಾ ರವರು ವಚನ ಚಿಂತನೆ ಮತ್ತು ಪೂಜ್ಯರ ಕುರಿತು ಮಾತನಾಡಿದರು.

ಇದೇ ಸಂದರ್ಭದಲ್ಲಿ ಡಾ. ತೋಂಟದ ಸಿದ್ಧಲಿಂಗ ಪ್ರೌಢ ಶಾಲೆಯ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅಗ್ರಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಪೂಜ್ಯರಿಂದ ಗೌರವ ಸನ್ಮಾನ ಮಾಡಲಾಯಿತು. ಡಾ. ದೇವಕಿ ನಾಗೋರೆ ರವರು ರಾವಬಹದ್ದೂರ್ ಮತ್ತು ತೊಂಟದ ಸಿದ್ಧಲಿಂಗ ಪ್ರೌಢ ಶಾಲೆಯ ಪ್ರವೇಶ ಕರಪತ್ರ ಬಿಡುಗಡೆ ಮಾಡಿದರು. ಪರಮ ಪೂಜ್ಯ ನಾಡೋಜ ಶ್ರೀ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ಯ ಪೂಜ್ಯರನ್ನು ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯ ಮತ್ತು ಡಾ. ಚನ್ನಬಸವ ಪಟ್ಟದ್ದೇವರ ಪ್ರಸಾದ ನಿಲಯ ಹಾಗೂ ಚನ್ನಬಸವ ಪಟ್ಟದ್ದೇವರ ಗೆಳೆಯರ ಬಳಗದ ವತಿಯಿಂದ ವಿಶೇಷವಾಗಿ ಗೌರವ ಸನ್ಮಾನ ಮಾಡಲಾಯಿತು. ಚನ್ನಬಸಪ್ಪ ನೌಬಾದೆ, ಕುಮಾರಿ ಮಾಣಿಕೇಶ್ವರಿ ಮತ್ತು ಗುರುಚರಣ ರವರಿಂದ ವಚನ ಗಾಯನ ನಡೆಸಲಾಯಿತು. ಪ್ರವೀಣ ಜಿರ್ಗೆ ಸ್ವಾಗತ ಕೋರಿದರೆ, ಕು. ನೇಹಾ ವೀರಶೆಟ್ಟಿ ನಿರೂಪಿಸಿದರೆ, ವೈಷ್ಣವಿ ಬಸವರಾಜ ವಂದಿಸಿದರು. ಪ್ರಮುಖರಾದ ಶ್ರೀಕಾಂತ ಬಿರಾದಾರ, ಪ್ರೊ. ಸಂಗ್ರಾಮ ಎಂಗಳೆ, ಭೀಮಾಶಂಕರ ಬಿರಾದಾರ, ಸಂತೋಷ ಮಂಗಳೂರೆ ಭಾಗವಹಿಸಿದ್ದರು.

# ಬಳ್ಳಾರಿ ಕಂಟೋನ್ಮೆಂಟ್ ರೈಲ್ವೆ ಸ್ಟೇಷನ್ ಬಳಿ ಗೇಟ್ ಜಾಮ್ ಗಂಟೆಗಟ್ಲೆ ಟ್ರಾಫಿಕ್ ಜಾಮ್:ಪ್ರಯಾಣಿಕರ ಪರದಾಟ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಂಟೋನ್ಮೆಂಟ್ ರೈಲ್ವೆ ಸ್ಟೇಷನ್ ಬಳಿ ಗೇಟ್ ಜಾಮ್ ಆಗಿ ಪ್ರಯಾಣಿಕರು, ಸ್ಥಳೀಯ ವಾಹನ ಸವಾರರು ಪರದಾಡುವ ಸ್ಥಿತಿ ರಾತ್ರಿ 8: ಗಂಟೆ ಸಮಯದಲ್ಲಿ ನಡುಗಿದೆ. ಟ್ರಾಫಿಕ್ ಜಾಮ್ ಆಗಿ ಗಂಟೆಗಳು ಕಳೆದರೂ ಯಾರು ಸಹ ಪ್ರಯಾಣಕರಿಗೆ ವಾಹನ ದಾರಿಗೆ ಹಾಗೂ ಅಂಬುಲೆನ್ಸ್ ಗಳಿಗೆ ಆಗುವ ಸಂಚಾರ ಸಮಸ್ಯೆಗಳನ್ನು ಪರಿಹರಿಸುವ ಯಾರು ಇಲ್ಲವೆಂದು ಪ್ರಯಣ–ಕರು ಆಕ್ರೋಶ ವ್ಯಕ್ತವಾಗುತ್ತಿದ್ದಾರೆ. ಬೀನ್ಸ್ ಆಸ್ಪತ್ರೆಯ ಕಡೆ ಯಿಂದ ಹೊಸಪೇಟೆ ರಸ್ತೆಯ ಕಡೆ ಹೋಗುವ ಪ್ರಯಾಣಕರು ತುಂಬಾ ಪರದಾಡುವ ಸಮಸ್ಯೆ ಆಗಿದೆ . ವೀರಶೈವ ಕಾಲೇಜು ಕಾಂಪೌಂಡ್ ಪಕ್ಕದಲ್ಲಿ ಒಂದು ಕಚ್ಚ ರಸ್ತೆ ಇದೆ ಆ ರಸ್ತೆಯಲ್ಲಿ ಪ್ರಯಾಣಿಕರು ಸಂಚಾರ ಮಾಡುವುದಕ್ಕೆ ಹೋದರೆ ಆ ರಸ್ತೆ ಮಾರ್ಗದಲ್ಲಿ ಲೈಟಿನ ಸಮಸ್ಯೆ ಹಾಗೂ ಕುಂಡಿಗಳ ಬಿದ್ದು ಸಂಪೂರ್ಣ ದುರಸ್ತೆಯಲ್ಲಿ ಇದೆ. ಅನೇಕ ಜನ ಅದೇ ರಸ್ತೆಯಲ್ಲಿ ಸಂಚಾರ ಹೋಗಿ ಗಂಟೆಗಟ್ಲೆ ಟ್ರಾಫಿಕ್ ಜಾಮ್ ಆಗಿ ಪ್ರಯಾಣಿಕರು. ತುಂಬಾ ತೊಂದರೆನಲ್ಲಿ ಸಿಲುಕಿಕೊಂಡಿದ್ದಾರೆ. ಅನೇಕ ಪ್ರಯಾಣಕರು ಬಳ್ಳಾರಿ ಟ್ರಾಫಿಕ್ ಅಧಿಕಾರಿಗಳಿಗೆ ಈ ಸಮಸ್ಯೆ ಬಗ್ಗೆ ತಿಳಿಸಿದರೆ ಆ ಸಮಸ್ಯೆ ರೈಲ್ವೆ ಇಲಾಖೆ ಅಧಿಕಾರಿಗಳು ಪರಿಹರಿಸಬೇಕೆಂದು ಟ್ರಾಫಿಕ್ ಅಧಿಕಾರಿಗಳು ಉತ್ತರ ಕೊಡುತ್ತಿರುವುದು ಕೇಳಿ ಬರುತ್ತದೆ. ರೈಲ್ವೆ ಗೇಟ್ ಬಳಿ ನಿರಂತರ ಟ್ರಾಫಿಕ್ ಜಾಮ್ ಸಮಸ್ಯೆಯಿಂದ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ಬೆಳಿಗ್ಗೆ ಮತ್ತು ಸಂಜೆ ಪೀಕ್ ಅವಧಿಯಲ್ಲಿ



ವಾಹನಗಳ ದಟ್ಟಣೆ ಹೆಚ್ಚಾಗಿ, ಶಾಲಾ ಮಕ್ಕಳು, ಉದ್ಯೋಗಿಗಳು ಮತ್ತು ಆಂಬುಲೆನ್ಸ್‌ಗಳಿಗೂ ತೊಂದರೆ ಉಂಟಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಸ್ಥಳೀಯರ ಪ್ರಕಾರ, ರೈಲು ಸಂಚಾರ ಹೆಚ್ಚಾದಾಗ ಗೇಟ್ ದೀರ್ಘ ಸಮಯ ಮುಚ್ಚಿರುತ್ತದೆ. ಇದರಿಂದ ಎರಡೂ ಬದಿಗಳಲ್ಲಿ ಕಿಲೋಮೀಟರ್‌ಗಳಷ್ಟು ವಾಹನ ಸರತಿ ನಿರ್ಮಾಣವಾಗುತ್ತದೆ. ಬೈಕ್ ಸವಾರರು ಹಾಗೂ ಆಟೋ ಚಾಲಕರು ಪರ್ಯಾಯ ಸಣ್ಣ ರಸ್ತೆಗಳನ್ನು ಬಳಸಲು ಯತ್ನಿಸಿದರೂ ಅಲ್ಲಿ ಕೂಡ ಟ್ರಾಫಿಕ್ ಗೊಂದಲ ಹೆಚ್ಚುತ್ತಿದೆ.

ಇತ್ತೀಚಿನ ದಿನಗಳಲ್ಲಿ ಬಳ್ಳಾರಿ ಭಾಗದಲ್ಲಿ ಟ್ರಾಫಿಕ್ ಸಮಸ್ಯೆ ಮತ್ತು ರಸ್ತೆ ಒತ್ತಡ ಹೆಚ್ಚುತ್ತಿರುವ ಕುರಿತು ಸಾಮಾಜಿಕ ಜಾಲತಾಣಗಳಲ್ಲೂ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇನ್ನೊಂದೆಡೆ, ರೈಲು ಸಂಚಾರ ಹೆಚ್ಚುತ್ತಿರುವ ಹಿನ್ನೆಲೆ ಈಗಿನ ರೈಲ್ವೆ ಗೇಟ್ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಮೇಲ್ಸೇತುವೆ ಅಥವಾ ಅಂಡರ್‌ಪಾಸ್ ಅಗತ್ಯ ಎಂಬ ಒತ್ತಾಯ ಹೆಚ್ಚಾಗಿದೆ. ಸಾರ್ವಜನಿಕರು ಮಾಡಿರುವ ಪ್ರಮುಖ ಬೇಡಿಕೆಗಳು:ರೈಲ್ವೆಗೇಟ್ ಬಳಿ ತಕ್ಷಣ ಫ್ಲೈಓವರ್ ನಿರ್ಮಾಣಟ್ರಾಫಿಕ್ ಪೊಲೀಸ್ ಸಿಬ್ಬಂದಿ ಹೆಚ್ಚಳಆಂಬುಲೆನ್ಸ್ ಮತ್ತು ಶಾಲಾ ವಾಹನಗಳಿಗೆ ವಿಶೇಷ ಮಾರ್ಗಸ್ಮಾರ್ಟ್ ಸಿಗ್ನಲ್ ವ್ಯವಸ್ಥೆ ಜಾರಿಪರ್ಯಾಯ ರಸ್ತೆ ಅಭಿವೃದ್ಧಿ

ಸ್ಥಳೀಯ ವ್ಯಾಪಾರಿಗಳ ಪ್ರಕಾರ, ಟ್ರಾಫಿಕ್ ಜಾಮ್‌ನಿಂದ ಅಂಗಡಿಗಳಿಗೆ ಗ್ರಾಹಕರ ಆಗಮನವೂ ಕಡಿಮೆಯಾಗಿದೆ. ಬಿಸಿಲಿನ ನಡುವೆ ವಾಹನಗಳಲ್ಲಿ ಸಿಲುಕಿಕೊಂಡು ಜನರು ಗಂಟೆಗಳ ಕಾಲ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಕುರಿತು ನಾಗರಿಕ ಸಂಘಟನೆಗಳು ಜಿಲ್ಲಾಡಳಿತ ಹಾಗೂ ರೈಲ್ವೆ ಇಲಾಖೆಗೆ ಹಲವು ಬಾರಿ ಮನವಿ ಸಲ್ಲಿಸಿದ್ದು, ಶೀಘ್ರದಲ್ಲೇ ಸಭೆ ನಡೆಸಿ ಪರಿಹಾರ ಕ್ರಮ ಘೋಷಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

# ಸಾಮಾಜಿಕ ಜಾಲತಾಣ ಪುಸ್ತಕ ಮಾರುಕಟ್ಟೆಯ ಬಾಗಿಲು




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಾಮಾಜಿಕ ಜಾಲತಾಣಗಳು ಪುಸ್ತಕ ಮಾರಾಟಕ್ಕೆ ಮಾರುಕಟ್ಟೆಯ ಹೊಸ ಬಾಗಿಲನ್ನು ತೆರೆದು ನೆರವಾಗಿವೆ. ಪ್ರಕಾಶಕರು ಪುಸ್ತಕಗಳನ್ನು ಖರೀದಿಸುವ ಓದುಗರಿಲ್ಲ ಎಂದು ನಿರಾಶರಾಗುವ ಅಗತ್ಯವಿಲ್ಲ ಎಂದು ಕಾವ್ಯ ಮನೆ ಪ್ರಕಾಶನದ ಚಾಂದ್ ಕವಿ ಚಂದ್ರ ಅಭಿಪ್ರಾಯಪಟ್ಟರು.

ನಗರದ ಜ್ಞಾನಾಮೃತ ಕಾಲೇಜಿನಲ್ಲಿ ಆಯೋಜಿಸಿದ್ದ ಸಂಗಂ ಸಾಹಿತ್ಯ ಪುರಸ್ಕಾರ ಪ್ರದಾನ ಸಮಾರಂಭದ ಎರಡನೇ ದಿನ ನಡೆದ ' ಯುವ ಪ್ರಕಾಶಕರ ತವಕ ತಲ್ಲಣ ' ಗೋಷ್ಠಿಯಲ್ಲಿ ಮಾತನಾಡಿದ ಅವರು ಸರಕಾರವೇ ಪುಸ್ತಕಗಳನ್ನು ಖರೀದಿಸುವ ಆಲೋಚನೆಯನ್ನು ಕೈ ಬಿಟ್ಟು ಪುಸ್ತಕ ಮಾರಾಟಕ್ಕಾಗಿ ನಮ್ಮದೇ ಆದ ಒಂದು ಜಾಲವನ್ನು ಸರಿಯಾದ ನೆಲೆಯಲ್ಲಿ ಸೃಷ್ಟಿಸಿಕೊಳ್ಳುವುದು ಈ ಹೊತ್ತಿನ ಕಾಲದ ಅಗತ್ಯ ಎಂದರು.

ನಮ್ಮ ಪ್ರಕಾಶನದಿಂದ ಹೊಸ ಪುಸ್ತಕಕ್ಕೆ ಸಂಬಂಧಿಸಿದ ರೀಲುಗಳನ್ನು ಮಾಡಿ ಸಾಮಾಜಿಕ ಜಾಲತಾಣದಲ್ಲಿ ಬಿಟ್ಟಾಗ ಅದನ್ನು ನೋಡಿದ ಓದುಗರು ಪುಸ್ತಕ ಖರೀದಿಸಲು ಮುಂದಾಗುತ್ತಾರೆ.ಈ ಪ್ರಯತ್ನದಲ್ಲಿ ನಾವು ಯಶಸ್ವಿಯಾಗಿದ್ದೇವೆ ಎಂದು ಸಂತಸ ವ್ಯಕ್ತಪಡಿಸಿದರು

ಕೌದಿ ಪ್ರಕಾಶನದ ಮಮತಾ ಮಾತನಾಡಿ ನಮ್ಮ ಪ್ರಕಾಶನ ಬಹಳ ಮುಖ್ಯವಾಗಿ ತಳ ಸಮುದಾಯಗಳ ತಲ್ಲಣಗಳನ್ನು ಓದುಗರಿಗೆ ಪರಿಚಯಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ. ಅದರಲ್ಲೂ ಹೊಸ ಲೇಖಕರಿಗೆ ಪ್ರೋತ್ಸಾಹ ಕೊಡುವ ಹೊತ್ತಾಸೆ ನಮ್ಮದಾಗಿದೆ ಎಂದು ತಿಳಿಸಿದರು.

ಸಂಕಥನ ಪ್ರಕಾಶನದ ರಾಜೇಂದ್ರ ಪ್ರಸಾದ್ ಮಾತನಾಡಿ ನಮ್ಮ ಪುಸ್ತಕ ಯಾರು ಪ್ರಕಟಿಸದೇ ಇರುವ ಸಂದರ್ಭದಲ್ಲಿ ಅನಿವಾರ್ಯವಾಗಿ ನಾವು ಪ್ರಕಾಶಕರಾಗಿ ರೂಪುಗೊಂಡದ್ದು. ಇಂದು ಪ್ರಕಾಶಕರು ಹಲವು ಬಗೆಯ ಬಿಕ್ಕಟ್ಟುಗಳನ್ನು ಎದುರಿಸುತ್ತಿದ್ದಾರೆ. ಸರಕಾರ ಪ್ರಕಾಶಕರು ಸಂಕಷ್ಟಗಳನ್ನು ಅರ್ಥ ಮಾಡಿಕೊಂಡು ಪುಸ್ತಕ ಖರೀದಿಗೆ ಮುಂದಾಗಬೇಕು ಎಂದು ಒತ್ತಾಯಿಸಿದರು. ಮಿಂಚುಳ್ಳಿ ಪ್ರಕಾಶನದ ಸೂರ್ಯಕೀರ್ತಿ ಮಾತನಾಡಿ ನಾವು ನಮ್ಮದೇ ಆದ ಗೆಳೆಯರ ಬಳಗವನ್ನು ಕಟ್ಟಿಕೊಂಡಿದ್ದೇವೆ. ಆ ಬಳಗದ ಮೂಲಕ ಪುಸ್ತಕ ಮಾರಾಟವನ್ನು ಸಮರ್ಥವಾಗಿ ನಿರ್ವಹಿಸುತ್ತಿದ್ದೇವೆ ಎಂದರು.

ವೇದಿಕೆಯ ಮೇಲೆ ತೆಲುಗು ಪ್ರಕಾಶಕರಾದ ಶ್ರೀದಿವ್ಯ, ಮಲ್ಲಿಕಾರ್ಜುನ್, ಶೇಷು ಕೊರ್ಲ ಪಾಟಿ ಇದ್ದರು. ಸಂವಾದದಲ್ಲಿ ಜಿ ಪಿ ಬಸವರಾಜ್, ಓ ಎಲ್ ನಾಗಭೂಷಣಸ್ವಾಮಿ, ಮಮತಾ ಅರಸಿಕೆರೆ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಡಾ. ಯೋಗಾನಂದರೆಡ್ಡಿ, ಡಾ. ಅರವಿಂದ ಪಟೇಲ್, ಅಮರೇಶ ನುಗಡೋಣಿ, ಪಲ್ಲವ ವೆಂಕಟೇಶ, ದಸ್ತಗೀರಸಾಬ್ ದಿನ್ನಿ, ಟಿ. ಎಸ್. ಗೊರವರ, ಶಿವಲಿಂಗಪ್ಪ ಹಂದಿಹಾಳು, ವೀರೇಂದ್ರ ರಾವಿಹಾಳು, ಪಿ. ಆರ್. ವೆಂಕಟೇಶ ಉಪಸ್ಥಿತರಿದ್ದರು.

# ಜೀನ್ಸ್ ಪಾರ್ಕ್ ನಿರ್ಮಾಣದ ಹೆಸರಲ್ಲಿ ರೈತರ ಭೂಮಿ ಕಬಳಿಕೆ ಯತ್ನ?

## ಕೆಐಎಡಿಬಿ ವಿರುದ್ಧ ಗಂಭೀರ ಆರೋಪ - ಬೆದರಿಕೆ, ಬ್ರೋಕರ್‌ಗಳ ಹಾವಳಿ, ರೈತರ ಕಣ್ಣೀರು

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ




ಜಿಲ್ಲೆಯಲ್ಲಿ ಪ್ರಸ್ತಾವಿತ ಜೀನ್ಸ್ ಪಾರ್ಕ್ ನಿರ್ಮಾಣದ ಹೆಸರಿನಲ್ಲಿ ರೈತರ ಭೂಮಿಗಳನ್ನು ಬಲವಂತವಾಗಿ ವಶಪಡಿಸಿಕೊಳ್ಳಲು ಯತ್ನ ನಡೆಯುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿದ್ದು, ಇದೀಗ ಈ ವಿಚಾರ ಜಿಲ್ಲೆಯಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿದೆ. ವಿಶೇಷವಾಗಿ ಸಂಜೀವರಾಯನಕೋಟೆ, ಹಲಕುಂದಿ, ಮೀಂಚೇರಿ ಸೇರಿದಂತೆ ಕುಡತಿನಿ ಸುತ್ತಮುತ್ತಲಿನ ಭಾಗಗಳ ರೈತರು ತಮ್ಮ ಭೂಮಿಗಳನ್ನು ನ್ಯಾಯಯುತ ಬೆಲೆಗೆ ನೀಡಲು ಸಿದ್ಧರಾಗಿದ್ದರೂ, ಅಧಿಕಾರಿಗಳು ಹಾಗೂ ಮಧ್ಯವರ್ತಿಗಳ ಒತ್ತಡ, ಬೆದರಿಕೆ ಮತ್ತು ಒಳಸಂಚುಗಳಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಅಳಲು ತೋಡಿ–ಕೊಂಡಿದ್ದಾರೆ.

ನ್ಯಾಯಾಲಯ ಆದೇಶದ ದರ ಒಂದು, ರೈತರಿಗೆ ನೀಡಲು ಯತ್ನಿಸುತ್ತಿರುವುದು ಮತ್ತೊಂದು?

ಈ ಭಾಗದಲ್ಲಿ ಕೈಗಾರಿಕಾ ಉದ್ದೇಶಕ್ಕಾಗಿ ಭೂಮಿ ಸ್ವಾಧೀನಕ್ಕೆ ಸಂಬಂಧಿಸಿದಂತೆ ಈಗಾಗಲೇ ನ್ಯಾಯಾಲಯವು ಪ್ರತಿ ಎಕರೆಗೆ ಸುಮಾರು 1 ಕೋಟಿ 1 ಲಕ್ಷ ರೂಪಾಯಿ ಪರಿಹಾರ ನಿಗದಿ ಮಾಡಿದೆ ಎಂದು ರೈತರು ಹೇಳುತ್ತಿದ್ದಾರೆ. ಆದರೆ ವಾಸ್ತವದಲ್ಲಿ ರೈತರಿಗೆ ಪ್ರತಿ ಎಕರೆಗೆ ಕೇವಲ 65 ಲಕ್ಷ ರೂಪಾಯಿಗೆ ಒಪ್ಪಂದ ಮಾಡಿಸಲು ಒತ್ತಡ ತರಲಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಇದಕ್ಕೆ ಒಪ್ಪದ ರೈತರಿಗೆ ಅಧಿಕಾರಿಗಳು ಹಾಗೂ ಮಧ್ಯವರ್ತಿಗಳು ಸೇರಿ ಬೆದರಿಕೆ ಹಾಕುತ್ತಿದ್ದಾರೆ ಎಂದು ರೈತರು ದೂರಿದ್ದಾರೆ. "ಈಗಲೇ ಭೂಮಿ ಕೊಡಿ, ಇಲ್ಲವಾದರೆ ಸರ್ಕಾರ ನಿಮ್ಮ ಭೂಮಿಯನ್ನು ಕೇವಲ 5 ಲಕ್ಷ ರೂಪಾಯಿಗೆ ಪಡೆದುಕೊಳ್ಳುತ್ತದೆ. ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದರೆ ಸಾಕು, ನಿಮ್ಮಿಂದ ಏನೂ ಮಾಡಲು ಆಗುವುದಿಲ್ಲ" ಎಂದು ಕೆಲವರು ಬೆದರಿಕೆ ಹಾಕುತ್ತಿದ್ದಾರೆ ಎಂದು ರೈತರು ಕಣ್ಣೀರಿನಿಂದ ಹೇಳಿಕೊಂಡಿದ್ದಾರೆ.

ಪ್ರತಿ ಎಕರೆಗೆ ಲಕ್ಷಾಂತರ ಕಮಿಷನ್ ಆರೋಪ

ಭೂಮಿ ವ್ಯವಹಾರದಲ್ಲಿ ಕೆಲ ಅಧಿಕಾರಿಗಳು ಮತ್ತು ಬ್ರೋಕರ್‌ಗಳು ಪ್ರತಿ ಎಕರೆಗೆ ಸುಮಾರು 5 ಲಕ್ಷ ರೂಪಾಯಿವರೆಗೆ ಕಮಿಷನ್ ಪಡೆಯಲು ಯತ್ನಿಸುತ್ತಿದ್ದಾರೆ ಎಂಬ ಮಾತುಗಳು ಗ್ರಾಮಾಂತರ ಪ್ರದೇಶಗಳಲ್ಲಿ ಹರಿದಾಡುತ್ತಿವೆ. ರೈತರ ಸಂಕಷ್ಟದ ಮೇಲೆ ಕೆಲವರು ಕೋಟ್ಯಂತರ ರೂಪಾಯಿ ಗಳಿಸಲು ಮುಂದಾಗಿದ್ದಾರೆ ಎಂಬ ಆರೋಪ ಇದೀಗ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದೆ.

ರೈತರು ಹೇಳುವ ಪ್ರಕಾರ, ನೇರವಾಗಿ ಅಧಿಕಾರಿಗಳು ಮಾತುಕತೆ ನಡೆಸದೆ, ಬಳ್ಳಾರಿ ನಗರ ಮೂಲದ ಕೆಲವು ಬ್ರೋಕರ್‌ಗಳನ್ನು ಬಳಸಿಕೊಂಡು ರೈತರನ್ನು ಸಂಪರ್ಕಿಸಲಾಗುತ್ತಿದೆ. "ಒಪ್ಪಿಕೊಳ್ಳಿ, ಇಲ್ಲವಾದರೆ ಮುಂದಿನ ದಿನಗಳಲ್ಲಿ ಇನ್ನೂ ಕಡಿಮೆ ಬೆಲೆ ಸಿಗುತ್ತದೆ" ಎಂದು ಒತ್ತಡ ತರುತ್ತಿದ್ದಾರೆ ಎಂಬುದು ರೈತರ ಆರೋಪ.

ಕೆಐಎಡಿಬಿ ಅಧಿಕಾರಿಗಳ ಪಾತ್ರದ ಬಗ್ಗೆ ಅನುಮಾನಈ ಎಲ್ಲಾ ಬೆಳವಣಿಗೆಗಳ ಹಿಂದೆ ಕೆಐಎಡಿಬಿ ದಾವಣಗೆರೆ ವಲಯದ ಅಧಿಕಾರಿಗಳ ಪಾತ್ರದ ಬಗ್ಗೆ ಗಂಭೀರ ಅನುಮಾನಗಳು ವ್ಯಕ್ತವಾಗುತ್ತಿವೆ. ವಿಶೇಷವಾಗಿ ಜಿಲ್ಲಾಧಿಕಾರಿ ಹುದ್ದೆಯಲ್ಲಿರುವ ರಘು ಎಂಬ ಅಧಿಕಾರಿಯ ಹೆಸರು ರೈತರ ಮಾತುಕತೆಯಲ್ಲಿ ಕೇಳಿಬರುತ್ತಿದ್ದು, ರೈತರ ಹಿತಕ್ಕಿಂತ ಬೇರೆ ಉದ್ದೇಶಗಳು ಮೇಲುಗೈ ಸಾಧಿಸುತ್ತಿವೆಯೇ ಎಂಬ ಪ್ರಶ್ನೆ ಉದ್ಭವಿಸಿದೆ.

ಭೂಮಿ ಸ್ವಾಧೀನ ಪ್ರಕ್ರಿಯೆ ಪಾರದರ್ಶಕವಾಗಿರಬೇಕಾದರೆ, ಇಲ್ಲಿ ಗುಪ್ತ ಮಾತುಕತೆಗಳು, ಮಧ್ಯವರ್ತಿಗಳ ಹಸ್ತಕ್ಷೇಪ ಮತ್ತು ಒತ್ತಡ ರಾಜಕೀಯ ನಡೆಯುತ್ತಿದೆ ಎಂಬ ಆರೋಪಗಳು ಸಾರ್ವಜನಿಕ ವಲಯದಲ್ಲಿ ಅಸಮಾಧಾನ ಹುಟ್ಟಿಸಿವೆ.

ರೈತರ ಆತಂಕ – "ನಮ್ಮ ಬದುಕೇ ಕತ್ತಲಲ್ಲಿ"

ತಲೆಮಾರುಗಳಿಂದ ಕೃಷಿ ಮಾಡಿಕೊಂಡು ಬದುಕು ಕಟ್ಟಿಕೊಂಡಿರುವ ರೈತರು ಇಂದು ಆತಂಕದ ನೆರಳಿನಲ್ಲಿ ದಿನ ಕಳೆಯುತ್ತಿದ್ದಾರೆ. "ಭೂಮಿ ನಮ್ಮ ಬದುಕು. ಅದನ್ನೇ ಕಿತ್ತು–ಕೊಂಡರೆ ನಾವು ಏನು ಮಾಡಬೇಕು?" ಎಂದು ಹಲವರು ಪ್ರಶ್ನಿಸುತ್ತಿದ್ದಾರೆ.

ಕೆಲ ರೈತರು ಈಗಾಗಲೇ ಸಾಲಬಾಧೆ, ನೀರಿನ ಸಮಸ್ಯೆ ಮತ್ತು ಬೆಳೆ ನಷ್ಟದಿಂದ ಸಂಕಷ್ಟದಲ್ಲಿದ್ದು, ಇಂತಹ ಸಂದರ್ಭದಲ್ಲಿ ಭೂಮಿ ಕಳೆದುಕೊಂಡರೆ ಕುಟುಂಬಗಳು ಬೀದಿಗೆ ಬರುವ ಸ್ಥಿತಿ ಉಂಟಾಗಬಹುದು ಎಂಬ ಭೀತಿ ವ್ಯಕ್ತವಾಗಿದೆ.

ಜನಪ್ರತಿನಿಧಿಗಳ ಮೌನಕ್ಕೆ ಆಕ್ರೋಶ

ಇಷ್ಟೊಂದು ಗಂಭೀರ ಆರೋಪಗಳು ಕೇಳಿಬರುತ್ತಿದ್ದರೂ, ಸ್ಥಳೀಯ ಜನಪ್ರತಿನಿಧಿಗಳು ಮೌನ ವಹಿಸಿರುವುದು ರೈತರ ಆಕ್ರೋಶಕ್ಕೆ ಕಾರಣವಾಗಿದೆ.

ಗ್ರಾಮೀಣ ಶಾಸಕ ಬಿ.ನಾಗೇಂದ್ರ, ನಗರ ಶಾಸಕ ಭರತರೆಡ್ಡಿ ಹಾಗೂ ಜಿಲ್ಲಾಡಳಿತದ ವಿರುದ್ಧ ರೈತರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

"ರೈತರ ಸಮಸ್ಯೆ ಕೇಳಲು ಯಾರೂ ಮುಂದೆ ಬರುತ್ತಿಲ್ಲ. ಎಲ್ಲರೂ ಕಣ್ಣುಮುಚ್ಚಿ ಕುಳಿತಿದ್ದಾರೆ" ಎಂಬ ಮಾತುಗಳು ಗ್ರಾಮಗಳಲ್ಲಿ ಕೇಳಿಬರುತ್ತಿವೆ.

"ರೈತ ದಂಗೆ" ಎಚ್ಚರಿಕೆ

ಇದೇ ಪರಿಸ್ಥಿತಿ ಮುಂದುವರಿದರೆ ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದ ರೈತ ಹೋರಾಟ ಆರಂಭಿಸುವ ಎಚ್ಚರಿಕೆಯನ್ನು ಕೆಲವು ರೈತ ಮುಖಂಡರು ನೀಡಿದ್ದಾರೆ. "ನಮ್ಮ ಹಕ್ಕಿಗಾಗಿ ಹೋರಾಡುತ್ತೇವೆ. ನ್ಯಾಯ ಸಿಗದಿದ್ದರೆ ಬೀದಿಗಿಳಿಯಲೇಬೇಕು" ಎಂದು ಅವರು ಹೇಳಿದ್ದಾರೆ.

ಭೂಮಿ ಸ್ವಾಧೀನ ಪ್ರಕ್ರಿಯೆ ಪಾರದರ್ಶಕವಾಗಿದೆಯೇ? ರೈತರಿಗೆ ನ್ಯಾಯಯುತ ಪರಿಹಾರ ಸಿಗುತ್ತಿದೆ–ಯೇ? ಮಧ್ಯವರ್ತಿಗಳ ಪಾತ್ರ ಏನು? ಎಂಬ ಪ್ರಶ್ನೆಗಳಿಗೆ ಸರ್ಕಾರ ಹಾಗೂ ಕೆಐಎಡಿಬಿ ಸ್ಪಷ್ಟ ಉತ್ತರ ನೀಡಬೇಕಾದ ಅಗತ್ಯ ಇದೀಗ ಎದುರಾಗಿದೆ.

# ಹುಲುಸೂರ ಗ್ರಾಮದಲ್ಲಿ ನರೇಗಾ ಕಾಮಗಾರಿ ಪಿಡಿಓ ಸಂಧ್ಯಾರಾಣಿ ಅವರಿಂದ ಪರಿಶೀಲನೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಖೇಡ ಗ್ರಾಮ ಪಂಚಾಯತ್ ವ್ಯಾಪ್ತಿಯ ಹುಲುಸೂರ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಅಡಿಯಲ್ಲಿ ಜಲ ಸಂರಕ್ಷಣೆ ಕಾಮಗಾರಿಗಳು ಭರದಿಂದ ಸಾಗುತ್ತಿವೆ.

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಓ) ಆದ ಸಂಧ್ಯಾರಾಣಿ ಅವರು ಕಾಮಗಾರಿ ನಡೆಯುವ ಸ್ಥಳಕ್ಕೆ ಭೇಟಿ ನೀಡಿ, ಕೆಲಸದ ಗುಣಮಟ್ಟ ಮತ್ತು ಪ್ರಗತಿಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಅವರು ಕಾರ್ಮಿಕರೊಂದಿಗೆ ಚರ್ಚಿಸಿ, ಯೋಜನೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಲು ತಿಳಿಸಿದರು.ಗ್ರಾಮದ ಯುವ ಮುಖಂಡರಾದ ಅನಿಲ ಮುಧೋಳೆ ಅವರು ಈ ಬಗ್ಗೆ ಮಾತನಾಡುತ್ತಾ, ನರೇಗಾ ಯೋಜನೆಯು ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ನೀಡುವಲ್ಲಿ ಮತ್ತು ಗ್ರಾಮದ ಅಭಿವೃದ್ಧಿಯಲ್ಲಿ ಮಹತ್ತರ ಪಾತ್ರ ವಹಿಸುತ್ತಿದೆ" ಎಂದು ಹೆಮ್ಮೆ ವ್ಯಕ್ತಪಡಿಸಿದರು.

# ಅನಧಿಕೃತ ಮರುಳು ಸಾಗಾಟಕ್ಕೆ ಬ್ರೇಕ್ ; ಟಿಪ್ಪರ ವಶ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಅನಧಿಕೃತ ಮರುಳು ಸಾಗಾಟ–ಕ್ಕೆ ಬ್ರೆಕ್ ಹಾಕುವ ನಿಟ್ಟಿನಲ್ಲಿ ಪಟ್ಟಣದ ಪೊಲೀಸರು ಮಂಗಳವಾರ ಪರವಾನಿಗೆ ಇಲ್ಲದೆ ಆಕ್ರಮ ಮರಳನ್ನು ಸಾಗಾಟ ಮಾಡುತ್ತಿದ್ದ ಟಿಪ್ಪರನ್ನು ನಾಗರಾಳ ಕ್ರಾಸ ಹತ್ತಿರ ವಶ ಪಡಿಸಿಕೊಂಡಿದ್ದಾರೆ. ಅಕ್ರಮ ಮರಳುಗಾರಿಕೆಯ ಬಗ್ಗೆ ಮಾಹಿತಿ ಪಡೆದು ಪಿಐ ವೆಂಕಟೇಶ ಎಂ. ಸಿಬ್ಬಂದಿಗಳೊಂದಿಗೆ ಭಾರತ ಬೆಂಚ್ ಟಿಪ್ಪರಲ್ಲಿ ಚಾಲಕ ಅನುಮತಿ ಪಡೆಯದೇ ಟಿಪ್ಪರನಲ್ಲಿ ಅನಧಿಕೃತವಾಗಿ ಮರಳು ಸಾಗಾಟ ಮಾಡುತ್ತಿದ್ದ, ತಾವರಗೇರದಿಂದ ಮುದಗಲ್ ಮಾರ್ಗವಾಗಿ ನಾಗರಾಳ ಕಡೆ ಚಲಿಸುವ ವೇಳೆ ಪಟ್ಟಣದ ನಾಗರಾಳ ಕ್ರಾಸ ಹತ್ತಿರ ಸಿಕ್ಕಿ ಬಿದ್ದಿದ್ದಾನೆ ಎಂದು ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಚಾಲಕ ಹಾಗೂ ಮಾಲಕನ ಮೇಲೆ ದಾಖಲಿಸಿಕೊಂಡ ಪ್ರಕರಣದಲ್ಲಿ ತಿಳಿಸಿದ್ದಾರೆ.

# ವಿವಿಧ ಬೇಡಿಕೆ ಈಡೇರಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆಮುದಗಲ್

ಹಡಪದ ಅಪ್ಪಣ್ಣ ಸಮಾಜ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ರಾಜ್ಯ ಕಾರ್ಯಧ್ಯಕ್ಷ ಗದ್ದೇಪ್ಪ ಜಕ್ಕೇರಮಡು ಅವರು ವಿಧಾನ ಪರಿಷತ್ ಸದಸ್ಯ ಡಾ : ಯತಿಂದ್ರ ಸಿದ್ದರಾಮಯ್ಯ ರವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.



ಹಡಪದ ಅಪ್ಪಣ್ಣ ಅಭಿವೃದ್ಧಿ ನಿಗಮಕ್ಕೆ ಸಮಾಜದವರನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ಇದಕ್ಕೆ ಅಭಿವೃದ್ದಿಗೆ ನೂರು ಕೋಟಿ ರೂಗಳು ಅನುದಾನ ನೀಡಬೇಕು. ಬಸವ ಕಲ್ಯಾಣದಲ್ಲಿ ಬಸವಣ್ಣನವರ ಅರವಿನ ಗವಿ ಪಕ್ಕದಲ್ಲಿ ಹಡಪದ ಅಪ್ಪಣ್ಣನವರ ಅರವಿನ ಗವಿಯಿದ್ದು ಆ ಗವಿಯಲ್ಲಿ ಅನ್ಯಮೂರ್ತಿ ಸ್ಥಾಪಿಸಿದೇ ಆ ಮೂರ್ತಿಯನ್ನು ತೆರವು ಗೋಳಿಸಿ ಅಪ್ಪಣ್ಣನವರ ಮೂರ್ತಿ ಕುರಿಸಬೇಕು.

ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟರ ವಿರುದ್ಧ ದೂರು ದಾಖಲಿಸಿಕೊಂಡು ಅವರಿಗೆ ಕಾನೂನಿನ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಅವರ ಜೊತೆಗೂಡಿ ಅವರ ಕೈಗೊಂಬೆಯಾಗಿ ಕೆಲಸ ಮಾಡುತ್ತಿರುವ ಹಾಗೂ ಕರ್ತವ್ಯ ಲೋಪ ವ್ಯಸಗುತ್ತಿರುವ ಬಿ.ಕೆ.ಡಿ.ಬಿ. ಆಯುಕ್ತರಿಗೆ ಕೂಡಲೇ ಅಮಾನತ್ತು ಮಾಡಬೇಕೆಂದು ಬಿ.ಕೆ.ಡಿ.ಟಿ.ಯ ಆಯುಕ್ತರ ಕಚೇರಿ ಎದುರುಗಡೆ ಹಾಗೂ ರಾಜ್ಯದಹಂತ ಬೃಹತ್ ಪ್ರತಿಭಟನಾ ಹೋರಾಟ ಮಾಡಲಾಗಿದೆ. ನಮಗೆ ಸರಕಾರ ನ್ಯಾಯ ಕೊಡವದ್ದಿದಲ್ಲಿ ಮುಂದಿನ ದಿನಮಾನದಲ್ಲಿ ಗ್ರಾಮ, ತಾಲೂಕ, ಜಿಲ್ಲೆ, & ರಾಜ್ಯದಹಂತ ಹೊರಟ ಮಾಡಲು ಕರೆಕೊಡುತ್ತೇವೆ ಎಂದು ಮನವಿ ಪತ್ರ ಸಲ್ಲಿಸಿದ್ದಾರೆ.

# ಲೆಕ್ಕಿಹಾಳ ಗ್ರಾಮದಲ್ಲಿ ಸಿರಸಪ್ಪಯ್ಯ ಶ್ರೀಗಳ ಆರಾಧನೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮೀಪದ ಲೆಕ್ಕಿಹಾಳ ಗ್ರಾಮದ ಶ್ರೀ ಮೌನೇಶ್ವರ ಮಠದಲ್ಲಿ ಶ್ರೀ ಸಿರಸಪ್ಪಯ್ಯ ಮಹಾಸ್ವಾಮಿಜಿಯವರ ಪ್ರಥಮ ಪುಣ್ಯರಾಧನೆ, ಕ್ಯಾದಿಗೆಂದ್ರ ಶ್ರೀಗಳು ಹಾಗೂ ಅವರ ಸಹೋದರರ ನೇತೃತ್ವದಲ್ಲಿ ಮಂಗಳವಾರ ಜರುಗಿತು.ಶ್ರೀ ಮೌನೇಶ್ವರ ಮಠದಲ್ಲಿ ಬೆಳಿಗ್ಗೆ ಬ್ರಾಹ್ಮಿ ಮುಹೂರ್ತದಲ್ಲಿ ವಿವಿಧ ಧಾರ್ಮಿಕ ಪೂಜಾ ವಿಧಿ ವಿಧಾನಗಳು ಜರುಗಿದವು. ಗ್ರಾಮದ ಪಾದಗಟ್ಟೆಯಿಂದ ಮಜಾರ ಹಾಗೂ ಶ್ರೀ ಸಿರಸಪ್ಪಯ್ಯ ಮಹಾಸ್ವಾಮಿಗಳ ಭಾವಚಿತ್ರವನ್ನು ವಿವಿಧವಾದ್ಯಮೇಳಗಳೊದೊಂದಿಗೆ ವಿಜೃಂಭಣೆಯಿಂದ ಪಾದಗಟ್ಟೆ ಅವರಿಗೆ ಕರೆ ತರಲಾಯಿತು. ಸ್ಥಳದಲ್ಲಿಯೇ ಮಜಾರ ಪ್ರತಿಷ್ಠಾಪನೆ ಮಾಡಿ, ಅಭಿಷೇಕ ಮಹಾಮಂಗಳ ಮೂಲಕ ವಿವಿಧ ಧಾರ್ಮಿಕ ಆಚರಣೆಗಳು ಜರುಗಿದವು. ಆರಾಧನೆಯಲ್ಲಿ ಭಾಗವಹಿಸಿದ ಭಕ್ತಾದಿಗಳಿಗೆ ತೀರ್ಥ ಪ್ರಸಾದ ನೀಡಲಾಯಿತು. ಸಕಲ ಭಕ್ತರೆಲ್ಲರೂ ಪ್ರಸಾದ ಸ್ವೀಕರಿಸಿದರು. ಅಳ್ಳಳ್ಳಿ ನಾಗಪ್ಪ ಶ್ರೀಗಳು, ಕೊಪ್ಪಳ ಸರಸಪ್ಪಯ್ಯ ಮಠದ ಶೇಷಪ್ಪಯ್ಯ ಸ್ವಾಮೀಜಿ, ಲೆಕ್ಕಿಹಾಳ ಗ್ರಾಮಸ್ಥರು ಸೇರಿದಂತೆ ಶ್ರೀ ಮೌನೇಶ್ವರ ಮಠದ ಭಕ್ತಾದಿಗಳು ಉಪಸ್ಥಿತರಿದ್ದರು.

# ಮಕ್ಕಳ ಆಧಾರ್ ಸಂಖ್ಯೆಗೆ ಕಡ್ಡಾಯ ಬೈಯೋಮೆಟ್ರಿಕ್ ಅಪ್ಲೇಟ್‌ಗಾಗಿ ಆಧಾರ್ ಕೇಂದ್ರಗಳಲ್ಲಿ ಉಚಿತ ಅವಕಾಶ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 13 : 5 ರಿಂದ 7 ಮತ್ತು 15 ರಿಂದ 17ರ ವರ್ಷ ಒಳಗಿನ ಮಕ್ಕಳ ಆಧಾರ್ ಸಂಖ್ಯೆಗೆ ಕಡ್ಡಾಯ ಬೈಯೋಮೆಟ್ರಿಕ್ ಅಪ್ಲೇಟ್‌ಗಾಗಿ ಎಂದಿನಂತೆ ಎಲ್ಲಾ ಆಧಾರ್ ಕೇಂದ್ರಗಳಲ್ಲಿ 2026ರ ಸೆಪ್ಟೆಂಬರ್ 30ರ ವರೆಗೆ ಉಚಿತವಾಗಿ ಅವಕಾಶ ಕಲ್ಪಿಸಲಾಗಿದೆ ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

ಪೋಷಕರು ತಮ್ಮ ಮಕ್ಕಳ ಆಧಾರ್ ಕಾರ್ಡ್ ಮತ್ತು ಸಂಬಂಧಿಸಿದ ದಾಖಲೆಗಳೊಂದಿಗೆ ತಮ್ಮ ಹತ್ತಿರದ ಆಧಾರ್ ಕೇಂದ್ರಗಳಿಗೆ ಭೇಟಿ ನೀಡಿ ನವೀಕರಿಸಿಕೊಳ್ಳಬೇಕು, ಇದರಿಂದಾಗಿ ಮಕ್ಕಳ ಶಾಲೆಯ ದಾಖಲಾತಿ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳು, ಸರ್ಕಾರದ ವಿವಿಧ ಯೋಜನೆಗಳು, ವಿದ್ಯಾರ್ಥಿ ವೇತನ, ತರಬೇತಿಗಳು ಸೇರಿದಂತೆ ಇತ್ಯಾದಿ ಯೋಜನೆಗಳ ಲಾಭ ಪಡೆಯಲು ಅನುಕೂಲವಾಗಲಿದೆ. ಜಿಲ್ಲೆಯ ಎಲ್ಲಾ ಪೋಷಕರು ಈ ಪ್ರಕ್ರಿಯೆಯನ್ನು ಜವಾಬ್ದಾರಿಯಿಂದ ನಿರ್ವಹಿಸಿ ತಮ್ಮ ಮಕ್ಕಳಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಂಟಿಪಿ ಕಾಯ್ದೆ ಉಲ್ಲಂಘನೆಯಾದಲ್ಲಿ ಜೈಲು ಶಿಕ್ಷೆ:ಜಿ.ಪಂ ಸಿಇಓ ಲವೀಶ್ ಒರಡಿಯಾ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ:13: ಖಾಸಗಿ ಆಸ್ಪತ್ರೆಗಳಲ್ಲಿ, 24 ವಾರಗಳಿಗಿಂತ ಹೆಚ್ಚು ದಿನ ತುಂಬಿರುವ ಗರ್ಭಿಣಿಯರ ಗರ್ಭಪಾತ ಮಾಡಿಸಲು ಕಡ್ಡಾಯವಾಗಿ ಜಿಲ್ಲೆಯ ವೈದ್ಯಕಿಯ ಮಂಡಳಿಯಿಂದ ಅನುಮತಿ ಪಡೆಯಬೇಕು. ಇಲ್ಲದೆ ಇದ್ದಲ್ಲಿ MTP ಕಾಯ್ದೆ –2021 ರ ಉಲಂಘನೆಯಾಗುತ್ತದೆ,ಎಂದು ಜಿಲ್ಲಾ ಪಂಚಾಯತ್‌ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಹೇಳಿದರು.

ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಆರೋಗ್ಯ ಮಿಷನ್, ಯೀಮ್ಸ ಯಾದಗಿರಿ ಹಾಗೂ ಐಪಿಎಎಸ್ ಬೆಂಗಳೂರು ತಾಂತ್ರಿಕ ಸಂಸ್ಥೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಎಂಟಿಪಿ ಕಾಯ್ದೆ –2021 ಕುರಿತು ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಎಂಟಿಪಿ ಕಾಯ್ದೆ –2021 ರ ಉಲ್ಲಂಘನೆಯಾದಲ್ಲಿ ಜೈಲು ಶಿಕ್ಷೆ ವಿಧಿಸಲಾಗುತ್ತದೆ. ಹಾಗೂ ಸಂಬಂದಪಟ್ಟ ಆಸ್ಪತ್ರೆಯ ನೊಂದಣಿ ಶಾಶ್ವತವಾಗಿ ರದ್ದು ಪಡಿಸಲಾಗುತ್ತದೆ. ಖಾಸಗಿ ಆಸ್ಪತ್ರೆಯವರು ಯಾವುದೇ ಕಾರಣಕ್ಕೂ ಭ್ರೂಣ ಲಿಂಗ ಪತ್ತೆ, ಕಅಕಓಆಖಿ ಕಾಯ್ದೆ ಉಲಂಘನೆ ಮಾಡುವಂತಿಲ್ಲ. ಉಲ್ಲಂಘನೆ ಮಾಡಿದಲ್ಲಿ ಜೈಲು ಶಿಕ್ಷೆ ವಿಧಿಸಲಾಗುತ್ತದೆ ಎಂದು ಅವರು ಹೇಳಿದರು.



ಖಾಸಗಿ ಆಸ್ಪತ್ರೆಯವರು ಹಾಗೂ ಸರಕಾರಿ ಆಸ್ಪತ್ರೆಯ ವೈದ್ಯರು ಜಿಲ್ಲೆಯಲ್ಲಿ ಸಂಭವಿಸುವ ಶಿಶು ಮರಣ ಮತ್ತು ನಿರ್ಜೀವ ಜನನಗಳ ಗರ್ಭಪಾತದ ಮಾಹಿತಿಯನ್ನು ಕಡ್ಡಾಯವಾಗಿ ಸಂಭಂದಪಟ್ಟ ಅಧಿಕಾರಿಗಳಿಗೆ ಸಲ್ಲಿಸಬೇಕು . ಈ ವರದಿಯಿಂದ ಶಿಶು ಮರಣ ತಾಯಿ ಮರಣ ತಡೆಗಟ್ಟಲು ಎಲ್ಲಾ ಹಂತಗಳಲ್ಲಿ ಕ್ರಮವಹಿಸಲು ಮೂಲಭೂತ ಸೌಕರ್ಯ ನೀಡಲು ಅನೂಕೂಲವಾಗುತ್ತದೆ. ತಾಯಿ ಮರಣ ಶಿಶು ಮರಣ, ನಿರ್ಜೀವ ಜನನಗಳ ಗರ್ಭಪಾತದ ವರದಿಯನ್ನು ನೀಡದೇ ಇರುವ ಖಾಸಗಿ/ ಸರಕಾರಿ ಆಸ್ಪತ್ರೆಗಳ ಮುಖ್ಯಸ್ಥರ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ತರಬೇತಿಯ ಸಂಪೂರ್ಣ ಸದುಪಯೊಗಪಡಿಸಿಕೊಂಡು,ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆಯನ್ನು ನೀಡಲು ಎಲ್ಲಾ ವೈದ್ಯಾಧಿಕಾರಿ ರವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದರು.

ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ॥ ಮಹೇಶ ಬಿರಾದಾರ ರವರು, ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ವೈದ್ಯಕಿಯ ಗರ್ಭಪಾತ (MTP) ಕಾಯ್ದೆ –2021 ಕುರಿತು ಜಿಲ್ಲೆಯ ಖಾಸಗಿ ಮತ್ತು ಸರಕಾರಿ ವೈದ್ಯರಿಗೆ ತರಬೇತಿ ನೀಡಲಾಗುತ್ತಿದ್ದು. ತರಬೇತಿಯಲ್ಲಿ ನೀಡಲಾಗುವ ವಿಷಯಗಳನ್ನು ತಿಳಿದುಕೊಂಡು ತರಬೇತಿ ಯಶಸ್ವಿಗೊಳಿಸಿ ಕಾಯ್ದೆ ಉಲಂಘನೆಯಾಗದಂತೆ ನೋಡಿಕೊಳ್ಳಬೇಕೆಂದು ತಿಳಸಿದರು,

ಈ ತರಬೇತಿ ಕಾರ್ಯಾಗಾರದಲ್ಲಿ YIMS ನಿರ್ದೇಶಕರಾದ ಡಾ. ಸಂದೀಪ ಪಾಟೀಲ್, RCHO ಅಧಿಕಾರಿಗಳಾದ ಡಾ. ಮಲಪ್ಪ ಕೆ, HOD ಗಳಾದ ಡಾ. ಉಷಾ, ಡಾ . ಶಿವುಕುಮಾರ , ಪ್ರಾಧ್ಯಾಪಕರಾದ ಡಾ.ಪೂಜಾ, IPAS ತಾಂತ್ರಿಕ ಸಂಸ್ಥೆ, ಬೆಂಗಳೂರು ಸಂಯೋಜಕರಾದ ದೊಡ್ಡಣ್ಣ ಗೌಡ, ಜಿಲಾ ಆರೋಗ್ಯ ಶಿಕ್ಷಣ ಅಧಿಕಾರಿಗಳಾದ ಶ್ರೀಮತಿ ಲಕ್ಷ್ಮೀ ಮುಂಡಾಸ, DPM ಆದ ಮನೋಹರ ಪಾಟೀಲ್, M&E ಆದ ಶಂಕರಾನಂದ, ಖಾಸಗಿ ಸರಕಾರಿ ವೈದ್ಯರು, ಆರೋಗ್ಯ ಇಲಾಖೆ ,ಯೀಮ್ಸ ಕಾಲೇಜಿನ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು. ಯಾದಗಿರಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ತುಳಸಿರಾಮ ಚವಾಣ ವಂದಿಸಿದರು.

# ಮುಂದಿನ ಐದು ದಿನಗಳವರೆಗೆ ಗರಿಷ್ಠ ತಾಪಮಾನ ಸಾಧ್ಯತೆ ಆರೋಗ್ಯದ ಹಿತದೃಷ್ಟಿಯಿಂದ ಸಾರ್ವಜನಿಕರು ಅವಶ್ಯಕ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಸಲಹೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ:13: ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಯಾದಗಿರಿ ಜಿಲ್ಲೆಯಲ್ಲಿ ಮುಂದಿನ 05 ದಿನಗಳ ವರೆಗೆ ಗರಿಷ್ಠ ತಾಪಮಾನದಲ್ಲಿ 2–3ಲಿಅ ಹೆಚ್ಚಾಗುವ ಸಾಧ್ಯತೆ ಇದೆ. ಈ ಹಿನ್ನಲೆಯಲ್ಲಿ ಹೀಟ್ವೈವ್ (ಶಾಖದ ಹೊಡೆತ) ಹಾಗೂ ಹೀಟ್ಸ್ಟ್ರೋಕ್‌ನಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವತಿಯಿಂದ ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರಿಗೆ ಈ ಕೆಳಕಂಡ ಸಲಹೆಗಳನ್ನು ನೀಡಲಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆದ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಸಾರ್ವಜನಿಕರ ಗಮನಕ್ಕೆ: ವಿಶೇಷವಾಗಿ ಮಧ್ಯಾಹ್ನ 12.00 ರಿಂದ 4.00 ರವರೆಗೆ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಿ. ಹೆಚ್ಚಾಗಿ ಬಾಯಾರಿಕೆ ಇಲ್ಲದಿದ್ದರೂ ಸಹ ಸಾಕಷ್ಟು ನೀರು ಕುಡಿಯಿರಿ.

ಸಾಧ್ಯವಾದಷ್ಟು ಹಗುರವಾದ, ತಿಳಿ ಬಣ್ಣದ, ಸಡಿಲವಾದ ಮತ್ತು ರಂಧ್ರ ವಿರುವ ಹತ್ತಿ ಬಟ್ಟೆಗಳನ್ನು ಧರಿಸಿ. ಬಿಸಿಲಿನಲ್ಲಿ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಛತ್ರಿ/ಟೋಪಿ, ಬೂಟುಗಳು ಅಥವಾ ಚಪ್ಪಲ್‌ಗಳನ್ನು ಬಳಸಿ. ಹೊರಗಿನ ತಾಪಮಾನ ಹೆಚ್ಚಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಿ. ಮಧ್ಯಾಹ್ನ 12 ರಿಂದ 3 ಗಂಟೆಯ ವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ.

ದೇಹವನ್ನು ನಿರ್ಜಲೀಕರಣ ಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ತಪ್ಪಿಸಬೇಕು.

ಹೆಚ್ಚಿನ ಪ್ರೋಟೀನ್ ಆಹಾರವನ್ನು ತಪ್ಪಿಸಿ ಮತ್ತು ಹಳೆಯ ಆಹಾರವನ್ನು ಸೇವಿಸಬೇಡಿ. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈ ಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸಿ. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕು ಪ್ರಾಣಿಗಳನ್ನು ಬಿಡಬೇಡಿ. ನಿಮಗೆ ಮೂರ್ಛೆ ಅಥವಾ ಅನಾರೋಗ್ಯ ಅನಿಸಿದರೆ ತಕ್ಷಣ ವೈದ್ಯರನ್ನು ಭೇಟಿ ಮಾಡಿ. ಔಖಖ, ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಕ್ಷ್ಮಿ, ತೋರಣಿ (ಅಕ್ಕಿನೀರು), ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ದೇಹವನ್ನು ಮರು–ಜಲೀಕರಣ ಮಾಡಲು ಸಹಾಯ ಮಾಡುತ್ತದೆ.

ಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಿ. ನಿಮ್ಮ ಮನೆಯನ್ನು ತಂಪಾಗಿ ಇರಿಸಿ, ಪರದೆಗಳು, ಶಟರ್‌ಗಳು ಅಥವಾ ಸನ್‌ಶೇಡ್‌ಗಳನ್ನು ಬಳಸಿ ಮತ್ತು ರಾತ್ರಿಯಲ್ಲಿ ಕಿಟಕಿಗಳನ್ನು ತೆರೆಯಿರಿ. ಫ್ಯಾನ್, ಒದ್ದೆ ಬಟ್ಟೆಗಳನ್ನು ಬಳಸಿ ಮತ್ತು ತಣ್ಣೀರಿನಲ್ಲಿ ಸ್ನಾನ ಮಾಡಿ.

ರೈತರು/ಕೃಷಿಕಾರ್ಮಿಕರಿಗೆ : ನೀವು ಹೊಲದಲ್ಲಿ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿ ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈ ಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸಬೇಕು.

ಪ್ರಯಾಣಿಕರಿಗೆ: ಪ್ರಯಾಣಿಕರು ಪಯಾಣಿಸುವಾಗ ನಿಮ್ಮೊಂದಿಗೆ ಸಾಕಷ್ಟು ನೀರು ತೆಗೆದುಕೊಂಡಿರಿ.

ಬಿಸಿಗಾಳಿ ಮತ್ತು ಆರ್ದ ಪರಿಸ್ಥಿತಿಗಳಿಗೆ ಸಲಹೆಗಳು:ಸಾಧಾರಣ ತಾಪಮಾನ ಮತ್ತು ಶಾಖವು ಸಾಮಾನ್ಯ ಜನರಿಗೆ ಸಹಿಸಿಕೊಳ್ಳಬಲ್ಲದು. ಆದರೆ ದುರ್ಬಲ ಜನರಿಗೆ ಮತ್ತು ಮಧ್ಯಮ ಆರೋಗ್ಯ ಕಾಳಜಿ ಇರುವ ಜನರು (ಉಧಾ, ಶಿಶುಗಳು, ವೃದ್ಧರು, ದೀರ್ಘಕಾಲದ ಕಾಯಿಲೆ ಇರುವ ಜನರು ಸಹಿಸಿಕೊಳ್ಳಲಾಗದು.ಬಿಸಿಲಿನಲ್ಲಿ ತಲೆ ಹಾಗೂ ದೇಹವನ್ನು ಸೂರ್ಯನ ಕಿರಣಗಳಿಗೆ ಒಡ್ಡಿದಿರಿ. ಹಗುರವಾದ, ತಿಳಿ ಬಣ್ಣದ, ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸಿ, ಟೋಪಿ ಅಥವಾ ಕೊಡೆ/ಛತ್ರಿ ಬಳಸಿ.ಒಂದು ವೇಳೆ ಹೊರಗೆ ಬಿಸಿಲಿನಿಂದ ಮನೆಗೆ ಬಂದ ತಕ್ಷಣ ಕೂಡಲೇ ಅತಿ ತಂಪಾದ ನೀರು ಕುಡಿಯಬಾರದು ಅಥವಾ ಎ.ಸಿ/ಕೂಲರ್ ಗಳನ್ನು ಕೂಡಲೇ ಬಳಸುವುದು ಸೂಕ್ತವಲ್ಲ.

ಜಾನುವಾರುಗಳ ರಕ್ಷಣೆ:ಜಾನುವಾರುಗಳನ್ನು ಮುಂಜಾನೆ ಮತ್ತು ಸಾಯಂಕಾಲ ಸಮಯದಲ್ಲಿ ಮೇಯಿಸಲು ಬಿಡಬೇಕು. ದಿನಕ್ಕೆ 2 ರಿಂದ 3 ಸಾರಿ ಶುದ್ಧವಾದ ನೀರನ್ನು ಕುಡಿಸಬೇಕು. ಮಧ್ಯಾಹ್ನದ ಸಮಯದಲ್ಲಿ ಜಾನುವಾರುಗಳನ್ನು ಹಾಗೂ ಕುರಿ ಮತ್ತು ಆಡುಗಳನ್ನು ಕೊಟ್ಟಿಗೆಯಲ್ಲಿ ಅಥವಾ ಗಿಡದ ನೆರಳಿನಲ್ಲಿ ಕಟ್ಟಬೇಕು. ಜಮೀನು ಉಳಿಮೆ ಮಾಡಲು ಎತ್ತುಗಳನ್ನು ಮುಂಜಾನೆ ಅಥವಾ ಸಾಯಂಕಾಲದ ಸಮಯದಲ್ಲಿ ಮಾತ್ರ ಕೆಲಸಕ್ಕೆ ಉಪಯೋಗಿಸಬೇಕು. ನಿರ್ಜಲೀಕರಣಗೊಂಡ ಜಾನುವಾರುಗಳಿಗೆ ಉಪ್ಪು, ಅಡುಗೆ ಸೋಡಾ, ಬೆಲ್ಲ ಹಾಗೂ ನಿಂಬೆಹಣ್ಣಿನ ರಸವನ್ನು ನೀರಿನಲ್ಲಿ ಮಿಶ್ರಣ ಮಾಡಿ ದಿನದಲ್ಲಿ 3 ರಿಂದ 4 ಸಾರಿ ಕುಡಿಸಬೇಕು.

ಜಾನುವಾರುಗಳಿಗೆ ಮುಂಜಾಗ್ರತೆಯಾಗಿ ಇಲಾಖೆಯಿಂದ ಉಚಿತವಾಗಿ ನೀಡುವ ಸಾಂಕ್ರಾಮಿಕ ರೋಗಗಳಿಗೆ ಲಸಿಕೆಗಳನ್ನು ಕಾಲಕಾಲಕ್ಕೆ ನಿಗದಿತ ಸಮಯದಲ್ಲಿ ಹಾಕಿಸಬೇಕು. ರೈತರು ತಮ್ಮ ಜಮೀನಿನಲ್ಲಿರುವ ಮೇವನ್ನು ಯಾವುದೇ ಕಾರಣಕ್ಕೂ ಸುಟ್ಟು ಹಾಕದೇ ಬಣವೇ ಹಾಕಿ ಅಥವಾ ಸುರುಳಿ ಸುತ್ತಿಟ್ಟುಕೊಂಡು (ಬೇಲಿಂಗ್) ಮೇವನ್ನು ಸಂಗ್ರಹಿಸಬೇಕು.

ಇದರಿಂದ ಭೂಮಿಯ ಫಲವತ್ತತೆ ಹಾಳಾಗದಂತೆ ತಡೆಯಬಹುದು ಜೊತೆಗೆ ವಾಯುಮಾಲಿನ್ಯ ನಿಯಂತ್ರಣ ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯನ್ನು ನೀಗಿಸಬಹುದು.

ಬಿಸಿಗಾಳಿ ಸಂದರ್ಭಗಳಲ್ಲಿ ಅನುಸರಿಸಬೇಕಾದ (Do's) ಮತ್ತು ಅನುಸರಿಸಬಾರದ (Don'ts) ಕ್ರಮಗಳ ಪಟ್ಟಿ :

ಅನುಸರಿಸಬೇಕಾದ ಕ್ರಮಗಳು (Do`s) ಸಾಧ್ಯವಾದಷ್ಟು ತಂಪಾದ ಸ್ಥಳದಲ್ಲಿ ಇರಿ. ಬಿಸಿಲಿನ ಅವಧಿಯಲ್ಲಿ ಛತ್ರಿಗಳನ್ನು ಬಳಸಿ ಸಾಧ್ಯವಾದಷ್ಟು ಹತ್ತಿ ಉಡುಪುಗಳನ್ನು ಧರಿಸಿ ಹತ್ತಿಯ ಟೋಪಿಗಳನ್ನು ಬಳಸಿ ಹೆಚ್ಚಿನ ಬಿಸಿಲು ಅವಧಿಯಲ್ಲಿ ವಿಶ್ರಾಂತಿ ಪಡೆಯಿರಿ.

ಸಾಕಷ್ಟು ನೀರು, ಮಜ್ಜಿಗೆ ಕುಡಿಯಿರಿ. ವಾಸವಿರುವ ಕೋಣೆಯನ್ನು ತಂಪಾಗಿರಿಸಿ, ಬಿಸಿಗಾಳಿಗೆ ತುತ್ತಾದ ವ್ಯಕ್ತಿಯನ್ನು ಕೂಡಲೇ ತಂಪಾದ ಸ್ಥಳಕ್ಕೆ ರವಾನಿಸಿ.

ಬಿಸಿಗಾಳಿ ತುತ್ತಾದ ವ್ಯಕ್ತಿಗೆ ಕೂಡಲೇ ಚಿಕಿತ್ಸೆ ನೀಡಿ ಬಿಸಿಗಾಳಿ ತುತ್ತಾದವರಿಗೆ ಸಾಕಷ್ಟು ಕುಡಿಯುವ ನೀರು, ಮಜ್ಜಿಗೆ, ದ್ರವಹಾರ ನೀಡಿ.

ಅನುಸರಿಸಬಾರದ ಕ್ರಮಗಳು (Don'ts):ನೇರ ಬಿಸಿಲು/ಬಿಸಿಗಾಳಿಗೆ ಹೋಗಬೇಡಿ. ಬಿಸಿಲಿನ ಅವಧಿಯಲ್ಲಿ ಛತ್ರಿ ಇಲ್ಲದೆ ಹೊರಗೆ ಹೋಗಬೇಡಿ. । ಕಪ್ಪು /ಘಾಡ ಬಣ್ಣದ ತೆಳುವಾದ ಹಾಗೂ ಸಿಂಥಟಿಕ್ ಉಡುಪುಗಳನ್ನು ಧರಿಸಬೇಡಿ. ನೇರವಾಗಿ ಬಿಸಿಲಿನ ಝಳಕ್ಕೆ ತಲೆ ಒಡಬೇಡಿ. ಹೆಚ್ಚಿನ ಬಿಸಿಲು ಇರುವ ಅವಧಿಯಲ್ಲಿ ಶ್ರಮದಾಯಕ ದೈಹಿಕ ಕೆಲಸಗಳನ್ನು ಮಾಡಬೇಡಿ. ಬಿಸಿ ಚಹ, ಮದ್ಯ ಸೇವಿಸಬೇಡಿ. ವಾಸವಿರುವ ಕೋಣೆಯಲ್ಲಿ ನೇರವಾಗಿ ಬಿಸಿಲು ಬೀಳುವುದನ್ನು ತಪ್ಪಿಸಿ. ಬಿಸಿಗಾಳಿಗೆ ತುತ್ತಾದ ವ್ಯಕ್ತಿಯನ್ನು ಕೂಡಲೇ ತಂಪಾದ ಸ್ಥಳಕ್ಕೆ ರವಾನಿಸಲು ತಡ ಮಾಡಬೇಡಿ.

ಬಿಸಿಗಾಳಿ ತುತ್ತಾದ ವ್ಯಕ್ತಿಗೆ ಪಥಮ ಚಿಕಿತ್ಸೆ ನೀಡುವುದನ್ನು ತಡ ಮಾಡಬೇಡಿ. ಬಿಸಿಗಾಳಿ ಸಂದರ್ಭಗಳಲ್ಲಿ ಚಹಾ, ಕಾಫಿ ಮತ್ತು । ಜೇನು ಸೇವಿಸಬೇಡಿ ಎಂದು ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಯಾದಗಿರಿ ಜಿಲ್ಲೆ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಗೃಹಲಕ್ಷ್ಮೀ ಯೋಜನೆಯ ಹಣವನ್ನು ಬ್ಯಾಂಕುಗಳು ಬಲವಂತವಾಗಿ ಹಳೆಯ ಸಾಲದ ಬಾಕಿಗಾಗಿ ಕಡಿತಗೊಳಿಸದಂತೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ13:ಗೃಹಲಕ್ಷ್ಮೀಯೋಜನೆಯಹಣವನ್ನು ಬ್ಯಾಂಕುಗಳು ಬಲವಂತವಾಗಿ ಹಳೆಯ ಸಾಲದ ಬಾಕಿಗಾಗಿ ಕಡಿತಗೊಳಿಸದಂತೆ ಸೂಚಿಸಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಲವೀಶ್ ಒರಡಿಯಾ ಅವರು ತಿಳಿಸಿದ್ದಾರೆ.

ಸರ್ಕಾರದ ಗ್ಯಾರಂಟಿ ಯೋಜನೆಗಳ ಪೈಕಿ ಒಂದಾದ ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು 2000 ರೂ. ಗಳ ಧನಸಹಾಯವನ್ನು ಡಿಬಿಟಿ ಮೂಲಕ ಕುಟುಂಬದ ಯಜಮಾನಿ ಮಹಿಳೆಯರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ. ಗೃಹಲಕ್ಷ್ಮೀ ಯೋಜನೆಯ ಧನಸಹಾಯದ ಮೊತ್ತವನ್ನು ಬ್ಯಾಂಕ್ ಖಾತೆಯಿಂದ ಹಳೆಯ ಸಾಲದ ಬಾಕಿ ಅಥವಾ ಬಡ್ಡಿಯ ನೆಪದಲ್ಲಿ ಬಲವಂತವಾಗಿ ಕಡಿತಗೊಳಿಸದಂತೆ ಎಸ್‌ಎಲ್‌ಬಿಸಿ ಮೂಲಕ ಸಂಬಂಧಪಟ್ಟ ಬ್ಯಾಂಕ್‌ಗಳಿಗೆ ನಿರ್ದೇಶನ ನೀಡುವಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಚರ್ಚಿಸಲಾಗಿದ್ದು, ಸೂಕ್ತ ಕ್ರಮವಹಿಸಲು ಸೂಚಿಸಿದೆ. ಜಿಲ್ಲೆಯಲ್ಲಿ ಗೃಹಲಕ್ಷ್ಮೀಯ 'ೋಜನೆಯ ಫಲಾನುಭವಿಗಳಿಗೆ ಪಾವತಿಸ ಲಾಗುತ್ತಿರುವ ಧನಸಹಾಯದ ಮೊತ್ತವನ್ನು ಈ ಬ್ಯಾಂಕ್ ಖಾತೆಯಿಂದ ಹಳೆಯ ಸಾಲದ ಬಾಕಿ ಅಥವಾ ಬಡ್ಡಿಯ ನೆಪದಲ್ಲಿ ಬಲವಂತವಾಗಿ ಕಡಿತಗೊಳಿಸದಂತೆ ತಮ್ಮ ಅಧೀನದಲ್ಲಿ ಬರುವ ಬ್ಯಾಂಕ್‌ಗಳಿಗೆ ಸೂಕ್ತ ನಿರ್ದೇಶನ ನೀಡಿ ಸೂಚಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯಿಂದ ಮೇ.18ರಿಂದ 20ರವರೆಗೆ ತರಬೇತಿ ಕಾರ್ಯಾಗಾರ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.13 : ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ ಸುಧಾರಿತ ದತ್ತಾಂಶ ವಿಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಯಂತ್ರ ಕಲಿಕೆಯನ್ನು ಮೇ.18ರಿಂದ 20ರವರೆಗೆ ಮೂರು ದಿನಗಳ ತರಬೇತಿ ಕಾರ್ಯಾಗಾರವನ್ನು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗುತ್ತಿದೆ.

ಈ ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ಮತ್ತು ತಂತ್ರಜ್ಞಾನಿಗಳು ಉಪನ್ಯಾಸಗಳನ್ನು ನೀಡಲಿದ್ದು, ಆಸಕ್ತ ವಿಜ್ಞಾನ ಪದವಿ, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು ಅಥವಾ ಪ್ರಾಧ್ಯಾಪಕರು ಹಾಗೂ ವಿಜ್ಞಾನಾಸಕ್ತರು ಭಾಗವಹಿಸಬಹುದಾಗಿದೆ.

ಆಸಕ್ತ ಪ್ರತಿನಿಧಿಗಳು ದಿನಾಂಕ: 16/05/2026ರೊಳಗಾಗಿ GoogleForm: https://forms.gle/Dyf9KFQ8Sh-nRLDHH6 ಅಥವಾ ಕಾರ್ಯಾಗಾರದ ಸಂಯೋಜಕರಾದ ಶ್ರೀನಿವಾಸು ವಿ.ಕೆ. ವೈಜ್ಞಾನಿಕಾಧಿಕಾರಿ ಇವರ ಮೊಬೈಲ್ ಸಂಖ್ಯೆ: 9620767819ಗೆ ಸಂಪರ್ಕಿಸಬಹುದಾಗಿದೆ ಅಥವಾ ಅಕಾಡೆಮಿಯ ವೆಬ್ ಸೈಟ್ ವಿಳಾಸ: https://kstacademy.in ವೀಕ್ಷಿಸಬಹುದಾಗಿದೆ ಎಂದು ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೌರ ಕಾರ್ಮಿಕರು ಆರೋಗ್ಯ ವಿಮೆಯ ಸೌಲಭ್ಯ ಪಡೆಯಿರಿ: ಅಧ್ಯಕ್ಷ ಮುರಳಿ ಅಶೋಕ ಸಾಲಪ್ಪ



• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.13: ಪೌರ ಕಾರ್ಮಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ 5 ಲಕ್ಷ ರೂ. ನಗದು ರಹಿತ ಆರೋಗ್ಯ ವಿಮಾ ಸೌಲಭ್ಯವನ್ನು ಸರ್ಕಾರ ಪೌರ ಕಾರ್ಮಿಕರಿಗೆ ನೀಡುತ್ತಿದೆ. ನಿವೃತ್ತಿಯವರೆಗೂ ಕಾರ್ಡ್ ಬಳಸಿ ಆರೋಗ್ಯ ಚಿಕಿತ್ಸೆ ಪಡೆಯಬಹುದೆಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುರಳಿ ಅಶೋಕ ಸಾಲಪ್ಪ ಅವರು ಹೇಳಿದರು.

ಮೇ.13ರ ಬುಧವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಹಾಗೂ ರಾಯಚೂರು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನೇರ ಪಾವತಿ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಶಿಬಿರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮ ಹಾಗೂ ಆರೋಗ್ಯ ವಿಮೆ ಕಾರ್ಡ್ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದಲ್ಲಿ ಮುಖ್ಯಮಂತ್ರಿಗಳಿಂದ 5,744 ಪೌರ ಕಾರ್ಮಿಕರಿಗೆ ಆರೋಗ್ಯ ಕಾರ್ಡಗಳ ವಿತರಣೆ ಮಾಡಲಾಗಿದೆ. ರಾಯಚೂರು ಕಳೆದ ಹತ್ತು ವರ್ಷಗಳಲ್ಲಿ ಬಹಳಷ್ಟು ಬದಲಾವಣೆಯಾಗಿದೆ. ಸ್ವಚ್ಛತೆಯಲ್ಲಿ ಹಲವಾರು ಪ್ರಶಸ್ತಿಗಳನ್ನು ಪಡೆದಿದೆ. ನಮ್ಮ ತಾಯಿಯು ಬೆಂಗಳೂರಿನಲ್ಲಿ ಸ್ವೀಪರ್ ಆಗಿ ಕೆಲಸ ಮಾಡಿದ್ದಾರೆ. ಆರೋಗ್ಯ ವಿಚಾರದಲ್ಲಿ ಪೌರ ಕಾರ್ಮಿಕರು ಹೆಚ್ಚಿನ ಕಾಳಜಿ ವಹಿಸಬೇಕು. ಮುಂದಿನ ದಿನಗಳಲ್ಲಿ ಪೌರ ಕಾರ್ಮಿಕ ಅವಲಂಬಿತ ಕುಟುಂಬಕ್ಕೆ ಈ ಯೋಜನೆಯನ್ನು ವಿಸ್ತರಣೆ ಮಾಡಲಾಗುತ್ತದೆ ಎಂದರು.

ಪೌರ ಕಾರ್ಮಿಕರು ಧೈರ್ಯವಾಗಿ ಆರೋಗ್ಯ ಕಾರ್ಡ್ ಉಪಯೋಗಿಸಬಹುದಾಗಿದೆ. ಐಟಿಬಿಟಿ ಉದ್ಯೋಗಿಗಳಿಗೆ ನೀಡುವ ಸೌಲಭ್ಯಗಳನ್ನು ತಮಗೆ ನೀಡಲಾಗುತ್ತಿದೆ. ಐಪಿಡಿ ಸಾಲಪ್ಪ ವರದಿ ಪ್ರಕಾರ 36 ಅಂಶಗಳನ್ನು ಜಾರಿ ಮಾಡಲಾಗಿದೆ. ಪೌರ ಕಾರ್ಮಿಕ ಎಂಬ ಪದವನ್ನು ಐಪಿಡಿ ಸಾಲಪ್ಪ ಅವರ ವರದಿಯಿಂದ ಬಳಸಲಾಗಿದೆ. ಪಾಲಿಕೆಯ ಆಯುಕ್ತರು ಪತ್ರಿ ಮೂರು ತಿಂಗಳಿಗೊಮ್ಮೆ ಪೌರ ಕಾರ್ಮಿಕರಿಗೆ ಆರೋಗ್ಯ ಶಿಬಿರ ಆಯೋಜನೆ ಮಾಡಬೇಕು. ಪತ್ರಿ ಎರಡು ತಿಂಗಳಿಗೊಮ್ಮೆ ಸಭೆ ಮಾಡಬೇಕು ಎಂದರು.

ರಾಜ್ಯದಲ್ಲಿ ಮ್ಯಾನುಯಲ್ ಸ್ಕ್ಯಾವೆಂಜಿಂಗ್ ಸಂಪೂರ್ಣವಾಗಿ ನಿಷೇಧ ಮಾಡಲಾಗಿದೆ. ರಾಜ್ಯದ ಸಫಾಯಿ ಕಾರ್ಮಿಕರನ್ನು ಗುರುತಿಸಲಾಗಿದೆ. ರಾಯಚೂರಿನಲ್ಲಿ ಮ್ಯಾನುಯಲ್ ಸ್ಕ್ಯಾವೆಂಜಿಂಗ್ ಗುರುತಿಸಿ ಅವರಿಗೆ ಸೌಲಭ್ಯಗಳನ್ನು ನೀಡಬೇಕು. ಅದಕ್ಕಾಗಿ ನಮ್ಮ ನಿಗಮದಲ್ಲಿ ಸಾಕಷ್ಟು ಅನುದಾನ ಲಭ್ಯವಿದೆ. ಜಿಲ್ಲೆಯಿಂದ ಫಲಾನುಭವಿಗಳ ಪಟ್ಟಿಯನ್ನು ಕಳಿಸುವಂತೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು. ಸಫಾಯಿ ಕರ್ಮಚಾರಿ ಮಕ್ಕಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ ಅದನ್ನು ಸರಿಯಾಗಿ ಬಳಸಿಕೊಳ್ಳಬೇಕು ಎಂದರು. ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಪೌರ ಕಾರ್ಮಿಕರನ್ನು ನೇರ ಪಾವತಿ ಪೌರ ಕಾರ್ಮಿಕರನ್ನಾಗಿ ಮಾಡಲು ಸರ್ಕಾರ ಹಂತ ಹಂತವಾಗಿ ಪ್ರಯತ್ನ ಮಾಡಲಾಗುತ್ತಿದೆ. ರಾಯಚೂರು ಜಿಲ್ಲೆಯು ಬಹಳಷ್ಟು ಬದಲಾವಣೆ ಆಗಿದೆ. ಮುಂದೆಯೂ ಇನ್ನಷ್ಟು ಹೆಚ್ಚಿನ ಮಟ್ಟದಲ್ಲಿ ಬದಲಾವಣೆ ಮಾಡೋಣ, ಪೌರ ಕಾರ್ಮಿಕರು ಕೆಲಸದ ಎಲ್ಲಾ ಸುರಕ್ಷತಾ ಸಾಮಾಗ್ರಿಗಳನ್ನು ಬಳಸಿಕೊಂಡು ಕೆಲಸ ಮಾಡಬೇಕು ಎಂದರು.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಹಿಂದಿನ ವರ್ಷದಲ್ಲಿ ಬ್ಯಾಂಕ್ ಆಫ್ ಬರೋಡಾದೊಂದಿಗೆ ಒಪ್ಪಂದ ಮಾಡಿಕೊಂಡು ಪೌರ ಕಾರ್ಮಿಕರಿಗೆ ವಿಮೆ ಮಾಡಿಸಲಾಗಿದೆ. ಪೌರ ಕಾರ್ಮಿಕರ ಶ್ರಮದಿಂದ ರಾಯಚೂರು ನಗರ ಸ್ವಚ್ಛವಾಗಿ ಕಾಣಲು ಸಾಧ್ಯವಾಗಿದೆ. ರಾಯಚೂರು ಉತ್ಸವ ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರ ಕಾರ್ಯ ಮೆಚ್ಚುವಂತದ್ದು ಆಗಿತ್ತು. ತಮ್ಮ ಆರೋಗ್ಯದ ಕಡೆಗೂ ಹೆಚ್ಚಿನ ಗಮನ ಕೊಡುವದರ ಜೊತೆಗೆ ರಾಯಚೂರು ನಗರವನ್ನು ಸ್ವಚ್ಛ ಹಾಗೂ ಹಸಿರು ನಗರವನ್ನಾಗಿ ಮಾಡಲು ಎಲ್ಲರೂ ಶ್ರಮಿಸೋಣ ಎಂದರು.

ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ವ್ಯವಸ್ಥಾಪಕ ನಿರ್ದೇಶಕ ರವಿ ಟಿ.ಕುಮಾರ್ ಅವರು ಮಾತನಾಡಿ, ನಿಗಮದಿಂದ ಉತ್ತಮ ಗುಣಮಟ್ಟದ ಸೌಲಭ್ಯವನ್ನು ಪೌರ ಕಾರ್ಮಿಕರಿಗಾಗಿ ಜಾರಿಗೆ ತರಲಾಗಿದೆ. ಈ ಯೋಜನೆ ಜಾರಿಗೆ ಬರಲು ಸಮಾಜ ಕಲ್ಯಾಣ ಇಲಾಖೆ ಸಚಿವರು ಸೇರಿದಂತೆ ಇತರೆ ಗಣ್ಯರ ಸಹಕಾರ ಬಹಳಷ್ಟು ಇದೆ. ಪೌರ ಕಾರ್ಮಿಕರ ಆರೋಗ್ಯ ಕಾಪಾಡಲು ಸರ್ಕಾರದಿಂದ ಇದನ್ನು ಜಾರಿ ಮಾಡಲಾಗಿದೆ. ಇನ್ಫೋಸಿಸ್ ವಿಪ್ರೋ ಸಂಸ್ಥೆಯ ಉದ್ಯೋಗಿಗಳಿಗೆ ನೀಡುವ ಸೌಲಭ್ಯವನ್ನು ನಮ್ಮ ಪೌರ ಕಾರ್ಮಿಕರಿಗೆ ನೀಡಲಾಗುತ್ತಿದೆ. 5 ಲಕ್ಷ ರೂ. ವರಗೆ ಉಚಿತವಾಗಿ ನಗರದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ಒಟ್ಟು ಮೂರು ಸಾವಿರ ರೋಗಕ್ಕೆ ಚಿಕಿತ್ಸೆ ಪಡೆಯಬಹುದಾಗಿದೆ. ಪೌರ ಕಾರ್ಮಿಕರು ಈ ಆರೋಗ್ಯ ಕಾರ್ಡ್ಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು. ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಕೆಲಸ ಪೌರ ಕಾರ್ಮಿಕರು ಮಾಡಬೇಕು ಎಂದರು.

ಆರೋಗ್ಯ ವಿಮೆ ಕಾರ್ಡ್, ಸಮವಸ್ತ್ರ ವಿತರಣೆ: ರಾಯಚೂರು ಮಹಾನಗರ ಪಾಲಿಕೆಯ ನೇರ ಪಾವತಿ ಪೌರ ಕಾರ್ಮಿಕರಾದ ಆರ್.ಹನುಮಂತ, ರಾಮಪ್ಪ, ಸಣ್ಣನರಸಿಂಹಲು, ನಾಗಮ್ಮ, ಜಂಬಲಮ್ಮ, ಲವ, ನಾಗಪ್ಪ, ಮುಖೇಶ್, ಜಿಂದಮ್ಮ, ಹೊನ್ನಮ್ಮ ಹಾಗೂ ಸಮವಸ್ತ್ರವನ್ನು ನರಸಪ್ಪ, ರಮೇಶ, ನಾಗಪ್ಪ, ಮೋನಪ್ಪ, ತಿಮ್ಮಪ್ಪ, ನರಸಪ್ಪ, ಮಾರೆಪ್ಪ, ದೊಡ್ಡ ನರಸಪ್ಪ, ನರಸಿಂಹಲು, ಎನ್.ಪ್ರಸಾದ್ ಕುಮಾರ್, ಸಣ್ಣ ನರಸಪ್ಪ ಯಲ್ಲಪ್ಪ, ರಾಜಶೇಖರ, ಆಂಜನೇಯ, ರೆಡ್ಡೆಪ್ಪ, ಸುಶೀಲಮ್ಮ ಅವರಿಗೆ ವಿತರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಲಾಯಿತು. ಇದಕ್ಕೂ ಮೊದಲು ನಡೆದ ಶಿಬಿರದಲ್ಲಿ ಕಾರ್ಮಿಕರ ಆರೋಗ್ಯ ತಪಾಸಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಪಾಲಿಕೆ ಕಂದಾಯ ಆಯುಕ್ತ ಶರಣಪ್ಪ, ಪಾಲಿಕೆ ಸದಸ್ಯ ಕಾರ್ಯದರ್ಶಿ ಕೃಷ್ಣ, ಕಂದಾಯ ಅಧಿಕಾರಿ ರವಿ ಅಂಗಡಿ, ಡಿ.ಕುಮಾರ್, ಪಾಲಿಕೆಯ ಕಂದಾಯ ಆಯುಕ್ತ ಶರಣಪ್ಪ, ಪಾಲಿಕೆಯ ಜೋನಲ್ 01ರ ಉಪ ಆಯುಕ್ತ ಮಲ್ಲಿಕಾರ್ಜುನ, ಪಾಲಿಕೆಯ ಪರಿಸರ ಅಭಿಯಂತರ ಜಯಪಾಲ್ ರೆಡ್ಡಿ, ವಿಮೆ ಸಂಸ್ಥೆಯ ವಿನೋದ ಹಾಗೂ ಪೌರ ಕಾರ್ಮಿಕರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

# ಉಡಮಗಲ್ ಖಾನಾಪುರ, ಯಾಪಲದಿನ್ನಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ರಾಷ್ಟ್ರೀಯ ಮಟ್ಟದ ಎನ್‌ಕ್ಯೂಎಎಸ್ ಮೌಲ್ಯ ಮಾಪನದಲ್ಲಿ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.13 : ರಾಯಚೂರು ಜಿಲ್ಲೆಯ ಉಡಮಗಲ್ ಖಾನಾಪುರ ಹಾಗೂ ಯಾಪಲದಿನ್ನಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ರಾಷ್ಟ್ರೀಯ ಗುಣಮಟ್ಟ ಭರವಸೆ ಮಾನದಂಡಗಳ ರಾಷ್ಟ್ರೀಯ ಮಟ್ಟದ ಮೌಲ್ಯಮಾಪನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಗಮನಾರ್ಹ ಸಾಧನೆ ಮಾಡಿದ್ದು, ಇದು ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಸಂತಸ ಹಂಚಿಕೊಂಡಿದ್ದಾರೆ. ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ಖಾನಾಪೂರಗೆ ರಾಷ್ಟ್ರೀಯ ಮಟ್ಟದ ತಂಡದ ಡಾ.ಗಿರೀಶ್ ಹಾಗೂ ಡಾ.ಮೈನುದೀನ್ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಯಾಪಲದಿನ್ನಿಗೆ ರಾಷ್ಟ್ರಮಟ್ಟದ ಮೌಲ್ಯಮಾಪಕರಾದ ವಿನಿತಾ ಆರ್. ಹಾಗೂ ಅಶೋಕ್ ಅವರು ಕೈಗೊಂಡ ಸಮಗ್ರ ಮೌಲ್ಯಮಾಪನದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ಖಾನಾಪೂರ ಶೇಕಡ 91.31 ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಯಾಪಲದಿನ್ನಿ ಶೇಕಡ 88.55 ಅಂಕಗಳೊಂದಿಗೆ ಜಿಲ್ಲೆಯ ಆರೋಗ್ಯ ಕ್ಷೇತ್ರದಲ್ಲಿ ಮಹತ್ವದ ಸಾಧನೆಯಾಗಿದೆ.

ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಮೂಲ ಸೌಕರ್ಯ, ರೋಗಿ ಸ್ನೇಹಿ ಸೇವೆಗಳು, ಆಸ್ಪತ್ರೆಯ ಸ್ವಚ್ಛತೆ, ಔಷಧಗಳ ಲಭ್ಯತೆ, ತುರ್ತು ಚಿಕಿತ್ಸಾ ವ್ಯವಸ್ಥೆ, ದಾಖಲೆ ನಿರ್ವಹಣೆ ಸೇರಿದಂತೆ ಹಲವು ಅಂಶಗಳನ್ನು ಸೂಕ್ಷ್ಮವಾಗಿ ಪರಿಶೀಲಿಸಲಾಗಿತ್ತು. ಈ ಎಲ್ಲ ವಿಭಾಗಗಳಲ್ಲಿ ಉತ್ತಮ ಕಾರ್ಯನಿರ್ವಹಣೆ ತೋರಿದ ಪರಿಣಾಮ ಉನ್ನತ ಅಂಕಗಳನ್ನು ಪಡೆದುಕೊಳ್ಳಲಾಗಿದೆ ಎಂದರು.

ಜನಪ್ರತಿನಿಧಿಗಳು, ಶಾಸಕರು ಮತ್ತು ಸಂಸದರು, ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತದಿಂದ ದೊರೆತ ಮಾರ್ಗದರ್ಶನ ಮತ್ತು ಬೆಂಬಲವೂ ಈ ಸಾಧನೆಯಲ್ಲಿ ಮಹತ್ವದ ಪಾತ್ರ ವಹಿಸಿದೆ. ಇದಕ್ಕಾಗಿ ಜಿಲ್ಲಾ ಎನ್ಫೋರ್ಸ್ಮೆಂಟ್ ಅಧಿಕಾರಿಗಳು ಡಾ.ಶಿವಕುಮಾರ, ತಾಲ್ಲೂಕು ಆರೋಗ್ಯಾಧಿಕಾರಿಗಳು ಡಾ.ಅಮೃತ್, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಆಡಳಿತ ವೈದ್ಯಾಧಿಕಾರಿಗಳಾದ ಡಾ.ಫರಹ್ ನಸ್ರೀನ್, ಡಾ.ಅರುಣ, ಡಾ.ಶಿವಶರಣಪ್ಪ, ಆಯುಷ್ ವೈದ್ಯಾಧಿಕಾರಿಗಳು ಜಿಲ್ಲಾ ಗುಣಮಟ್ಟ ಭರವಸೆ ಸಲಹೆಗಾರರಾದ ಹರೀಶ್ ಪತಂಗೆ, ಸಿಬ್ಬಂದಿಯವರಾದ ಬದರಿ ನಾಥ, ಪ್ರ.ದ.ಸ, ಖಲೀಲ್ ಅಹ್ಮದ್, ಶುಶ್ರೂಷಣಾಧಿಕಾರಿಗಳಾದ ಸ್ವೀಟ್ ಮೇರಿ, ಪ್ರೇಮ ಕುಮಾರಿ, ಮೌನೇಶ್ ಸೇರಿದಂತೆ ಎಲ್ಲ ಸಿಬ್ಬಂದಿಗಳ ಕಠಿಣ ಪರಿಶ್ರಮದಿಂದ ಈ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಸಾಧ್ಯವಾಯಿತು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಸ್ಯಗಳಿಗೆ ರೋಗ ತಡೆಗಟ್ಟಲು ಮುಂಜಾಗ್ರತೆ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸಸ್ಯಗಳಿಗೆ ಬರುವ ವಿವಿಧ ರೋಗಗಳನ್ನು ತಡೆಗಟ್ಟಲು ಮುಂಜಾಗ್ರತೆ ವಹಿಸುವುದು ಅಗತ್ಯವಾಗಿದೆ ಎಂದು ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್. ಬಿರಾದಾರ ಸಲಹೆ ನೀಡಿದರು. ತಾಲೂಕಿನ ಗಣಜಲಖೇಡ ಗ್ರಾಮದ ಚೆಂಡು ಹೂ ತೋಟವೊಂದರಲ್ಲಿ ಬುಧವಾರ ಜರುಗಿದ "ರಾಷ್ಟ್ರೀಯ ಸಸ್ಯರೋಗ ನಿಯಂತ್ರಣ ದಿನಾಚರಣೆ"ಯಲ್ಲಿ ಚೆಂಡು ಹೂಗಳನ್ನು ಪರಿಶೀಲಿಸಿ, ನಂತರ ಅವರು ಮಾತನಾಡಿದರು.

# ಯುವಜನತೆ ಮೊಬೈಲ್ ಗೀಳಿನಿಂದ ಹೊರಬಂದು ನಮ್ಮ ನೆಲದ ಸಂಸ್ಕೃತಿ ಅರಿತುಕೊಳ್ಳಬೇಕು: ಸಿ.ಪಿ.ಐ ವಿಶ್ವನಾಥ ಹಿರೇಗೌಡ್ರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯುವಜನತೆ ಮೊಬೈಲ್ ಗೀಳಿನಿಂದ ಹೊರಬಂದು ನಮ್ಮ ನೆಲದ ಸಂಸ್ಕೃತಿ, ಪರಂಪರೆಯನ್ನು ಅರಿತುಕೊಳ್ಳಬೇಕು ಎಂದು ಕುಷ್ಟಗಿ ಸಿ.ಪಿ.ಐ ವಿಶ್ವನಾಥ ಹಿರೇಗೌಡ್ರ ಹೇಳಿದರು.ಬುಧವಾರದಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಕುಷ್ಟಗಿಯ ಜನಜಾಗೃತಿ ಕಲಾರಂಗ ಸಂಸ್ಥೆ(ರಿ) ವತಿಯಿಂದ ಕುಷ್ಟಗಿಯ ಬಿ.ಜಿ.ಎಸ್. ಪ್ಯಾರಾ ಮೆಡಿಕಲ್ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ನೆಲ ಮೂಲ ಸಂಸ್ಕೃತಿ– ನಮ್ಮ ಜಾನಪದ ಜಾನಪದ ಕಲಾ ಪ್ರಕಾರಗಳ ಪರಿಚಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಜನಸಾಮಾನ್ಯರ ಬದುಕಿನಲ್ಲಿ ಬರುವ ನೋವು–ನಲಿವುಗಳು ಜಾನಪದಗಳಾಗಿ ಹೊರಹೊಮ್ಮಿ ತಲೆಮಾರುಗಳಿಂದ ತಲೆಮಾರಿಗೆ ಮುಂದುವರೆಯುತ್ತಿವೆ. ಇಂದಿನ ಯುವಜನತೆ ಮೊಬೈಲ್ ಗೀಳಿನಿಂದ ತಮ್ಮ ಸುಂದರ ಭವಿಷ್ಯವನ್ನು ಹಾಳುಮಾಡಿಕೊಳ್ಳುತ್ತಿದ್ದಾರೆ. ಯುವ ಸಮುದಾಯ ಒಣ ಭ್ರಮೆ, ಭ್ರಾಂತಿಗಳಿಗೆ ಒಳಗಾಗದೇ ಮುಂದಿನ ಜೀವನವನ್ನು ಸುಖಮಯವಾಗಿಸಿಕೊಳ್ಳಲು ಒಳ್ಳೆಯ ಗುರಿಗಳನ್ನು ಇಟ್ಟುಕೊಳ್ಳಬೇಕು. ನಮ್ಮ ಪರಂಪರೆಯನ್ನು ಅರಿತು, ಅದರ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಹಾಗೆಯೇ ಸಮಾಜದಲ್ಲಿ ನಡೆಯುವ ಅಹಿತಕರ ಘಟನೆಗಳ ಕುರಿತು ಪೊಲೀಸರಿಗೆ ಸಾರ್ವಜನಿಕರು ಮಾಹಿತಿ ನೀಡಬೇಕು ಎಂದರು.ಜಾನಪದದಲ್ಲಿ ಲಾವಣಿ/ ಗೀಗೀ



ಪದಗಳು ಕುರಿತು ಉಪನ್ಯಾಸ ನೀಡಿದ ರಾಜ್ಯ ಜಾನಪದ ಅಕಾಡೆಮಿ ಸದಸ್ಯ ಡಾ.ಜೀವನಸಾಬ ಬಿನ್ನಾಳ ಅವರು, ನಮ್ಮ ಹಳ್ಳಿಗಳ ಸಂಸ್ಕೃತಿ ಗಟ್ಟಿಗೊಳ್ಳಬೇಕಾದರೆ ಮೂಲ ಜಾನಪದ ಗೀತೆಗಳಾದ ಕುಟ್ಟುವ ಪದ, ಬೀಸುವ ಪದ, ಕೋಲಾಟದ ಪದ, ಲಾವಣಿ, ಸೋಬಾನೆ ಹಾಡು ಇವುಗಳ ಮೂಲ ದಾಟಿ ಮತ್ತು ಶೈಲಿಗಳನ್ನು ಇಂದಿನ ಯುವ ಪೀಳಿಗೆ ಅರ್ಥ ಮಾಡಿಕೊಳ್ಳಬೇಕಾಗಿದೆ. ಇದರಿಂದ ನಮ್ಮ ಸಂಸ್ಕೃತಿ ಮತ್ತು ಭಾಷೆ ಗಟ್ಟಿಗೊಳ್ಳಲಿದೆ ಎಂದರು.

ಬಿ.ಜಿ.ಎಸ್. ಪ್ಯಾರಾ ಮೆಡಿಕಲ್ ಕಾಲೇಜು ಅಧ್ಯಕ್ಷ ಶ್ರೀಶೈಲ ವಾದಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜನಜಾಗೃತಿ ಕಲಾರಂಗ ಸಂಸ್ಥೆ (ರಿ) ಕುಷ್ಟಗಿ ಅಧ್ಯಕ್ಷ ಶರಣಪ್ಪ ವಡಿಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭ ಕುಷ್ಟಗಿ ಸಿ.ಪಿ.ಐ ವಿಶ್ವನಾಥ ಹಿರೇಗೌಡ್ರ ಇವರಿಗೆ "ಪ್ರೇರಕ ಚೇತನ" ಮತ್ತು ರಾಜ್ಯ ಜಾನಪದ ಅಕಾಡೆಮಿ ಸದಸ್ಯ ಡಾ.ಜೀವನಸಾಬ ಬಿನ್ನಾಳ ಇವರಿಗೆ "ಜನಪದ ಚೇತನ" ಬಿರುದುಗಳನ್ನು ಸಂಸ್ಥೆಯಿಂದ ಪ್ರದಾನ ಮಾಡಿ ಸನ್ಮಾನಿಸಲಾಯಿತು.

ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ದಾವಲಸಾಬ ಅತ್ತಾರ, ಮುದಕವ್ವ ಗಂಜ್ಯಾಳ, ನಿಂಗಪ್ಪ ಸೊಲ್ಲಾಪೂರ, ಮಲ್ಲಿಕಾರ್ಜುನ ಕುಲಕರ್ಣಿ ಮತ್ತು ಸಂಗಡಿಗರಿಂದ ಲಾವಣಿ, ಗೀ ಗೀ ಪದ ಕಾರ್ಯಕ್ರಮಗಳು ನಡೆದವು. ನಾಗರಾಳ ಗ್ರಾಮದ ಬಾಳಮ್ಮ ಯಲಬರ್ತಿ ಹಾಗೂ ಸಂಗಡಿಗರಿಂದ ಸಂಪ್ರದಾಯದ ಪದಗಳು,

ಶರಣಪ್ಪ ಬನ್ನಿಗೋಳ ಹಾಗೂ ಬಸವರಾಜ ಗಂಗನಾಳ ಹಾಗೂ ಸಂಗಡಿಗರಿಂದ ಬಯಲಾಟದ ಪದಗಳನ್ನು ಕಾರ್ಯಕ್ರಮದಲ್ಲಿ ಪ್ರಸ್ತುತಪಡಿಸಲಾಯಿತು.

ಅಕ್ಕಮಹಾದೇವಿ ಪ್ರಾರ್ಥಿಸಿದರು. ಉಪನ್ಯಾಸಕ ಕಿರಣ ಬಡಿಗೇರ ಸ್ವಾಗತಿಸಿದರು. ಚನ್ನಪ್ಪ ಭಾವಿಮನಿ ಕಾರ್ಯಕ್ರಮ ನಿರೂಪಿಸಿದರು. ಅನಿಲಕುಮಾರ ವಂದಿಸಿದರು.

# ಮೇ 16 ಕ್ಕೆ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ: ಭಿತ್ತಿ ಪತ್ರ ಬಿಡುಗಡೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಚರಿಸಲಾಗುವ ಮೇ 16 ರಂದು ಆಚರಿಸಲಾಗುವ ರಾಷ್ಟ್ರೀಯ ಡೆಂಗ್ಯೂ ದಿನಾಚರಣೆ ಅಂಗವಾಗಿ ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ್ ಅವರು ಭಿತ್ತಿ ಪತ್ರ ಬಿಡುಗಡೆಗೊಳಿಸಿದರು.

ಈ ಸಂದರ್ಭ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಲಿಂಗರಾಜು ಟಿ., ಜಿಲ್ಲಾ ಅನುಷ್ಠಾನಾಧಿಕಾರಿ ಡ.ರವೀಂದ್ರನಾಥ ಎಂ.ಎಚ್., ಜಿಲ್ಲಾ ಆರ್‌ಸಿಎಚ್ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಪ್ರಕಾಶ ವಿ., ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಪ್ರಕಾಶ ಎಚ್., ಜಿಲ್ಲಾ ಸರ್ವೇಕ್ಷಣಾ ಹಾಗೂ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿ ಡಾ.ಗೋನಾಳ ಕುಮಾರಸ್ವಾಮಿ, ಕೊಪ್ಪಳ ಕಿಮ್ಸ್ ವೈದ್ಯಕೀಯ ಅಧೀಕ್ಷಕ ಡಾ.ಮಂಜುನಾಥ, ತಜ್ಞ ವೈದ್ಯರಾದ ಡಾ.ಈಶ್ವರ ಸವಡಿ, ಫಿಜಿಶಿಯನ್ ಡಾ.ಸಂಗನಬಸಪ್ಪ, ಡಾ.ಸೋಮಶೇಖರ ಕೆ., ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ಹಾಗೂ ವಿವಿಧ ತಾಲ್ಲೂಕುಗಳ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಯಾವುದೇ ಮಗು ಲಸಿಕೆಯಿಂದ ವಂಚಿತವಾಗಬಾರದು: ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 1 ರವರೆಗೆ ನಡೆಯಲಿರುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ಯಾವುದೇ ಮಗು ಲಸಿಕೆಯಿಂದ ತಪ್ಪಿಸಿಕೊಳ್ಳಬಾರದು. ಇದನ್ನು ಪ್ರತಿಯೊಬ್ಬ ಅಧಿಕಾರಿಯೂ ತನ್ನ ಹೊಣೆಗಾರಿಕೆಯಾಗಿಸಿಕೊಂಡು ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ ಹೇಳಿದರು. ಮಂಗಳವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಆಯೋಜಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲೀಯೋ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 1 ರವರೆಗೆ ನಾಲ್ಕು ದಿನಗಳ ಕಾಲ ನಡೆಯಲಿರುವ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಗೊಳಿಸಬೇಕು. "ಪೋಲಿಯೋ ನಿರ್ಮೂಲನೆ ಸರ್ಕಾರದ ಪ್ರಮುಖ ಗುರಿಯಾಗಿದ್ದು, ಮನೆ ಮನೆಗೆ ತೆರಳಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಲಸಿಕೆ ನೀಡಬೇಕು. ಯಾವುದೇ ಕಾರಣ–ಕ್ಕೂ ಒಂದು ಮಗುವೂ ಲಸಿಕೆಯಿಂದ ವಂಚಿತವಾಗಬಾರದು ಎಂದು ಅವರು ಸೂಚನೆ ನೀಡಿದರು.ಅಂಗನವಾಡಿ, ಆಶಾ ಕಾರ್ಯಕರ್ತರು ಹಾಗೂ ಆರೋಗ್ಯ ಸಿಬ್ಬಂದಿ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಗ್ರಾಮೀಣ ಪ್ರದೇಶಗಳು, ಸ್ಲಂಗಳು, ವಲಸೆ ಕಾರ್ಮಿಕರ ವಸತಿ ಪ್ರದೇಶಗಳು ಸೇರಿದಂತೆ ಎಲ್ಲೆಡೆ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಬೇಕು. ಅಂಗನವಾಡಿಗಳಿಗೆ ಬರುವ ತಾಯಂದಿರಿಗೆ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸುವಂತೆ ತಿಳುವಳಿಕೆ ನೀಡಬೇಕು. ಶಾಲಾ ಮಕ್ಕಳಿಂದ ಪೋಲಿಯೋ ಲಸಿಕೆ ಕುರಿತು ಜಾಗೃತಿ ಜಾಥಾ ಹಮ್ಮಿಕೊಳ್ಳಬೇಕು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಮುಖ್ಯವಾಗಿದ್ದು, ಶಾಲೆಗಳು, ಧಾರ್ಮಿಕ ಸ್ಥಳಗಳು ಮತ್ತು ಸಾರ್ವಜನಿಕ ಪ್ರದೇಶಗಳಲ್ಲಿ ಪೋಷಕರಿಗೆ ಲಸಿಕೆಯ ಮಹತ್ವವನ್ನು ತಿಳಿಸಬೇಕು. ಹಾಗೂ ಬಸ್ ನಿಲ್ದಾಣಗಳಲ್ಲಿ 3 ದಿನಗಳ ಕಾಲ ಲಸಿಕೆ ಹಾಕಿಸುವಂತೆ ಪ್ರಕಟಣೆ ಹೊರಡಿಸಬೇಕು. ಜನರಲ್ಲಿ ಯಾವುದೇ ಅಪನಂಬಿಕೆ ಇದ್ದರೆ ಅದನ್ನು ಸೂಕ್ತ ತಿಳುವಳಿಕೆ ನೀಡುವ ಮೂಲಕ ಹೋಗಲಾಡಿಸಬೇಕು. ಈ ಕಾರ್ಯಕ್ರಮ ಆರೋಗ್ಯ ಇಲಾಖೆಯೊಂದರ ಕೆಲಸವಲ್ಲ. ಎಲ್ಲಾ ಇಲಾಖೆಗಳು, ಸಂಘ ಸಂಸ್ಥೆಗಳು ಮತ್ತು ಸಾರ್ವಜನಿಕರು ಕೈಜೋಡಿಸಿದಾಗ ಮಾತ್ರ ಯಶಸ್ಸು ಸಾಧ್ಯ ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಲಿಂಗರಾಜು ಟಿ. ಅವರು ಮಾತನಾಡಿ, ಜೂನ್ 28 ರಂಧು ಬೆಳಿಗ್ಗೆ 8 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ನಿಗದಿತ ಬೂತ್‌ಗಳಲ್ಲಿ ಪೋಲಿಯೋ ಲಸಿಕೆ ಹಾಕಲಾಗುತ್ತದೆ. ಜೂನ್ 29 ರಿಂದ ಜುಲೈ 1 ರವರೆಗೆ ಮನೆ ಮನೆಗೆ ಭೇಟಿ ನೀಡಿ, ಲಸಿಕೆ ನೀಡಲಾಗುತ್ತದೆ. ಇದರೊಂದಿಗೆ ಜೂನ್ 28 ರಿಂದ ಜುಲೈ 1 ರವರೆಗೆ ವಲಸೆ ಕಾರ್ಮಿಕರ ವಸತಿ ಪ್ರದೇಶಗಳು, ಕಾರ್ಖಾನೆ ಕಾರ್ಮಿಕರ ಬಿಡಾರಗಳಿಗೆ ಭೇಟಿ ನೀಡಿ ಲಸಿಕೆ ನೀಡಲಾಗುವುದು ಎಂದು ಮಾಹಿತಿ ನೀಡಿದ ಅವರು, ಕಾರ್ಯಕ್ರಮದ ಯಶಸ್ವಿಗೆ ಆರೋಗ್ಯ ಇಲಾಖೆಯೊಂದಿಗೆ ವಿವಿಧ ಇಲಾಖೆಗಳು ಕೈಜೋಡಿಸಬೇಕು ಎಂದು ಮನವಿ ಮಾಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ, ಜಿಲ್ಲಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ರವೀಂದ್ರನಾಥ ಎಂ.ಎಚ್., ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ.ಪ್ರಕಾಶ ಎಚ್., ಮುನಿರಬಾದ್‌ನ ಸಮುದಾಯ ಆರೋಗ್ಯ ಕೇಂದ್ರದ ಪ್ರಸೂತಿ ತಜ್ಞರಾದ ಕೆ.ಹೆಚ್. ತೊಗರಿ, ಜಿಲ್ಲಾ ಆಸ್ಪತ್ರೆಯ ಮಕ್ಕಳ ತಜ್ಞ ವಿಭಾಗದ ಮುಖ್ಯಸ್ಥರು ಡಾ.ಗಿರೀಶ ಸೇರಿದಂತೆ ವಿವಿಧ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ತಾರಾಲಯ ಕೇಂದ್ರಗಳ ಸಂದರ್ಶಕರ ಸಂಖ್ಯೆ ಹೆಚ್ಚಿಸಲು ಕ್ರಮ



• ಮಲ್ಲಮ್ಮ ನುಡಿ ವಾರ್ತೆಬಾಗಲಕೋಟೆ

,13– ಪ್ರಾದೇಶಿಕ ಮತ್ತು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಹಾಗೂ ತಾರಾಲಯಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳು ಭೇಟಿ ನೀಡುವಂತೆ ಮಾಡಲು ವಿವಿಧ ಕಾರ್ಯಕ್ರಮಗಳನ್ನು ರೂಪಿಸುವಂತೆ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಅಧಿಕಾರಿಗಳಿಗ ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ಜರುಗಿದ ಪ್ರಾದೇಶಿಕ ಮತ್ತು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಹಾಗೂ ತಾರಾಲಯಗಳಿಗೆ ಸಂದರ್ಶಕ ಸಂಖ್ಯೆ ಹೆಚ್ಚಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶೇಷವಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳನ್ನು ಆಕರ್ಷಿಸಲು ವಿಜ್ಞಾನ ಪ್ರದರ್ಶನಗಳು, ಆಕಾಶ ವೀಕ್ಷಣೆ ಕಾರ್ಯಕ್ರಮಗಳು, ವಿಜ್ಞಾನ ಮಾದರಿ ಪ್ರದರ್ಶನ, ವಿಜ್ಞಾನ ಮೇಳ ಹಾಗೂ ಖಗೋಳಶಾಸ್ತ್ರ ಕುರಿತು ಕಾರ್ಯಕ್ರಮಗಳನ್ನು ಆಯೋಜಿಸಲು ತಿಳಿಸಿದರು. ಗ್ರಾಮೀಣ ಹಾಗೂ ನಗರ ಪ್ರದೇಶಗಳ ವಿದ್ಯಾರ್ಥಿಗಳಿಗೆ ವಿಜ್ಞಾನ ಕೇಂದ್ರಗಳ ಮಹತ್ವ ತಿಳಿಸುವ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ತಾರಾಲಯಗಳಲ್ಲಿ ಹೊಸ ತಂತ್ರಜ್ಞಾನ ಆಧಾರಿತ ಪ್ರದರ್ಶನ, ಡಿಜಿಟಲ್ ಆಕಾಶ ವೀಕ್ಷಣೆ, ಮಕ್ಕಳಿಗೆ ಅನುಕೂಲಕರ ವಿಜ್ಞಾನ ಚಟುವಟಿಕೆಗಳನ್ನು ಪರಿಚಯಿಸುವ ಮೂಲಕ ಸಂದರ್ಶಕರನ್ನು ಸೆಳೆಯುವ ಪ್ರಯತ್ನ ಮಾಡಬೇಕು. ವಿಜ್ಞಾನ ಸ್ಪರ್ಧೆಗಳು, ಕುಟುಂಬ ಸಮೇತ ಭೇಟಿ ನೀಡಲು ಅನುಕೂಲಕರ ಚಟುವಟಿಕೆಗಳು ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರ ಕಾರ್ಯವನ್ನು ಕೈಗೊಳ್ಳಲು ತಿಳಿಸಿದರು. ಶಿಕ್ಷಣ ಇಲಾಖೆಯ ಅಧಿಕಾರಿಗಳು ಐಟಿಐ, ಪಾಲಿಟೆಕ್ನಿಕ್, ಪದವಿ ಪೂರ್ವ, ಪದವಿ ಕಾಲೇಜುಗಳು, ತಾಂತ್ರಿಕ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಸಂಬಂಧಪಟ್ಟ ಇತರೆ ಇಲಾಖೆಗಳ ಸಮನ್ವಯ ಸಭೆ ಕರೆದು ಎಲ್ಲ ವಿದ್ಯಾರ್ಥಿಗಳು ವರ್ಷಕ್ಕೆ ಕನಿಷ್ಟ ಒಂದು ಬಾರಿಯಾದರೂ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚನೆ ನೀಡಿದರು. ಸಭೆಯಲ್ಲಿ ತೋಟಗಾರಿಕೆ ವಿವಿಯ ರಜಿಸ್ಟರ ಡಾ.ಜನಾರ್ಧನ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಂಡಲೀಕ ಕಾಂಬಳೆ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎ.ಸಿ.ಮನ್ನಿಕೇರಿ, ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯ ಪರಶುರಾಮ ಲಮಾಣಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಂಕಜ, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಯುವಕ-ಯುವತಿಯರು ಕಠಿಣ ಪರಿಶ್ರಮದಿಂದ ಬಾನೆತ್ತರಕ್ಕೆ ಬೆಳೆಯಬೇಕು

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ನಗರದ ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರದಲ್ಲಿ ಐಟಿಸಿಸಿ ಬ್ಯಾಚ್ ಉದ್ಘಾಟನಾ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಯೋಜಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಫಾದರ್ ಪಿ. ಎಸ್. ಜಾರ್ಜ್ ಅವರು ಉದ್ಘಾಟನಾ ಭಾಷಣ ಮಾಡುತ್ತಾ, ಯುವಕ–ಯುವತಿಯರು ಜೀವನದಲ್ಲಿ ಕಠಿಣ ಪರಿಶ್ರಮ, ನಿಷ್ಠೆ ಹಾಗೂ ಆತ್ಮವಿಶ್ವಾಸವನ್ನು ಅಳವಡಿಸಿಕೊಂಡಾಗ ಮಾತ್ರ ಉನ್ನತ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಅವರು ಮಾತನಾಡಿ, ಯಾವುದೇ ಕೆಲಸ ಆರಂಭದಲ್ಲಿ ಸುಲಭವಾಗಿರುವುದಿಲ್ಲ.ನಿರಂತರ ಪ್ರಯತ್ನ, ಆಸಕ್ತಿ ಹಾಗೂ ಪರಿಶ್ರಮದಿಂದ ಮಾತ್ರ ಯಶಸ್ಸು ಸಾಧಿಸಲು ಸಾಧ್ಯ. ಡಾನ್ ಬೋಸ್ಕೋ ಸಂಸ್ಥೆ ನೀಡುತ್ತಿರುವ ಉಚಿತ ಕೌಶಲ್ಯ ತರಬೇತಿಯನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಂಡು ಉತ್ತಮ ಉದ್ಯೋಗ ಪಡೆದು ತಮ್ಮ ಕುಟುಂಬದ ಆರ್ಥಿಕ ಸ್ಥಿತಿಯನ್ನು ಸುಧಾರಿಸಿಕೊಳ್ಳಬೇಕು" ಎಂದು ತಿಳಿಸಿದರು.ತಮ್ಮ ಭಾಷಣದಲ್ಲಿ ಹದ್ದು ತನ್ನ ಮರಿಗಳನ್ನು ಎತ್ತರಕ್ಕೆ ಹಾರಲು ತರಬೇತಿ ನೀಡುವ ರೀತಿಯ ಉದಾಹರಣೆ ಹಾಗೂ ವಿಶ್ವಪ್ರಸಿದ್ಧ ಲೇಖಕಿ ಜೆ. ಕೆ. ರೌಲಿಂಗ್ ಅವರ ಜೀವನ ಸಾಧನೆಯನ್ನು ಉಲ್ಲೇಖಿಸಿದ ಅವರು,"ಸೋಲು–ಗೆಲುವುಗಳು ಜೀವನದ ಸಹಜ ಭಾಗ. ಆದರೆ ಸವಾಲುಗಳಿಗೆ ಹೆದರದೆ ಮುಂದೆ ಸಾಗುವ ವ್ಯಕ್ತಿಯೇ ಯಶಸ್ಸಿನ ಶಿಖರ ತಲುಪುತ್ತಾನೆ" ಎಂದು ಪ್ರೇರಣಾದಾಯಕ ಸಂದೇಶ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಫಾದರ್ ಸಜಿ ಜಾರ್ಜ್ ಅವರು, "ಜೀವನದಲ್ಲಿ ಏಳು–ಬೀಳುಗಳು ಸಾಮಾನ್ಯ. ನಾವು ಏನನ್ನೇ ಕಲಿಯುವಾಗಲೂ ಸವಾಲುಗಳು ಎದುರಾಗುತ್ತವೆ. ಆದರೆ ಧೈರ್ಯ, ತಾಳ್ಮೆ ಹಾಗೂ ಸತತ ಪರಿಶ್ರಮದಿಂದ ಮಾತ್ರ ಗುರಿ ಸಾಧಿಸಲು ಸಾಧ್ಯ" ಎಂದು ಹೇಳಿದರು.

ಅವರು ಮುಂದುವರಿದು, "ಡಾನ್ ಬೋಸ್ಕೋ ಸಂಸ್ಥೆಯು ಕಳೆದ ಸುಮಾರು 25 ವರ್ಷಗಳಿಂದ ಯಾದಗಿರಿ ಜಿಲ್ಲೆಯಲ್ಲಿ ಬಡವರು, ಮಹಿಳೆಯರು, ಮಕ್ಕಳು, ನಿರ್ಗತಿಕರು ಹಾಗೂ ಯುವಜನರ ಅಭಿವೃದ್ಧಿಗಾಗಿ ವಿವಿಧ ಸಮಾಜಮುಖಿ ಯೋಜನೆಗಳನ್ನು ಯಶಸ್ವಿಯಾಗಿ ನಡೆಸುತ್ತಿದೆ. ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ಆರೋಗ್ಯ ಕ್ಷೇತ್ರಗಳಲ್ಲಿ ಸಂಸ್ಥೆ ಮಹತ್ವದ ಸೇವೆ ಸಲ್ಲಿಸುತ್ತಿದೆ" ಎಂದು ತಿಳಿಸಿದರು.

ಈ ವಿಶೇಷ ಸಂದರ್ಭದಲ್ಲಿ ಫಾದರ್ ಸಜಿ ಜಾರ್ಜ್ ಅವರ ಜನ್ಮದಿನವನ್ನು ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರದ ವತಿಯಿಂದ ಸಡಗರ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಕೇಕ್ ಕತ್ತರಿಸಿ ಶುಭಾಶಯಗಳನ್ನು ಕೋರಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಫಾದರ್ ಶಾಬು ಫ್ರಾನ್ಸಿಸ್ ಅವರು, "ಉಚಿತ ಕೌಶಲ್ಯ ತರಬೇತಿಯ ಅವಕಾಶವನ್ನು ವಿದ್ಯಾರ್ಥಿಗಳು ಸಂಪೂರ್ಣವಾಗಿ ಸದುಪಯೋಗಪಡಿಸಿಕೊಳ್ಳಬೇಕು. ತರಬೇತಿ ಪೂರ್ಣಗೊಂಡ ನಂತರ ಉತ್ತಮ ಉದ್ಯೋಗ ಪಡೆದು ಕುಟುಂಬದ ಜವಾಬ್ದಾರಿಯನ್ನು ನಿಭಾಯಿಸಿದಾಗ ಮಾತ್ರ ಈ ತರಬೇತಿ ಅರ್ಥಪೂರ್ಣವಾಗುತ್ತದೆ" ಎಂದು ಹೇಳಿದರು.

ಅವರು ಮುಂದುವರಿದು,"ಎರಡು ತಿಂಗಳ ತರಬೇತಿ ಅವಧಿಯಲ್ಲಿ ಸಮಯಪಾಲನೆ, ಶ್ರದ್ಧೆ, ಆಸಕ್ತಿ ಹಾಗೂ ಕಠಿಣ ಪರಿಶ್ರಮದಿಂದ ಕಲಿತರೆ ಜೀವನದಲ್ಲಿ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಬಹುದು. ಪ್ರತಿಯೊಬ್ಬ ವಿದ್ಯಾರ್ಥಿಯೂ ಆತ್ಮವಿಶ್ವಾಸದಿಂದ ಮುಂದೆ ಬರಬೇಕು" ಎಂದು ಸಲಹೆ ನೀಡಿದರು.ಇದೇ ಸಂದರ್ಭದಲ್ಲಿ ಫಾದರ್ ಪಿ. ಎಸ್. ಜಾರ್ಜ್ ಅವರ ಸಮಾಜಮುಖಿ ಕಾರ್ಯಗಳನ್ನು ಶ್ಲಾಘಿಸಿ ಹೃತ್ಪೂರ್ವಕ ಅಭಿನಂದನೆ ಸಲ್ಲಿಸಲಾಯಿತು. ಡಾನ್ ಬೋಸ್ಕೋ ಸಮಾಜ ಸೇವಾ ಕೇಂದ್ರದ ವತಿಯಿಂದ ಅವರಿಗೆ ಸನ್ಮಾನ ಕಾರ್ಯಕ್ರಮವೂ ನಡೆಯಿತು.

ಕಾರ್ಯಕ್ರಮದ ಪ್ರಸ್ತಾವಿಕ ಭಾಷಣ ಮಾಡಿದ ಡಾನ್ ಬೋಸ್ಕೋ ಟೆಕ್ ಸಂಯೋಜಕರಾದ ಮಲ್ಲಿಕಾರ್ಜುನ ಕುರುಕುಂದಿ ಅವರು, ಡಾನ್ ಬೋಸ್ಕೋ ಕೌಶಲ್ಯ ತರಬೇತಿ ಯೋಜನೆಗಳ ಕುರಿತು ವಿವರ ನೀಡಿ, "ಈ ವರ್ಷ ಸುಮಾರು 150 ವಿದ್ಯಾರ್ಥಿಗಳಿಗೆ ತರಬೇತಿ ನೀಡುವ ಗುರಿ ಹೊಂದಲಾಗಿದೆ. ಗ್ರಾಮೀಣ ಭಾಗದ ಯುವಕರು ಈ ಅವಕಾಶವನ್ನು ಬಳಸಿಕೊಂಡು ತಮ್ಮ ಜೀವನವನ್ನು ಉತ್ತಮ ದಾರಿಗೆ ಕೊಂಡೊಯ್ಯಬೇಕು" ಎಂದು ಹೇಳಿದರು.

ಮೈಂಡ್ಸ್ ಯೋಜನೆಯ ಸಂಯೋಜ–ಕರಾದ ಶರಣಪ್ಪ ಸಿ. ಅಮರಾಪುರ ಅವರು ಮಾತನಾಡಿ, "ಡಾನ್ ಬೋಸ್ಕೋ ಸಂಸ್ಥೆಯ ಅಡಿಯಲ್ಲಿ ಯಾದಗಿರಿಯಲ್ಲಿ ಐದು ಪ್ರಮುಖ ಯೋಜನೆಗಳು ಕಾರ್ಯನಿರ್ವಹಿಸುತ್ತಿವೆ. ಅವುಗಳಲ್ಲಿ ಬ್ರೆಡ್ಸ್ ಬೆಂಗಳೂರು ಸಂಸ್ಥೆಯ ಸಹಯೋಗದಲ್ಲಿ ನಡೆಯುತ್ತಿರುವ ಮೈಂಡ್ಸ್ ಯೋಜನೆ, ಜೀವನೋಪಾಯ ಯೋಜನೆ ಹಾಗೂ ಸಂಚಾರಿ ಆಸ್ಪತ್ರೆ ಈ 3 ಯೋಜನೆಗಳು ನೇರವಾಗಿ ಬ್ರೆಡ್ಸ್ ಬೆಂಗಳೂರು ಸಹಯೋಗದಲ್ಲಿ ನಡೆದು, ಸಮಾಜದ ಬಡ ಮತ್ತು ಹಿಂದುಳಿದ ವರ್ಗಗಳಿಗೆ ಮಹತ್ವದ ಸೇವೆ ನೀಡುತ್ತಿವೆ" ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಡಿಬಿ ಟೆಕ್ ವಿದ್ಯಾರ್ಥಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಯೋಜನೆಗಳ ಸದಸ್ಯರು ಭಾಗವಹಿಸಿದ್ದರು. ಮೈಂಡ್ಸ್ ಯೋಜನೆಯ ಆಪ್ತಸಮಾಲೋಚಕರಾದ ಸೂರ್ಯಕಾಂತ್ ಸ್ವಾಗತಿಸಿದರು. ಸಂಚಾರಿ ಆಸ್ಪತ್ರೆಯ ಆರೋಗ್ಯ ಕಾರ್ಯಕರ್ತೆ ಮರಿಯಮ್ಮ ವಂದಿಸಿದರು. ಡಿಬಿ ಟೆಕ್ ವಿದ್ಯಾರ್ಥಿನಿ ಸ್ವಾತಿ ಕಾರ್ಯಕ್ರಮ ನಿರೂಪಿಸಿದರು.

# ನೀಟ್ ಪೇಪರ್ ಸೋರಿಕೆ ಖಂಡಿಸಿ ಯುವ ಕಾಂಗ್ರೆಸ್ ಬೃಹತ್ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನೀಟ್ ಪರೀಕ್ಷೆಯ ಪೇಪರ್ ಸೋರಿಕೆ ಪ್ರಕರಣವನ್ನು ಖಂಡಿಸಿ ಯುವ ಕಾಂಗ್ರೆಸ್ ಕಲಬುರಗಿ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಬುಧವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು. ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಶಕೀಲ ಅಹ್ಮದ್ ಸರಡಗಿ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಕಾರ್ಯಕರ್ತರು ಟಯರ್‌ಗೆ ಬೆಂಕಿ ಹಚ್ಚಿ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಭಾರತ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಶ್ರೀನಿವಾಸ್ ರಾಥೋಡ್ ಭಾಗವಹಿಸಿ ಮಾತನಾಡಿ, "ನೀಟ್ ಪರೀಕ್ಷೆಯ ಪೇಪರ್ ಸೋರಿಕೆಯಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಆತಂಕಕ್ಕೆ ಸಿಲುಕಿದೆ. ಕೇಂದ್ರ ಸರ್ಕಾರ ಹಾಗೂ ಪರೀಕ್ಷಾ ವ್ಯವಸ್ಥೆಯ ವೈಫಲ್ಯದಿಂದ ವಿದ್ಯಾರ್ಥಿಗಳು ಮಾನಸಿಕ ಒತ್ತಡಕ್ಕೆ ಒಳಗಾಗಿದ್ದಾರೆ. ಪಾರದರ್ಶಕ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು" ಎಂದು ಆಗ್ರಹಿಸಿದರು.

ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಶಕೀಲ ಅಹ್ಮದ್ ಸರಡಗಿ ಮಾತನಾಡಿ, "ದೇಶದ ಯುವಕರ ಕನಸುಗಳೊಂದಿಗೆ ಆಟವಾಡುವಂತಹ ಘಟನೆಗಳನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ. ವಿದ್ಯಾರ್ಥಿಗಳ ಶ್ರಮಕ್ಕೆ ನ್ಯಾಯ ದೊರಕಬೇಕು. ನೀಟ್ ಪರೀಕ್ಷಾ ಅವ್ಯವಸ್ಥೆ ಕುರಿತು ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಬೇಕು" ಎಂದು ಒತ್ತಾಯಿಸಿದರು.ಪ್ರತಿಭಟನೆಯಲ್ಲಿ ಯುವ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಿವಾನಂದ್ ಹೊನಗುಂಟಿ, ಈರಣ್ಣ ಪಾಟೀಲ್ ಜಳಕಿ, ಕಾರ್ತಿಕ್ ನಾಟೀಕರ್, ಫಾರೂಕ್ ಪಟೇಲ್ ಮುದುಬಾಳ, ವಿಘ್ನೇಶ್ವರ ಟೈಗರ್, ಪರಶುರಾಮ್ ನಾಟೀಕರ್, ಅಣವೀರಯ್ಯ ಮಠಪತಿ, ಚಂದ್ರು ಹಡಪದ್, ರಾಜು ಮಾಳಗಿ, ಪ್ರದೀಪ್ ದೊಣ್ಣೂರ್, ಅಸ್ಲಾಂ ಸಿಂದಗಿ, ಆಜ್ವಾರ್ ಬಾದಾಲ್, ಎಸ್ ಕೆ ಶೋಯಬ್, ಪ್ರಜ್ಞಾನಂದ ಸಂಗೊಳ್ಳಿ, ಅಸಿಮ್ ಪಟೇಲ, ಆಮೆರ್ ಮರ್ಚಂಟ್, ಖುರಂ ಕಲ್ಯಾಣಿ ಸೇರಿದಂತೆ ನೂರಾರು ಯುವ ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು.

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಖಂಡಿಸಿ ಎಸ್‌ಎಫ್‌ಐ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ನೀಟ್ ಯುಜಿ–2026 ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಸಮಗ್ರವಾಗಿ ತನಿಖೆ ನಡೆಸಬೇಕು ಹಾಗೂ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ)ಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ಜಿಲ್ಲಾ ಸಮಿತಿಯವರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.ಪ್ರತಿಭಟನಾಕಾರರು ನೀಟ್ ಪರೀಕ್ಷೆಯ ಪಾರದರ್ಶಕತೆ ಹಾಗೂ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆ ಉಂಟಾಗುವಂತಹ ಘಟನೆಗಳ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸರ್ವೇಶ ಮಾವಿನ, ಸುಜಾತ ವೈ, ಪ್ರದೀಪ, ಇಮಾಮಸಾಬ್, ತಾಯಣ್ಣ, ಪ್ರೇಮದಾಸ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.



## ಪುಸ್ತಕದಾನ ಮಹತ್ಕಾರ್ಯ ಆಸಕ್ತರು ಸಹಕರಿಸಲು ಮನವಿ

**ಹುಬ್ಬಳ್ಳಿ:** ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ಕಳೆದ ಒಂದು ದಶಕದಲ್ಲಿ ಮೂರು ಲಕ್ಷಕ್ಕೂ ಹೆಚ್ಚು ಕನ್ನಡ ಸಾಹಿತ್ಯದ ಕೃತಿಗಳನ್ನು ಆಸಕ್ತರಿಗೆ ಉಚಿತ ಹಂಚುವ ಮೂಲಕ ಕನ್ನಡ ಸಾರಸ್ವತಲೋಕದಲ್ಲಿ ಒಂದು ಧಾಖಲೆ ನಿರ್ಮಿಸಿದೆ.

ಇದೀಗ ಅಧಿಕಮಾಸದ ಸಂದರ್ಭದಲ್ಲಿ ( ಮೇ 17 ರಿಂದ ಜೂನ 14 ) ಅನೇಕ ಸಾಹಿತ್ಯ ಕಾರ್ಯಕ್ರಮಗಳ ಮೂಲಕ ಆಸಕ್ತರಿಗೆ ಪುಸ್ತಕ ವಿತರಣೆ ಮಾಡುವ ಯೋಜನೆ ಹಾಕಿಕೊಂಡಿದೆ.

ಮೇ 24 ಭಾನುವಾರ ಉಡುಪಿ ರಾಜಾಂಗಣ ಸಭಾಂಗಣದಲ್ಲಿ ನಂತರದಲ್ಲಿ ತಿರುಪತಿ ಹಾಗೂ ಮಂತ್ರಾಲಯದಲ್ಲಿ ಕಾರ್ಯಕ್ರಮ ರೂಪಿಸುವ ಕಾರ್ಯ ನಿರ್ವಹಿಸುತ್ತಿದೆ, ದಿನ ನಿಗದಿಯಾಗಿಲ್ಲ, ಎಲ್ಲ ಕ್ಷೇತ್ರದಲ್ಲಿ ಸುಮಾರು 50 ದಂಪತಿಗಳಿಗೆ ತಲಾ ಹತ್ತು ವಿವಿಧ ಪುಸ್ತಕಗಳನ್ನು ಹಂಚುವ ಉದ್ದೇಶ ಇದೆ. ದಾನ ಪಡೆದವರು ಅಷ್ಟು ಪುಸ್ತಕ ಬೇಡ ಅಂದರೆ ಅವರ ಹೆಸರಿನಲ್ಲಿ ರಾಜ್ಯದ ಕೊಳಗೇರಿ ಮಕ್ಕಳು ಓದುವ ಸರ್ಕಾರಿ ಕನ್ನಡ ಶಾಲೆಗಳಿಗೆ ಮತ್ತು ಕಾರಾಗ್ರಹಗಳಿಗೆ ನೀಡುವ ಯೋಜನೆ ರೂಪಿಸಲಾಗಿದೆ.

ಕಚುಸಾಪ ಹಮ್ಮಿಕೊಂಡ ಪುಸ್ತಕ ಹಂಚಿಕೆ ಆಂದೋಲನಕ್ಕೆ ಆಸಕ್ತರು ತಮ್ಮ ಸಂಗ್ರಹದ ಹೆಚ್ಚುವರಿ ಪುಸ್ತಕ ನೀಡಬಹುದು, ಮೇ 15 ರ ಒಳಗಾಗಿ " ಕಚುಸಾಪ ಪುಸ್ತಕದಾಸೋಹ, ಕಾರ್ಯಾಲಯ, ಬಳಿಗಾರ ಓಣಿ ರಸ್ತೆ, ಅಯ್ಯಂಗಾರ್ ಬೇಕರಿ ಹಿಂದೆ, ಸಿದ್ದಪ್ಪಜ್ಜನ ಮಠ ಎದುರಿಗೆ, ಎನ್.ಎಚ್.4, ಹುಬ್ಬಳ್ಳಿ ಸಿಟಿ ಬಸ್ ನಿಲುಗಡೆ ಬಳಿ, ಉಣಕಲ್ಲ- ಹುಬ್ಬಳ್ಳಿ 580031 ( ಮೊಬೈಲ್ 9482181305) ಇವರಿಗೆ ತಲುಪಿಸಬಹುದು ಎಂದು ಸಂಚಾಲಕ ಕೃಷ್ಣಮೂರ್ತಿ ಕುಲಕರ್ಣಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಲಿಡ್ಕರ್ ಮಾರಾಟ ಮಳಿಗೆ: ಶೇ.15 ರಷ್ಟು ರಿಯಾಯಿತಿ

**ಬಾಗಲಕೋಟೆ:** ಬಾಗಲಕೋಟೆಯಲ್ಲಿ ಲಿಡ್ಕರ್ ಮಾರಾಟ ಮಳಿಗೆ ಪ್ರಾರಂಭೋತ್ಸವ ಹಾಗೂ ಬಕ್ರೀದ್ ಹಬ್ಬದ ಪ್ರಯುಕ್ತ ಗ್ರಾಹಕರು ಖರೀದಿಸಿದ ಎಲ್ಲ ಚರ್ಮ ಉತ್ಪನ್ನಗಳ ಮೇಲೆ ಶೇ.15 ರಷ್ಟು ರಿಯಾಯಿತಿ ನೀಡಲಾಗುತ್ತಿದೆ. ಈ ರಿಯಾಯಿತಿ ಮೇ 31 ವರೆಗೆ ನೀಡಲಾಗುತ್ತಿದೆ. ಮಾರಾಟ ಮಳಿಗೆಯಲ್ಲಿ ಅಪ್ಪಟ ಚರ್ಮದ ಗುಣಮಟ್ಟ ಹೊಂದಿದ ಮಹಿಳೆಯರ ಪಾದರಕ್ಷೆ, ವ್ಯಾನಿಟಿ ಬ್ಯಾಗ್, ಪರ್ಸ ಮತ್ತು ಪುರುಷರ ಪಾದರಕ್ಷೆ, ಬೂಟ್, ಸ್ಯಾಂಡಲ್, ಪಾದರಕ್ಷೆ, ಬೆಲ್ಟ್, ಕಾರ್ಡ ಹೋಲ್ಡರ ಹಾಗೂ ಟ್ರಾವೆಲ್ ಬ್ಯಾಗ್ ಎಕ್ಸಿಕೂಟಿವ್ ಬ್ಯಾಗ್, ಕೀ ಚೈನ್, ವೆಸ್ಟ ಪೋಚ್‌ಗಳು ರಿಯಾಯಿತಿ ದರದಲ್ಲಿ ದೊರೆಯಲಿವೆ ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ನೇಮಕ

**ಬಾಗಲಕೋಟೆ:** ಹುನಗುಂದ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಒಟ್ಟು 9 ಅಂಗನವಾಡಿ ಕಂ ಕ್ರಷ್ ಕೇಂದ್ರಗಳು ಮಂಜೂರಾಗಿದ್ದು, 9 ಅಂಗನವಾಡಿ ಕಂ ಕ್ರಷ್ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಕರ್ತೆ ಹುದ್ದೆಗೆ ಮಾಸಿಕ 5500 ರೂ, ಹಾಗೂ ಕಂ ಕ್ರಷ್ ಸಹಾಯಕಿ ಹುದ್ದೆಗೆ 3 ಸಾವಿರ ರೂ.ಗಳ ಗೌರವಧನ ನಿಗಧಿಪಡಿಸಲಾಗಿದೆ. ಷರತ್ತುಗಳ ಅನುಸಾರ ಅವಶ್ಯಕ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಶೀಲ್ ಮಾಡಿದ ಪೆಟ್ಟಿಗೆಯಲ್ಲಿ ಖುದ್ದಾಗಿ ಜೂನ್ 12 ರೊಳಗಾಗಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅಂಚೆ, ಕೊರಿಯರ್, ಇ-ಮೇಲ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಇರುವದಿಲ್ಲವೆಂದು ಹುನಗುಂದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08351295080ಗೆ ಸಂಪರ್ಕಿಸಬಹುದಾಗಿದೆ.

## ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನ: ಅರ್ಜಿ ಆಹ್ವಾನ

**ಕಲಬುರಗಿ:** ಮಹಾನಗರಪಾಲಿಕೆ 2023-24ನೇ ಸಾಲಿನ ಎಸ್.ಎಫ್.ಸಿ. (ಮುಕ್ತನಿಧಿ) ಕಲಬುರಗಿ ಜಿಲ್ಲಾಧಿಕಾರಿಗಳಿಂದ ಅನುಮೋದನೆಗೊಂಡಿರುವ ಶೇ. 7.25ರ ಕ್ರಿಯಾ ಯೋಜನೆಯಡಿ ಎಂ.ಬಿ.ಬಿ.ಎಸ್./ಬಿಇ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ (03 ವಿದ್ಯಾರ್ಥಿಗಳಿಗೆ ಮಾತ್ರ) ಲ್ಯಾಪ್‌ಟಾಪ್ ಖರೀದಿಗಾಗಿ ಸಹಾಯಧನ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು ಆಡಳಿತ ಅವರು ತಿಳಿಸಿದ್ದಾರೆ. ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಮಾತ್ರ ಅರ್ಜಿ ಸಲ್ಲಿಸಬೇಕು. ಕಲಬುರಗಿ ನಗರದ ನಿವಾಸಿಯಾಗಿರಬೇಕು. ವಾರ್ಷಿಕ ಆದಾಯ 2.50 ಲಕ್ಷ ರೂ. ಮೀರಿರಬಾರದು. ಅರ್ಜಿಯೊಂದಿಗೆ ಆಧಾರ ಕಾರ್ಡ, ಪಡಿತರ ಚೀಟಿ ಹಾಗೂ ಚುನಾವಣಾ ಗುರುತಿನ ಚೀಟಿ ಕಡ್ಡಾಯವಾಗಿ ಲಗತ್ತಿಸಿಬೇಕು. ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಾನಗರ ಪಾಲಿಕೆಯ ಆವಕ ಶಾಖೆಯಿಂದ ಕಚೇರಿ ವೇಳೆಯಲ್ಲಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ದೃಢೀಕರಣದೊಂದಿಗೆ ಲಗತ್ತಿಸಿ 2026ರ ಮೇ 14 ರಿಂದ ಮೇ 21ರ ಸಂಜೆ 5.30 ಗಂಟೆಯೊಳಗಾಗಿ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಸಲ್ಲಿಸಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಪಾಲಿಕೆಯ ಶೇ 7.25ರ ಶಾಖೆಯನ್ನು ಹಾಗೂ ಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.



**ಹುಣಸೂರು ನಗರದ ಉಪ ವಿಭಾಗಾಧಿಕಾರಿ ಕಚೇರಿಯಲ್ಲಿ ಸಂಭಾಂಗಣ ದಲ್ಲಿ ಆಯೋಜಿಸಿದ್ದ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆಯನ್ನು ಹಾಗೂ ತಾಲೂಕು ಆಡಳಿತ ನೇತೃತ್ವದಲ್ಲಿ ಗಣ್ಯರ ಸಮ್ಮುಖದಲ್ಲಿ ನಡೆಯಿತು. ನಂತರ ಕಾರ್ಯಕ್ರಮದಲ್ಲಿ ತಾಸಿಲ್ದಾರ್ ಮಂಜುನಾಥ್ ಮಾತನಾಡಿ ಹೇಮರೆಡ್ಡಿ ಮಲ್ಲಮ್ಮ ಭಕ್ತಿ ತ್ಯಾಗ ಮತ್ತು ನಿಷ್ಠೆಯಿಂದ ಪ್ರತಿರೂಪವಾಗಿದ್ದರು ಸಮಾಜದಲ್ಲಿ ಕಡುಬಡತನದಲ್ಲಿ ಇರುವವರಿಗೆ ದಾನ ಧರ್ಮಗಳ ಮೂಲಕ ಜೀವನ ನೀಡಿದ್ದಾರೆ.ಸಮಾನತೆಯ ಕುರಿತು ಅಂದಿನ ಕಾಲದಲ್ಲಿ ಸಮಾಜಕ್ಕೆ ಸಂದೇಶಗಳನ್ನು ನೀಡಿ ಅದರಂತೆ ತಮ್ಮ ಜೀವನವನ್ನು ಜೀವನದಲ್ಲಿ ಪಾಲಿಸುವ ಮೂಲಕ ಶಿವಭಕ್ತ ಹೇಮರೆಡ್ಡಿ ಮಲ್ಲಮ್ಮ ಇಂದಿಗೂ ಅರ್ಥಪ್ರಾಯರಾಗಿ ಎಂದು ತಿಳಿಸಿದ್ದಾರೆ.**

# ನಿತ್ಯ ಯೋಗ ಶೀರ್ಷಿಕೆಯಡಿ ಆಯುಷ್ ಸಂಸ್ಥೆಗಳಲ್ಲಿ ಯೋಗ ಶಿಬಿರ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

ಈ ವರ್ಷ ವಿಶೇಷವಾಗಿ 'ನಿತ್ಯ ಯೋಗ' ಎಂಬ ಶೀರ್ಷಿಕೆಯಡಿ ಎಲ್ಲಾ ಆಯುಷ್ ಸಂಸ್ಥೆಗಳಲ್ಲಿ ಪ್ರತಿದಿನ ವಿಶೇಷ ಯೋಗ ಶಿಬಿರಗಳನ್ನು 365 ದಿನ ಸತತವಾಗಿ ನಡೆಯುವಂತೆ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ಅವರು ಇಂದು ಆರೋಗ್ಯ ಸೌಧದಲ್ಲಿ ಯೋಗ ದಿನಾಚರಣೆ ಆಚರಣೆಯ ಕುರಿತು ಮಾಹಿತಿ ನೀಡುವ ಸಲುವಾಗಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಕಳೆದ ಸಾಲಿನ ಯೋಗ ದಿನಾಚರಣೆಯಲ್ಲಿ ಘೋಷಿಸಿದಂತೆ ಮೈಸೂರು ಯೋಗ ಹಬ್ ಕಾರ್ಯಕ್ರಮವು ಈಗಾಗಲೇ ಆರಂಭಗೊಂಡಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಉಳಿದ ಜಿಲ್ಲೆಗಳಿಗೂ ಸಹ ಈ ಕಾರ್ಯಕ್ರಮವನ್ನು ವಿಸ್ತರಿಸುವ ಮಹತ್ವಾಕಾಂಕ್ಷೆಯ ಯೋಜನೆಯನ್ನು ಈಗಾಗಲೇ ರೂಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು. ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಪ್ರತಿವರ್ಷ ಜೂನ್ 21 ಆಚರಿಸುವುದು ಒಂದು ಸಂಪ್ರದಾಯವಾಗಿದೆ. 2015ರಲ್ಲಿ ಪ್ರಥಮ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಿದ್ದು, ಇದು



ಪ್ರಸ್ತುತ ದಿನಾಚರಣೆಯಾಗಿರುತ್ತದೆ. ಈ ವರ್ಷದ ಘೋಷವಾಕ್ಯ 'ಆರೋಗ್ಯ, ಜ್ಞಾನ ಮತ್ತು ವಿಶ್ವಶಾಂತಿಗಾಗಿ ಯೋಗ' ಎಂಬ ವಿಶಾಲವಾದ ದೃಷ್ಟಿಕೋನದ ಆಚರಣೆಯಾಗಿದೆ. ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಈಗಾಗಲೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲು ಸೂಚನೆಯನ್ನು ನೀಡಿದ್ದು, ಅದರಂತೆ ಕರ್ನಾಟಕದಲ್ಲಿ ಪ್ರಸಕ್ತ ಸಾಲಿನಲ್ಲಿ ಅನೇಕ ವಿನೂತನ ವಿಶೇಷ ಕಾರ್ಯಕ್ರಮಗಳ ಮೂಲಕ ಮನೆ-ಮನೆಗೂ ಯೋಗ, ಎಲ್ಲರಿಗೂ ಯೋಗ ಎಂಬ ವಿಶಾಲ ದೃಷ್ಟಿಕೋನದಿಂದ ಸಾಂಕೇತಿಕವಾಗಿ ಒಂದು ದಿನದ ಆಚರಣೆಯನ್ನು ವಿಜೃಂಭಣೆಯಿಂದ ಆಚರಿಸುವ ಸದುದ್ದೇಶವನ್ನು ಹೊಂದಲಾಗಿದೆ ಎಂದು ತಿಳಿಸಿದರು.

ಅಂದು ರಾಜ್ಯ ಮಟ್ಟದ ಕಾರ್ಯಕ್ರಮವನ್ನು ಬೆಂಗಳೂರಿನ ವಿಧಾನಸೌಧದ ಆವರಣದಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ. ಈ ಕಾರ್ಯಕ್ರಮವನ್ನು ಹಲವಾರು ಸಂಘ ಸಂಸ್ಥೆಗಳು, ಆಯುಷ್ ಕಾಲೇಜುಗಳು ಹಾಗೂ ಯೋಗ ಬಂಧುಗಳ ಸಹಕಾರದಿಂದ ಜೂನ್ 21 ರ ಮುಂಜಾನೆ 6 ಗಂಟೆಯಿಂದ 8 ಗಂಟೆಯವರೆಗೆ 5000 ಯೋಗ ಬಂಧುಗಳ ಯೋಗಾಭ್ಯಾಸ ಕಾರ್ಯಕ್ರಮಗಳ ಮೂಲಕ ಕೇಂದ್ರ ಸರ್ಕಾರದ ಯೋಗ ಶಿಷ್ಟಾಚಾರದಂತೆ ಆಯೋಜಿಸಲು ಕ್ರಮಕೈಗೊಳ್ಳಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಘನತೆವೆತ್ತ ರಾಜ್ಯಪಾಲರಾದ ಶ್ರೀಯುತ ಥಾವರ್ ಚಂದ್ ಗೆಹ್ಲೋಟ್ ರವರು ನೆರವೇರಿಸಲಿದ್ದು, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಉಪಸ್ಥಿತರಿರಲಿದ್ದಾರೆ. ಈ ಕಾರ್ಯಕ್ರಮವನ್ನು ಜನಪ್ರಿಯಗೊಳಿಸುವ ಸಲುವಾಗಿ ಕರ್ನಾಟಕದ ಗಣ್ಯವ್ಯಕ್ತಿಗಳನ್ನು ಅಂತಾರಾಷ್ಟ್ರೀಯ ಕ್ರೀಡಾಸಾಧಕರನ್ನು ಹಾಗೂ ಚಂದನವನದ ಸಿನಿ ತಾರೆಯರನ್ನು ಸಹ ಈ ಕಾರ್ಯಕ್ರಮಕ್ಕೆ ಆಹ್ವಾನ ನೀಡಲು. ಈಗಾಗಲೇ ಕ್ರಮ ಕೈಗೊಳ್ಳಲಾಗಿದ್ದು, ಆಯುಷ್ ಮಂತ್ರಾಲಯವು ಸೂಚಿಸಿರುವ 45 ನಿಮಿಷಗಳ ಯೋಗ ಪ್ರಾತ್ಯಕ್ಷಿಕೆಯನ್ನು ಸಹ ಪ್ರದರ್ಶಿಸಲಾಗುವುದು.

ಈ ನಿಟ್ಟಿನಲ್ಲಿ ಹಲವಾರು ರಾಜ್ಯಮಟ್ಟದ, ಜಿಲ್ಲಾಮಟ್ಟದ, ತಾಲ್ಲೂಕು ಮಟ್ಟದ ಮತ್ತು ವಿಶೇಷವಾಗಿ ಗ್ರಾಮಾಂತರ ಪ್ರದೇಶಗಳಲ್ಲಿ ವಿಶೇಷ ಕಾರ್ಯಕ್ರಮಗಳ ಮೂಲಕ ಯೋಗದ ಅರಿವನ್ನು ಮೂಡಿಸುವ ಸಲುವಾಗಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ 100 ದಿನದ ಕ್ಷಣಗಣನೆಯ ಕಾರ್ಯಕ್ರಮಗಳು ಈಗಾಗಲೇ ಆರಂಭಗೊಂಡಿದ್ದು, ಆಯುಷ್ ಇಲಾಖೆಯು ಈಗಾಗಲೇ ಹತ್ತು ಹಲವು ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸಲು ಆರಂಭಿಸಿದ್ದು, ಈಗಾಗಲೇ 12 ರಾಷ್ಟ್ರೀಯ ಮಟ್ಟದ ಯೋಗ ಸ್ಪರ್ಧೆಗಳ ಕಾರ್ಯಕ್ರಮಗಳನ್ನು ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರ ಮೈಸೂರಿನ ಸಹಯೋಗದೊಂದಿಗೆ ಆರಂಭಿಸಲಾಗಿದೆ ಎಂದರು.

ಜೂನ್ ಎರಡನೇ ವಾರದಲ್ಲಿ ಬೆಂಗಳೂರಿನ ಪ್ರಸಿದ್ಧ ಕಿದ್ವಾಯಿ ಆಸ್ಪತ್ರೆಯ ಸಭಾಂಗಣದಲ್ಲಿ 'ಕಾರ್ಸಿನೋ ಯೋಗ' ಎಂಬ ವಿಚಾರ ಸಂಕೀರ್ಣವನ್ನು ಆಯೋಜಿಸಲಾಗಿದ್ದು, ಮೇ ಎರಡನೇ ವಾರದಲ್ಲಿ ಮೈಸೂರಿನ ಪ್ರಸಿದ್ಧ ಶ್ರೀ ಜಯದೇವ ಹೃದ್ರೋಗ ಸಂಸ್ಥೆ ಮತ್ತು ಆಸ್ಪತ್ರೆಯ ಸಭಾಂಗಣದಲ್ಲಿ 'ಕಾರ್ಡಿಯೋ ಯೋಗ' ಎಂಬ ವಿಚಾರ ಸಂಕೀರ್ಣವನ್ನು ಆಯೋಜಿಸಲಾಗಿದೆ.

# ಮಾನವೀಯತೆ ಮೆರೆದ ಪತ್ರಕರ್ತ ಹಾಗೂ ಸಮಾಜಸೇವಕ...

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಬೀಮ್ಸ್ ಆಸ್ಪತ್ರೆ ಮುಂದೆ ಬಸ್ ನಿಲ್ದಾಣದಲ್ಲಿ ಅನಾರೋಗ್ಯದಿಂದ ನರಳುತ್ತಿದ್ದ ಆನಾಥ ವೃದ್ಧೆ ಮಹಿಳೆಯನ್ನು ಗಮನಿಸಿದ ಸ್ಥಳೀಯ ಪತ್ರಕರ್ತ ಹಾಗೂ ಸಮಾಜಸೇವಕ ಎಂ. ಜಂಬುನಾಥ ಮಾನವೀಯತೆ ಮೆರೆದ ಘಟನೆ ಇಂದು ನಡೆದಿದೆ. ಗಮನಿಸಿದ ಪತ್ರಕರ್ತ 112 ವಾಹನಕ್ಕೆ ಕರೆ ಮಾಡಿ ಘಟನೆ ಸ್ಥಳಕ್ಕೆ ಕರೆಸಿ, ಆನಂತರ ಸರ್ಕಾರಿ 108 ವಾಹನಕ್ಕೆ ಕರೆ ಮಾಡಿ ಅವರನ್ನು ಸಹಕರಿಸಿದ್ದಾರೆ. ತದನಂತರ ಸ್ಥಳೀಯ ಮಹಾನಗರ ಪಾಲಿಕೆ ಸದಸ್ಯೆ ಹಾಗೂ ಮಾಜಿ ಮೇಯರ್ ರಾಜೇಶ್ವರಿ ಸುಬ್ಬರಾಯುಡು ಅವರಿಗೆ ಅನಾರೋಗ್ಯದಿಂದ ನೆರಳುತ್ತಿದ್ದ ಮಹಿಳೆಯ ಸಮಸ್ಯ ಬಗ್ಗೆ ತಿಳಿಸಿ ಅವರು ಸಹ ಘಟನಾ ಸ್ಥಳಕ್ಕೆ ಬಂದರು. ತುರ್ತು ಚಿಕಿತ್ಸೆಗಾಗಿ ಬೀಮ್ಸ್ ಆಸ್ಪತ್ರೆಯ ಎಮರ್ಜೆನ್ಸ್




ವಾರ್ಡಿನಲ್ಲಿ ಸಂಬಂಧಪಟ್ಟ ವೈದ್ಯರಿಗೆ ಮಹಾನಗರ ಪಾಲಿಕೆ ಸದಸ್ಯರು ಅನಾಥ ವೃದ್ಧೆ ಮಹಿಳೆ ಎಂದು ತಿಳಿಸಿ ಸೇರಿಸಿದ್ದಾರೆ. ಕಳೆದ ಒಂದು ವಾರದಿಂದ ಈ ಅನಾಥ ವೃದ್ಧೆ ಮಹಿಳೆ ಆಸ್ಪತ್ರೆ ಮುಂಭಾಗದ ಬಸ್ಸು ನಿಲ್ದಾಣದಲ್ಲಿ ಅನಾರೋಗ್ಯದಿಂದ ನೆರಳುತ್ತಿದ್ದು. ಯಾವುದು ಗುರುತು ಇಲ್ಲದ ವಾಹನ ಎರಡು ಕಾಲು ಹಾಗೂ ಸೊಂಟಕ್ಕೆ ತಗುಲಿಸಿ ಹೋಗಿದೆ ಎಂದು ತಿಳಿದುಬಂದಿದೆ. ಆ ಮಹಿಳೆಯನ್ನು ಪೊಲೀಸ್ ಸಿಬ್ಬಂದಿ ವಿಚಾರಿಸಿದಾಗ ಅವರದ್ದು ಕೊಳಗಲ್ಲು ಗ್ರಾಮ ಎಂದು ತಿಳಿದು ಬಂದಿದೆ. ಅವರಿಗೆ ಯಾರು ಇಲ್ಲ ಉಪ್ಪಾರ ಸಮಾಜ ಎಂದು ಆ ಮಹಿಳೆ ಹೆಸರು ಲಕ್ಷ್ಮೀದೇವಿ ಎಂದು ತಿಳಿದು ಬಂದಿದೆ. ಆ ವೃದ್ಧೆ ಮಹಿಳೆ ಮೇಲೆ ಬಟ್ಟೆ ಇಲ್ಲದೆ ಈ ಬಿಸಿಲಿಗೆ ನೆರಳುತ್ತಿದ್ದು. ಯಾರು ಸಹ ಮಾನವೀಯತೆ ಗೆ ಮುಂದೆ ಬಂದಿಲ್ಲ ದಿನನಿತ್ಯ ಸಾವಿರಾರು ಸಂಖ್ಯೆಯಲ್ಲಿ ಮಹಿಳೆಯರು ನೆರಳುತ್ತಿದ್ದ ಮಹಿಳೆಯ ಮುಂದೇನೆ ಆಸ್ಪತ್ರೆಗೆ ಮತ್ತು ಬಸ್ಸ್‌ಗಾಗಿ ಆ ನಿಲ್ದಾಣದಲ್ಲಿ ಕಾಯ್ತಾ ನೋಡುತ್ತಾ ಮುಂದೆ ಹೋಗುವ ಘಟನೆಗಳು ಕಂಡುಬಂದಿದ್ದಾವೆ. ಮತ್ತು ಮುಖ್ಯವಾಗಿ ಅನಾರೋಗ್ಯದಿಂದ ನೆರಳುತ್ತಿದ್ದ ಮಹಿಳೆಯ ಮುಂದೇನೆ ಅನೇಕ ವ್ಯಾಪಾರ ವಹಿವಾಟಿಕಗಳು ನಡೆಯುವ ಅಂಗಡಿಗಳು ಇದ್ದು ಅದಕ್ಕೆ ಸಂಬಂಧಪಟ್ಟ ಮಾಲೀಕರು ಕೆಲಸ ಮಾಡುವ ಸಿಬ್ಬಂದಿಗಳು ನೋಡುತ್ತಾ ಕಣ್ಣು ಮುಚ್ಚಿಕೊಂಡು ಹೋಗುವ ಘಟನೆಗಳು ಕಂಡುಬಂದಿದ್ದಾವೆ. ಈ ಎಲ್ಲಾದರಕಂತೆ ಇನ್ನೂ ಮುಖ್ಯವಾಗಿ ಬಸ್ಸು ನಿಲ್ದಾಣದಲ್ಲಿ ಕಂಡಕ್ಟರ್ ಡ್ರೈವರ್ ಗಳು ಸಹ ನೋಡುತ್ತಾ ಮುಂದಕ್ಕೆ ಹೋಗುವವರು ಇದ್ದಾರೆ. ಇಂದು ಮುಂಜಾನೆ ಸ್ಥಳೀಯ ಪತ್ರಕರ್ತ ಗಮನಿಸಿ ಮಾನವೀಯತೆ ಮೆರೆದಿದ್ದಾನೆ.

# ಜಿ.ಪಂ ಉಪ ಕಾರ್ಯದರ್ಶಿ ಸೇರಿ 17 ಮಂದಿ ಅಧಿಕಾರಿಗಳಿಗೆ ದಂಡ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು**

ಸಕಾಲಕ್ಕೆ ಮಾಹಿತಿ ನೀಡಲು ನಿರ್ಲಕ್ಷ್ಯ ವಹಿಸುವುದು ಸೇರಿದಂತೆ ವಿಚಾರಣೆಗೆ ಗೈರು ಹಾಜರಾಗಿ ಆಯೋಗದ ನೋಟಿಸ ಗೆ ಸ್ಪಂದನೆ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಲಕ್ಷ್ಮಣ ಶೃಂಗೇರಿ, ಹಾಗೂ ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯ ಪಾಲಾನಾ ಅಭಿಯಂತರ ದೇವಣ್ಣ ಕಟ್ಟಿ, ರಾಯಚೂರು ತಾಲೂಕು ಗ್ರೇಡ್ - 2 ತಹಸೀಲ್ದಾರ್ ಪರಶುರಾಮ್ ಸೇರಿ ಹಲವು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಗ್ರಾಮ ಪಂಚಾಯತ ಕಾರ್ಯದರ್ಶಿಗಳಿಗೆ ರಾಜ್ಯ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠ ದಿಂದ ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ತಿಳಿಸಿದ್ದಾರೆ.



ಏಪ್ರಿಲ್ ತಿಂಗಳಿನಲ್ಲಿ ನಡೆದ ವಿಚಾರಣೆ ವೇಳೆ ಗೈರು ಹಾಜರಾಗಿದ್ದಲ್ಲದೆ, ಮಾಹಿತಿ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶ್ರೀ ಲಕ್ಷ್ಮಣ ಶೃಂಗೇರಿಗೆ 10 ಸಾವಿರ, ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ದೇವಣ್ಣ ಕಟ್ಟಿಗೆ 15 ಸಾವಿರ,ರಾಯಚೂರು ತಾಲೂಕು ಗ್ರೇಡ್ 2 ತಹಸೀಲ್ದಾರ್ ಪರಶುರಾಮ ಗೆ 5 ಸಾವಿರ,ಜೇವರ್ಗಿ ತಾಲೂಕಿನ ಹುಲ್ಲೂರ ಗ್ರಾ.ಪಂ ಕಾರ್ಯದರ್ಶಿ ಮಲ್ಲಿಕಾರ್ಜುನಗೆ 5 ಸಾವಿರ, ಸುರುಪುರ ತಾಲೂಕಿನ ಆಲ್ದಾಳ ಗ್ರಾ.ಪಂ. ಕಾರ್ಯದರ್ಶಿ ರಾಜಕುಮಾರ ಸುಬೆದಾರಗೆ 10 ಸಾವಿರ, ಮಾನ್ವಿ ತಾಲೂಕಿನ ಆರೋಲಿ ಗ್ರಾಪಂ ಪಿ.ಡಿ.ಓ ರಘುನಾಥಗೆ 5 ಸಾವಿರ, ಆಳಂದ ತಾಲೂಕಿನ ಯಲಸಂಗಿ ಗ್ರಾ.ಪಂ ಪಿ.ಡಿ.ಓ ಜಗದೀಶಗೆ 15 ಸಾವಿರ,ಆಳಂದ್ ತಾಲೂಕ ಮುನಲ್ಲಿ ಗ್ರಾಮ ಪಂಚಾಯತ್ ಪಿ. ಡಿ ಓ. ಭೀಮರಾವ್ ಗೆ 10 ಸಾವಿರ ಸುರಪುರ ತಾಲೂಕಿನ ನಗನೂರು ಗ್ರಾಪಂ ಕಾರ್ಯದರ್ಶಿಯಾದ ಮಡಿವಾಳಪ್ಪಗೆ 10 ಸಾವಿರ, ಶಹಪುರ ತಾಲೂಕಿನ ಗೋಗಿ.ಕೆ. ಗ್ರಾ.ಪಂ. ಪಿ.ಡಿ.ಓ. ಸಿದ್ರಾಮಗೆ 10 ಸಾವಿರ, ಸಂಡೂರು ತಾಲೂಕಿನ ಹೊಸದರೋಜಿ ಗ್ರಾಪಂ ಕಾರ್ಯದರ್ಶಿ ಕಲ್ಲಪ್ಪಗೆ 10 ಸಾವಿರ, ಯಾದಗಿರ ತಾಲೂಕಿನ ಸೈದಾಪುರ ಗ್ರಾ.ಪಂ ಪಿ.ಡಿ.ಓ ಮುದುಕಣ್ಣ ಗೆ 10 ಸಾವಿರ, ವಡಗೇರಾ ತಾಲೂಕಿನ ತಡಿಬಿಡಿ ಗ್ರಾ.ಪಂ. ಕಾರ್ಯದರ್ಶಿ ಯಂಕನಗೌಡಗೆ 5 ಸಾವಿರ, ಕಾರಟಗಿ ತಾಲೂಕಿನ ಸಿದ್ದಾಪುರ ಗ್ರಾಪಂ ಕಾರ್ಯದರ್ಶಿ ಶ್ರೀಮತಿ ಜೋತಿ ರೆಡ್ಡರ್‌ಗೆ 10 ಸಾ ವಿರ ಕಲ್ಬುರ್ಗಿ ತಾಲೂಕಿನ ಹಾಗಾರಗ ಗ್ರಾ.ಪಂ. ಕಾರ್ಯದರ್ಶಿ ವೇದಾಂಗಗೆ 5 ಸಾವಿರ, ಲಿಂಗಸೂಗೂರು ತಾಲೂಕಿನ ಪೈದೊಡ್ಡಿ



ಗ್ರಾ.ಪಂ.ನ ಕಾರ್ಯದರ್ಶಿ ಭೀಮಣ್ಣಗೆ 10 ಸಾವಿರ, ಯಾದಗಿರ ತಾಲೂಕಿನ ರಾಮ ಸಮುದ್ರ ಗ್ರಾ.ಪಂ. ಕಾರ್ಯದರ್ಶಿ ಗಾಲಿಬಸಾಬ ಗೆ 5 ಸಾವಿರ ಹಾಗೂ ರಾಯಚೂರು ತಾಲೂಕಿನ ಗ್ರೇಡ್-2 ತಹಶೀಲದಾರ ಪರುಶುರಾಮಗೆ 5 ಸಾವಿರ ಸೇರಿ ಒಟ್ಟು 18 ಅಧಿಕಾರಿಗಳಿಗೆ ಏಪ್ರೀಲ್ ತಿಂಗಳಿನಲ್ಲಿ 1 ಲಕ್ಷ 50 ಸಾವಿರ ದಂಡ ವಿಧಿಸಲಾಗಿದೆ ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏಪ್ರೀಲ್ ತಿಂಗಳಲ್ಲಿ 564 ಪ್ರಕರಣಗಳು ವಿಚಾರಣೆಗೆ ಕೈಗೆತ್ತಿಕೊಂಡು 229 ಪ್ರಕರಣಗಳು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ತಾವು ಅಧಿಕಾರ ಸ್ವೀಕರಿಸಿದ ಬಳಿಕ ಒಟ್ಟು 3,084 ಪ್ರಕರಣಗಳು ಕೈಗೆತ್ತಿಕೊಂಡು 88 ದಿನ ವಿಚಾರಣೆ ನಡೆಸಿ 1,308 ಪ್ರಕರಣಗಳು ವಿಲೇವಾರಿ ಮಾಡಿರುವುದಾಗಿ ಆಯುಕ್ತರಾದ ಬಿ.ವೆಂಕಟಸಿಂಗ್ ತಿಳಿಸಿದ್ದಾರೆ.

ಪ್ರಕರಣಗಳ ತ್ವರಿತ ವಿಲೇವಾರಿಗೆ ಅನೂಕೂಲವಾಗಲು ಅಧಿಕಾರಿಗಳಿಗೆ ಮಾಹಿತಿ ಹಕ್ಕು ಅಧಿನಿಯಮ ಕುರಿತು ಅರಿವು ಮುಡಿಸಲು ಈಗಾಗಲೇ ಬಳ್ಳಾರಿ, ಬೀದರ್, ಕಲ್ಬುರ್ಗಿ ಹಾಗೂ ಕೊಪ್ಪಳದಲ್ಲಿ ಕಾರ್ಯಗಾರ ನಡೆಸಿದ್ದು ಈ ತಿಂಗಳ 30 ರಂದು ವಿಜಯನಗರ ಜಿಲ್ಲೆಯಲ್ಲಿ ಕಾರ್ಯಗಾರ ಹಮ್ಮಿಕೊಂಡಿರುವುದಾಗಿ ತಿಳಿಸಿದ್ದಾರೆ. ಇದೆ ವೇಳೆ ವಡೆಗೇರ ತಾಲೂಕ ಉಲ್ಲೆಸುಗೂರು ಗ್ರಾಪಂ ಪಿ. ಡಿ. ಓ, ಸೇಡಂ ತಾಲೂಕ ಅಡಕಿ ಗ್ರಾಪಂ ಪಿ. ಡಿ ಓ, ಜೇವರ್ಗಿ ತಾಲೂಕ ನೆಲೋಗಿ ಗ್ರಾಪಂ ಪಿ. ಡಿ. ಓ.ಅವರಿಂದ ಅನುಕ್ರಮವಾಗಿ, 5 ಸಾವಿರ,15 ಸಾವಿರ, 10 ಸಾವಿರ,ಸೇರಿ 30 ಸಾವಿರ ದಂಡ ವಸೂಲಿ ಮಾಡಲಾಗಿದೆ.

**ಕಾರಿನಲ್ಲಿ ತುಂಬಿ ಕೊಂಡು ಬಂದ ಮಾಹಿತಿ ಬಂಡಲ್:** ಜೇವರ್ಗಿ ತಾಲೂಕ ಹರ್ನಲ್ ಕೆ. ಗ್ರಾಮದ ಬಾಬು ದೊಡ್ಡಮನಿ ಅವರು ಕೇಳಿದ ಜೇವರ್ಗಿ ತಾಲೂಕ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗೆ ಕೇಳಿದ ಮಾಹಿತಿ ಕಾರಿ ನಲ್ಲಿ ತುಂಬಿ ಕೊಂಡು ಬಂದು ವಿಚಾರಣೆ ವೇಳೆ ನೀಡಲಾಯಿತು. ಆಯೋಗ ಮಾಡಿದ ಆದೇಶ ದಂತೆ ಜೇವರ್ಗಿ ಸಿ.ಡಿ.ಪಿ.ಓ ಭೀಮರಾಯ ತಮ್ಮ ಕಚೇರಿಯಲ್ಲಿ ಲಭ್ಯ ಮಾಹಿತಿ ಕಲೆ ಹಾಕಿ ಸುಮಾರ 20ಕ್ಕೂ ಹೆಚ್ಚು ಬಂಡಲ ಕಾರಿನಲ್ಲಿ ತುಂಬಿಕೊಂಡು ಬಂದು ಅರ್ಜಿದಾರನಿಗೆ ನೀಡಿದರು.

# ಇಲಾಖೆಯ ಪಟ್ಟಿ ಬಿಡುಗಡೆ, ರದ್ದು ಪಡಿಸಲು ಮನವಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಾಲಾ ಶಿಕ್ಷಣ ಇಲಾಖೆಯ ಪದವಿ ಪೂರ್ವ ಉಪನ್ಯಾಸಕರ ಕಾರ್ಯಭಾರ ಕಡಿಮೆ ಎಂದು ಗುರುತಿಸಿ ಉಪನ್ಯಾಸಕರ ಪಟ್ಟಿಯನ್ನು ಅವೈಜ್ಞಾನಿಕವಾಗಿ ಮಾಡಿ ಬಿಡುಗಡೆ ಮಾಡಿದ್ದನ್ನು ಕೂಡಲೆ ಹಿಂಪಡೆಯಬೇಕೆಂದು ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘ ಹಾಗೂ ಉಪನ್ಯಾಸಕರ ಸಂಘ ಕಲಬುರ್ಗಿ ಜಿಲ್ಲಾ ಘಟಕದ ಪದಾಧಿಕಾರಿಗಳು ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ ನಮೋಶಿಯವರ ಮುಖಾಂತರ ಮಾನ್ಯ ಶಾಲಾ ಶಿಕ್ಷಣ ಇಲಾಖೆ ಹಾಗೂ ಸಾಕ್ಷರತಾ ಇಲಾಖೆಯ ಸಚಿವರಾದ ಮಾನ್ಯ ಮಧು ಬಂಗಾರಪ್ಪನವರಿಗೆ ಹಾಗೂ ಸಂಭಂದಿಸಿದ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ದಿನಾಂಕ 08/05/2026 ರಂದು ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಕಾರ್ಯಭಾರದ ಕೊರತೆಯಿದೆ ಎಂದು ಇಲಾಖೆ ಪಟ್ಟಿಯನ್ನು ಬಿಡುಗಡೆ ಮಾಡಿದ್ದು ಈ ಪಟ್ಟಿಯು ಅತ್ಯಂತ ಅವೈಜ್ಞಾನಿಕತೆಯಿಂದ ಕೂಡಿದೆ ಈ ಪಟ್ಟಿಯನ್ನು ನೋಡಿದರೆ ವಿಶೇಷವಾಗಿ ಅನುದಾನಿತ ಹಾಗೂ ಸರ್ಕಾರಿ ಪದವಿಪೂರ್ವ ಕಾಲೇಜುಗಳು ತಮ್ಮ ಅಸ್ತಿತ್ವವನ್ನು ಕಳೆದುಕೊಳ್ಳುವ ಭೀತಿ ಎದುರಾಗಿದೆ.ಈಗಾಗಲೇ ಕಡಿಮೆ ಕಾರ್ಯಭಾರವೆಂದು ಗುರುತಿಸಿರುವ ಪದ್ಧತಿಯಲ್ಲೆ ದೋಷವಿದ್ದು ಅದು 320 :1 ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರ



ಅನುಪಾತ ಹೊಂದಿದೆ.ರಾಜ್ಯ ಉಪನ್ಯಾಸಕರ ಸಂಘವು ಕಳೆದೆರಡು ವರ್ಷಗಳಿಂದ ಈ ಅನುಪಾತವನ್ನು 180:1 ಕ್ಕೆ ಇಳಿಸಿ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡುವಂತೆ ಸಾಕಷ್ಟು ಬಾರಿ ಮನವಿ ನೀಡಿ ಹೋರಾಟ ಹಮ್ಮಿಕೊಂಡಿದ್ದರೂ ಕೂಡಾ ಅದನ್ನು ಇಲಾಖೆ ಮಾನ್ಯ ಮಾಡದೇ ಇರುವುದರ ಫಲವಾಗಿ ಇಂದು ರಾಜ್ಯಾದ್ಯಂತ ಸರ್ಕಾರಿ ಕಾಲೇಜುಗಳು ಮುಚ್ಚುವ ಹಂತದಲ್ಲಿವೆ.

ಇಂದು ರಾಜ್ಯದಲ್ಲಿ 3263 ಖಾಸಗಿ ಕಾಲೇಜುಗಳಿದ್ದು 1340 ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಿವೆ. ಕೇವಲ 7644 ಸರ್ಕಾರಿ ಕಾಲೇಜುಗಳ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದು 5269 ಹುದ್ದೆಗಳು ಖಾಲಿ ಇರುತ್ತವೆ.

ಉಪನ್ಯಾಸಕರ ಕೊರತೆ ಇರುವ ಕಾಲೇಜುಗಳಿಗೆ ಪೋಷಕರು ಹೇಗೆ ತಮ್ಮ ಮಕ್ಕಳನ್ನು ದಾಖಲು ಮಾಡಲು ಸಾಧ್ಯ? ಈ ಸಂದರ್ಭದಲ್ಲಿ ಅವೈಜ್ಞಾನಿಕ ಅನುಪಾತ ಮುಂದಿಟ್ಟುಕೊಂಡು ಇರುವ ಉಪನ್ಯಾಸಕರನ್ನೇ ನಿಯೋಜನೆ ಹೆಸರಲ್ಲಿ ಇತರೇ ಕಾಲೇಜುಗಳಿಗೆ ಕಳುಹಿಸಿದರೆ ಸರ್ಕಾರಿ, ಅನುದಾನಿತ ಕಾಲೇಜುಗಳು ಉಳಿವುದಾದರೂ ಹೇಗೆಂಬ ಭೀತಿ ಎದುರಾಗಿದೆ. ಇಂತಹಾ ನೀತಿಯಿಂದಾಗಿ ಆರ್ಥಿಕವಾಗಿ ಹಿಂದುಳಿದಿರುವ ಲಕ್ಷಾಂತರ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಶಿಕ್ಷಣದಿಂದ ವಂಚಿತರಾಗಲಿದ್ದು ಶಿಕ್ಷಣ ಕೇವಲ ಉಳ್ಳವರ ಸೊತ್ತಾಗಲಿದೆ.

ಕೇವಲ ಶಿವಮೊಗ್ಗ ಜಿಲ್ಲೆಯಲ್ಲಿಯೇ ಇರುವ 51 ಸರ್ಕಾರಿ ಕಾಲೇಜುಗಳ 193 ಉಪನ್ಯಾಸಕರನ್ನು ಕಡಿಮೆ ಕಾರ್ಯಭಾರವಿರುವ ಉಪನ್ಯಾಸಕರೆಂದು ಗುರುತಿಸಿದ್ದು ಇದರಿಂದಾಗಿ 47 ಕಾಲೇಜುಗಳು ಇದರಿಂದ ಭಾಧಿತವಾಗಲಿದೆ.ಇದು ಗುಣಾತ್ಮಕ ಶಿಕ್ಷಣಕ್ಕೆ ಸಂಪೂರ್ಣ ವಿರುದ್ಧವಾಗಿದ್ದು ಈ ಪಟ್ಟಿಯನ್ನು ಜಾರಿಗೊಳಿಸಿದಲ್ಲಿ ತಮ್ಮ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅನೇಕ ಸರ್ಕಾರಿ ಕಾಲೇಜುಗಳು ಶೀಘ್ರವಾಗಿ ಮುಚ್ಚುವ ಸಾಧ್ಯತೆಯನ್ನು ಮನಗಂಡು ಜನಪ್ರತಿನಿಧಿಗಳಾದ ತಾವು ಇಲಾಖೆ ಮತ್ತು ಸರ್ಕಾರಕ್ಕೆ ಈ ಪಟ್ಟಿಯನ್ನು ಹಿಂಪಡೆಯಲು ಮನವರಿಕೆ ಮಾಡಲು ತಮಗೆ ಮನವಿ ನೀಡುತ್ತಿದ್ದೇವೆ ಎಂದು ಸಂಘದ ಸದಸ್ಯರು ತಿಳಿಸಿದರು. ಮನವಿಯನ್ನು ಸ್ವಿಕರಿಸಿದ ವಿ ಪ ಸದಸ್ಯ ಶಶೀಲ್ ಜಿ ನಮೋಶಿ ನಾನು ಸದಾ ನಿಮ್ಮ ನ್ಯಾಯಯುತ ಬೇಡಿಕೆಗಳ ಪರವಾಗಿದ್ದು ತಕ್ಷಣವೆ ಸಚಿವರು ಹಾಗೂ ಸಂಭಂದಿಸಿದ ಅಧಿಕಾರಿಗಳ ಗಮನಕ್ಕೆ ತರುತ್ತೇನೆ ಎಂದು ಹೇಳಿದರು

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಸಂಘದ ಕಲಬುರ್ಗಿ ಜಿಲ್ಲಾ ಘಟಕದ ಅಧ್ಯಕ್ಷ ಶಿವಾನಂದ ಖಜೂರ್ಗಿ, ಉಪನ್ಯಾಸಕರ ಸಂಘದ ಅಧ್ಯಕ್ಷ ಜೇ ಮಲ್ಲಪ್ಪ, ಪ್ರಧಾನ ಕಾರ್ಯದರ್ಶಿ ನರಸಪ್ಪ ರಂಗೋಲಿ,ರಾಜ್ಯ ಪರಿಷತ್ ಸದಸ್ಯರಾದ ಧರ್ಮರಾಯ ಜವಳಿ, ಸವಿತಾ ನಾಶಿ, ಉಪನ್ಯಾಸಕ ಐ ಕೆ ಪಾಟೀಲ್ , ಎಸ್ ಐ ಪಾಟೀಲ್ ಇನ್ನಿತರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು



ಹುಣಸೂರು ನಗರದ ಶಿಕ್ಷಣಾಧಿಕಾರಿ ಕಚೇರಿಯಲ್ಲಿ ನೂತನವಾಗಿ ಶಿಕ್ಷಣಾಧಿಕಾರಿ ಕಾಳನಾಯಕ ಆಗಮಿಸಿರುವ ರವರಿಗೆ ರಾಜ್ಯ ಕಾಂಗ್ರೆಸ್ ಮಹಿಳಾ ಪ್ರಧಾನ ಕಾರ್ಯದರ್ಶಿ ಎಂ ತ್ರಿವೇಣಿ ಹಾಗೂ ಪ್ರಗತಿಪರ ಸಂಘಟನಾ ಹಿರಿಯ ಹೋರಾಟಗಾರರ ಎಂಎಸ್ ಮುಷಾಯಿದ್ ಮಾಜಿ ತಾಪಂ ಸದಸ್ಯರಾದ ಪ್ರಸನ್ನ ಹೂ ಗುಚ್ಛ ನೀಡಿ ಸನ್ಮಾನಿಸಿ ಗೌರವಿಸಿದ್ದಾರೆ.

## ಮಕ್ಕಳ ಬೇಸಿಗೆ ಶಿಬಿರ



**ಬಸವಕಲ್ಯಾಣ:** ಅರಿವು ಕೇಂದ್ರಗಳು ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸುವ ಕೇಂದ್ರಗಳು ಹೀಗಾಗಿ ಪ್ರತಿ ಯೊಬ್ಬರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಆರ್.ಡಿ.ಪಿ.ಆರ್.ಫೆಲ್ಲೋ ಡಾ.ಶೃತಿ ಹೇಳಿದರು. ತಾಲ್ಲೂಕಿನ ಧನ್ನೂರಾ(ಕೆ) ಗ್ರಾಮದ ಅರಿವು ಕೇಂದ್ರದಲ್ಲಿ ಬುಧವಾರ "ಗ್ರಾಮೀಣ ಮಕ್ಕಳ ಬೇಸಿಗೆ ಕಾರ್ಯಕ್ರಮ" ದಲ್ಲಿ ಅವರು ಮಾತನಾಡಿ, ಮೋದಲು ನಾವೆಲ್ಲ ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಬೇಕಾದರೆ, ಪುಸ್ತಕಗಳನ್ನು ಖರೀದಿ ಮಾಡಿ ಓದುವಂತ ಪರಿಸ್ಥಿತಿ ಇತ್ತು, ಆದರೆ ಇಗ ಸರ್ಕಾರ ಗ್ರಾಮೀಣ ಮಟ್ಟದ ವಿದ್ಯಾರ್ಥಿಗಳಿಗೆ ಅನುಕೂಲ ವಾಗುವ ದೃಷ್ಟಿಯಿಂದ ಎಲ್ಲಾ ಗ್ರಾಮ ಪಂಚಾಯತ್ ವ್ಯಾಪ್ತಿಗಳಲ್ಲಿ ಡಿಜಿಟಲ್ ಗ್ರಂಥಾಲಯಗಳನ್ನು ಸ್ಥಾಪಿಸಿವೆ. ಇದರಲ್ಲಿ ನೀವು ಬೇಕಾದ ವಿಷಯಗಳ ಬಗ್ಗೆ ಮಾಹಿತಿ ಪಡೆದುಕೊಂಡು ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ಮಾಡಿಕೊಳ್ಳಲು ಅವಕಾಶ ಇವೆ ಎಂದರು. ವಿದ್ಯಾರ್ಥಿಗಳು ನಿಮ್ಮ ಗುರಿ ಮುಟ್ಟುವವರೆಗು ಸಾಮಾಜಿಕ ಜಾಲತಾಣಗಳನ್ನು ಅವಶ್ಯಕತೆ ಇದ್ದಾಗ ಮಾತ್ರ ಬಳಸಬೇಕು ವಿನ: ವಿನಾಕಾರಣ ಉಪಯೋಗಿಸ ಬಾರದು. ಇದರಿಂದ ನಿಮ್ಮ ಶಿಕ್ಷಣದ ಮೇಲೆ ಅಡ್ಡಪರಿಣಾಮಗಳು ಬೀಳುವ ಸಾಧ್ಯತೆಗಳು ಹೆಚ್ಚಾಗಿವೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರೀಜ್ವಾನ್ ಮೇಡಂ ಅವರು ಮಾತನಾಡಿ, ಮಕ್ಕಳು ಪಾಠದ ಜೊತೆಗೆ ನೈತಿಕ ಪಾಠಗಳನ್ನು ಕಲಿಯಬೇಕು. ಅಂದಾಗ ಮಾತ್ರ ನೀವು ಸಮಾಜದಲ್ಲಿ ಉತ್ತಮ ಪ್ರಜೆ ಯಾಗಿ ಬೆಳೆಯಲು ಸಾಧ್ಯ ವಾಗುತ್ತದೆ ಎಂದು ಸಲಹೆ ನೀಡಿದರು. ನಂತರ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಗಳಿಗೆ ಸನ್ಮಾನಿಸುವ ಮೂಲಕ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾ.ಪಂ.ಕಾ.ದತ್ತಾತ್ರಿ ಮೂರುಡೆ, ಐಇಸಿ ಸಂಯೋಜಕ ವೀರಾರೆಡ್ಡಿ, ಅರಿವು ಕೇಂದ್ರ ಮೇಲ್ವಿಚಾರಕ ಸಂತೋಷ, ಡಿಇಒ ದೀಪಕ, ಕಾಯಕ ಮಿತ್ರ ಶಾಮಲಾ ಮೇತ್ರೆ ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಇದ್ದರು.

## ಚುರುಕುಗೊಂಡ ಮನರೇಗಾ ಕಾಮಗಾರಿ



**ಯಾದಗಿರಿ:** ಮಹಾನಗರಗಳಿಗೆ ವಲಸೆ ಹೋಗಬೇಡಿ ನಿಮ್ಮೂರಲ್ಲಿಯೇ ಉದ್ಯೋಗ ಖಾತ್ರಿಯಲ್ಲಿ ಕೆಲಸ ಮಾಡಿ ಎಂದು ಪುಟಪಾಕ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಭೀಮರಾಯ ಅವರು ತಿಳಿಸಿದರು. ಗುರುಮಠಕಲ್ ತಾಲೂಕಿನ ಪುಟಪಾಕ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಂದಕ ಹೂಳು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿ, ಮಹಾನಗರಗಳಿಗೆ ವಲಸೆ ಹೋಗುವುದನ್ನು ತಪ್ಪಿಸಲು ಸರ್ಕಾರ ಈ ಯೋಜನೆಯನ್ನು ಜಾರಿಗೆ ತಂದಿದೆ. ಎಲ್ಲರೂ ಕಾಮಗಾರಿಯಲ್ಲಿ ಭಾಗವಹಿಸಿ ಎಂದರು. ಒಂದು ಕುಟುಂಬಕ್ಕೆ ನೂರು ದಿನಗಳ ಕೆಲಸ, ಗಂಡು ಹೆಣ್ಣಿಗೂ ಸಮಾನ ಕೂಲಿ ದರ 370 ರೂಪಾಯಿ, ಎರಡು ಬಾರಿ ಎನ್‌ಎಂಎಂಎಸ್ ಹಾಜರಾತಿ ಕಡ್ಡಾಯ ಎಂದರು. ಕೂಸಿನ ಮನೆಯಲ್ಲಿ ತಮ್ಮ ಮಕ್ಕಳನ್ನು ಬಿಟ್ಟು ಬನ್ನಿ, ತಾಪಮಾನಹೆಚ್ಚಾಗಿರುವುದರಿಂದ ಬೆಳಿಗ್ಗೆ ಬೇಗ ಬಂದು ಕೆಲಸ ಮುಗಿಸುವಂತೆ ಹೇಳಿದರು. ಈ ವೇಳೆ ಐಇಸಿ ರಾಘವೇಂದ್ರ, ರಾಜೀವ ಗಾಂಧಿ ಪಂಚಾಯತ್ ರಾಜ್ ಫೆಲೋ ಬಸವರಾಜ, ಬಿ ಎಫ್ ಕಾಮಣ್ಣ ಟಿ, ಜಿಕೆ ಎಮ್, ಕೂಲಿಕಾರರು ಇದ್ದರು.

## ಡಿಸಿ ಕಚೇರಿಗೆ ಮುತ್ತಿಗೆ, ಉಗ್ರ ಹೋರಾಟ

**ಬೀದರ್:** ಜಿಲ್ಲೆಯ ರೈತರಿಗೆ ಸಕ್ಕರೆ ಕಾರ್ಖಾನೆಗಳಿಂದ ಬಾಕಿ ಇರುವ ಕಬ್ಬಿನ ಬಿಲ್ಲುಗಳನ್ನು ಸಂಪೂರ್ಣವಾಗಿ ಪಾವತಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ, ಬೀದರ ಜಿಲ್ಲಾ ಘಟಕವು ಮೇ 15, 2026 ರಂದು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಹೋರಾಟ ನಡೆಸುವುದಾಗಿ ಪ್ರಕಟಿಸಿದೆ. ಜಿಲ್ಲಾಧಿಕಾರಿಗಳು ಏಪ್ರಿಲ್ ತಿಂಗಳ ಅಂತ್ಯದೊಳಗೆ ಎಲ್ಲಾ ಸಕ್ಕರೆ ಕಾರ್ಖಾನೆಗಳಿಂದ ರೈತರ ಕಬ್ಬಿನ ಬಿಲ್ಲುಗಳನ್ನು ಪಾವತಿಸುವುದಾಗಿ ಭರವಸೆ ನೀಡಿದ್ದರು. ಆದರೆ ನಿಗದಿತ ಅವಧಿ ಕಳೆದರೂ ಸಹ ರೈತರಿಗೆ ಸಂಪೂರ್ಣ ಹಣ ಪಾವತಿಯಾಗಿಲ್ಲ ಎಂದು ಸಂಘಟನೆ ಆರೋಪಿಸಿದೆ. ಈ ಹಿನ್ನೆಲೆಯಲ್ಲಿ ರೈತರ ಖಾತೆಗಳಿಗೆ ಸಂಪೂರ್ಣ ಕಬ್ಬಿನ ಬಿಲ್ಲು ಜಮೆ ಮಾಡಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಒಂದು ವಾರದ ಗಡುವು ನೀಡಲಾಗಿತ್ತು. ಆದರೆ ಗಡುವು ಮುಗಿದರೂ ಯಾವುದೇ ಸ್ಪಷ್ಟ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಹೋರಾಟದ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಲಾಗಿದೆ. ಆದ್ದರಿಂದ ಜಿಲ್ಲೆಯ ಸಮಸ್ತ ರೈತರು ಮೇ 15ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಸಮೀಪದ ಲಾವಣ್ಯ ಫಂಕ್ಷನ್ ಹಾಲ್ ಹತ್ತಿರ ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಹೋರಾಟ ಯಶಸ್ವಿಗೊಳಿಸಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಯಾನಂದ ಸ್ವಾಮಿ ಸಿರ್ಸಿ ಮನವಿ ಮಾಡಿದ್ದಾರೆ.

# ದೇಶದ ಪ್ರಗತಿ ಮಹಿಳೆಯರ ಪ್ರಗತಿಯ ಮೇಲೆ ಅಳತೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**



ಒಂದು ದೇಶದ ಪ್ರಗತಿಯಾಗಬೇಕಾದರೆ ಅಲ್ಲಿನ ಮಹಿಳೆಯರ ಪ್ರಗತಿಯ ಆಧಾರದ ಮೇಲೆ ಅಳೆಯಬೇಕು ಎಂದು ಡಾ. ಬಾಬಾ ಸಾಹೇಬ ಅಂಬೇಡ್ಕರ್ ನಂಬಿದ್ದರು ಎಂದು ಖಾಜಾ ಬಂದಾನವಾಜ ವಿಶ್ವವಿದ್ಯಾಲಯದ ಸಮೂಹ ಸಂವಹನ ಮತ್ತು ಮಾಧ್ಯಮ ವಿಭಾಗ ಹಾಗೂ ಮಾಧ್ಯಮ ಸಂಯೋಜಕರಾದ ರಾವುತ್ ಅಭಿಪ್ರಾಯಪಟ್ಟರು.

ಗುಲಬರ್ಗಾ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಸೋಮವಾರ ಏರ್ಪಡಿಸಿದ್ದ ವಿಶ್ವಪತ್ರಿಕಾ ದಿನಾಚರಣೆ ಅಂಗವಾಗಿ "ಮಹಿಳಾ ಸಬಲೀಕರಣದಲ್ಲಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರ ಪಾತ್ರ" ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಮಹಿಳೆಗೆ ಪುರುಷರಷ್ಟು ಸ್ಥಾನಮಾನ ಇರಲಿಲ್ಲ. ಭಾರತ ಸಂವಿಧಾನ ರಚಿಸಿದ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರು ಮಹಿಳೆಯರಿಗೆ ಎಲ್ಲ ಹಕ್ಕುಗಳನ್ನು ನೀಡಿದರು. ಸಮಾನ ವೇತನಕ್ಕೆ ಸಮಾನ ವೇತನ, ಮಹಿಳೆಯರ ರಕ್ಷಣೆ, ಕೆಲಸದ ಭದ್ರತೆ ಸೇರಿದಂತೆ ಮಹಿಳೆಯರಿಗೆ ಈ ದೇಶದಲ್ಲಿ ಘನತೆಯ ಬದುಕನ್ನು ನೀಡಿದರು ಎಂದರು. ಸ್ವಾತಂತ್ರ್ಯ ಪೂರ್ವದಲ್ಲಿ ಮಹಿಳೆಗೆ ಪುರುಷರಷ್ಟು ಸ್ಥಾನಮಾನ ಇರಲಿಲ್ಲ. ಭಾರತ ಸಂವಿಧಾನ ರಚಿಸಿದ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರು ಮಹಿಳೆಯರಿಗೆ ಎಲ್ಲ ಹಕ್ಕುಗಳನ್ನು ನೀಡಿದರು. ಸಮಾನ ವೇತನಕ್ಕೆ ಸಮಾನ ವೇತನ, ಮಹಿಳೆಯರ ರಕ್ಷಣೆ, ಕೆಲಸದ ಭದ್ರತೆ ಸೇರಿದಂತೆ ಮಹಿಳೆಯರಿಗೆ ಈ ದೇಶದಲ್ಲಿ ಘನತೆಯ ಬದುಕನ್ನು ನೀಡಿದರು ಎಂದರು.

ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಶಿಕಾಂತ ಉಡಿಕೇರಿ ಮಾತನಾಡಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವಿದ್ಯಾರ್ಥಿಗಳು ಬರವಣಿಗೆಯ ಜೊತೆಗೆ ಓದಿಗೆ ಹೆಚ್ಚು ಮಹತ್ವ ಕೊಡಬೇಕು ಎಂದು ಕುಲಪತಿ ಪ್ರೊ. ಶಶಿಕಾಂತ ಉಡಿಕೇರಿ ಅಭಿಪ್ರಾಯಪಟ್ಟರು. ಪತ್ರಕರ್ತರಿಗಗೂ ಕೂಡ ಹಲವು ಜವಾಬ್ದಾರಿಗಳಿವೆ. ಪತ್ರಿಕೋದ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಎಂದು ಕರೆಯಲಾಗುತ್ತದೆ. ಪತ್ರಕರ್ತರು ಪ್ರಾಮಾಣಿಕ ಮತ್ತು ವಸ್ತುನಿಷ್ಠ ಸುದ್ದಿಗಳಿಗೆ ಹೆಚ್ಚಿನ ಮಹತ್ವ ಕೊಡಬೇಕು ಎಂದರು.

ನಂತರ ಮಾತನಾಡಿದ ಸಿಂಡಿಕೇಟ್ ಸದಸ್ಯ ಉದಯಕಾಂತ ಪಾಟೀಲ ಮಾತನಾಡಿ ವಿಶ್ವವಿದ್ಯಾಲಯದಲ್ಲಿರುವ ಹಲವು ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇವೆ. ವಿಶ್ವವಿದ್ಯಾಲಯಕ್ಕೆ ಹಣದ ಅಡಚಣೆ ಆದ-ರೆ ಸರಕಾರದಿಂದ ನೆರವು ಕೊಡಿಸಲು ಸಹ ನಮ್ಮೆಲ್ಲ ಸಿಂಡಿಕೇಟ್ ಸದಸ್ಯರು ಪ್ರಯತ್ನಿಸುತ್ತೇವೆ ಎಂದರು. ವಿಭಾಗದ ವಿದ್ಯಾರ್ಥಿಗಳು ಹೆಚ್ಚಿನ ಓದಿನೊಂದಿಗೆ ರಾಜ್ಯದ ಬೇರೆ ಬೇರೆ ಪತ್ರಿಕೆಗಳಲ್ಲಿ ಕೆಲಸ ಮಾಡುವಂತಾಗಲಿ ಎಂದು ಹಾರೈಸಿದರು.

ಸಿಂಡಿಕೇಟ್ ಸದಸ್ಯರಾದ ರಾಘವೇಂದ್ರ ಎಂ ಭೈರಪ್ಪ ಮಾತನಾಡಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಉಳಿಸಲು ಪ್ರಯತ್ನಿಸುವೆ. ಈ ವಿಭಾಗದಲ್ಲಿ ಸ್ಮಾರ್ಟ್ ಕ್ಲಾಸ್ ಮಾಡಲು ಬೇಡಿಕೆ ಇತ್ತು ಅದನ್ನು ಈಡೇರಿಸಿದ್ದೇನೆ. ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಇಲ್ಲಿನ ಸೌಲಭ್ಯ ಪಡೆದುಕೊಂಡು ಉನ್ನತ ಗುರಿಯತ್ತ ಸಾಗಬೇಕು ಎಂದರು. ಸಂಯೋಜಕ ಡಾ. ಸುರೇಶ ಜಂಗೆ ಅಧ್ಯಕ್ಷತೆ ವಹಿಸಿದ್ದರು. ಸಂಪಾದಕ ವಿಠ್ಠಲ್ ಚಿಕಣಿ ಇದ್ದರು.

ಪತ್ರಿಕೋದ್ಯಮ ವಿಭಾಗದ ಉಪನ್ಯಾಸಕ ಡಾ. ಅಶೋಕ ಶರಣಪ್ಪ ಪ್ರಾಸ್ತವಿಕವಾಗಿ ಮಾತನಾಡಿದರು. ಡಾ. ರಾಜಕುಮಾರ ದಣ್ಣೂರು ಸ್ವಾಗತಿಸಿದರು. ಡಾ. ತೀರ್ಥಕುಮಾರ ಬೆಳಕೋಟ ನಿರೂಪಿಸಿ ವಂದಿಸಿದರು.

## ಲೈನ್‌ಮನ್ ಶಿವಪ್ಪ ವರ್ಗಾವಣೆಗೆ ವಿರೋಧ

• **ಮಲ್ಲಮ್ಮ ನುಡಿ ವಾರ್ತೆ ಮುದಗಲ್**



ಸಮೀಪದ ತಲೆಕಾನ್ ಗ್ರಾಮ ಪಂಚಾಯತ್ ವ್ಯಾಪ್ತಿಗೆ ನೇಮಕಗೊಂಡಿರುವ ಮೆದಕನಾಳ 33ಕೆವಿಯ ಲೈನ್ ಮನ್ ಶಿವಪ್ಪ ಇವರನ್ನು ಮಸ್ಕಿ ಪಟ್ಟಣಕ್ಕೆ ವರ್ಗಾವಣೆ ಆದೇಶ ಮಾಡಿರುವುದಕ್ಕೆ ಇಲ್ಲಿನ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ್ದಾರೆ.

ಈಗ ಮುಂಗಾರು ಆರಂಭಗೋಳ್ಳುವ ಕಾರಣ ವಿದ್ಯುತ್ ಕಂಬ ಮತ್ತು ವೈರ್ ಸಮಸ್ಯೆ ಉಂಟಾಗಿ ಆಗಾಗ ವಿದ್ಯುತ್ ಕಡಿತಗೋಳ್ಳುತ್ತದೆ. ಹಲವು ದಿನಗಳಿಂದ ಶಿವಪ್ಪ ಇಲ್ಲಿಯೇ ಕೆಲಸ ನಿರ್ವಹಿಸಿದ್ದಾರೆ. ಅವರಿಗೆ ಇಲ್ಲಿನ ಎಲ್ಲಾ ಸಮಸ್ಯೆಗಳ ಬಗ್ಗೆ ಮಾಹಿತಿ ಇದೆ. ಮೇ, ಜೂನ್ ಹಾಗೂ ಜುಲೈ ತಿಂಗಳು ಮಳೆ, ಗಾಳಿ ಹೆಚ್ಚಿರುವು ದರಿಂದ ವಿದ್ಯುತ್ ಕಡಿತಗೊಂಡು ತೊಂದರೆ ಆಗುವ ಸಂಭವವಿದೆ ಆದ್ದರಿಂದ ಮೂರು ತಿಂಗಳು ವರೆಗೆ ವರ್ಗಾವಣೆ ತಡೆಯಬೇಕು ಹೊಸಬರಿಗೆ ಸರಿಯಾದ ಮಾಹಿತಿ ಕೊರತೆಯಿಂದ ತೊಂದರೆ ಆಗುವುದನ್ನು ತಪ್ಪಿಸಲು ತಕ್ಷಣವೆ ವರ್ಗಾವಣೆಯನ್ನು ತಡೆಯಬೇಕು ಎಂದುಲಿಲ್ಲಿನ ಸಾರ್ವಜನಿಕರು ಆಗ್ರಹಿಸಿದ್ದಾರೆ.

ತಲೇಖಾನ ಅತ್ಯಂತ ದೊಡ್ಡ ಪಂಚಾಯತ್ ಆಗಿರುವ ಕಾರಣ 13 ತಾಂಡಾಗಳು, ಎರಡು ಗೊಲ್ಲರಟ್ಟಿ ಆರು ಕಂದಾಯ ಗ್ರಾಮಗಳನ್ನು ಹೊಂದಿದೆ. ಸಾಕಷ್ಟು ನೀರು ಸರಬರಾಜು ಯೋಜನೆಯ ವಿದ್ಯುತ್ ಬೋರವೆಲ್, ರೈತರ ಪಂಪ್ಗ ಸೆಟ್ಟಗಳು ಇವೆ. ದೆಸಾಯಿ ಭೋಗಾಪೂರ ಕಡೆ ನಾಗಲಾಪೂರ 33ಕೆವಿಯಿಂದ ವಿದ್ಯುತ್ತಿ ಸರಬರಾಜಾದರೇ, ಹಡಗಲಿ, ತಲೇಖಾನ, ಯರದೊಡ್ಡಿ, ಬಗ್ಗಲಗುಡ್ಡ ಕಡೆ ಮೆದಕಿನಾಳ 33ಕೆವಿಯಿಂದ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. ಕಾರಣ ಲೈನ್ ಮ್ಯಾನ್ ಶಿವಪ್ಪ ವರ್ಗಾವಣೆ ತಡೆಯಬೇಕು ಒಂದು ವೇಳೆ ವರ್ಗಾವಣೆ ಮಾಡಿದ್ದಲಿ ಜೆಸ್ಕಾಂ ಕಾರ್ಯಲಯದ ಎದುರು ಗ್ರಾಪಂನ ಸಾರ್ವಜನಿಕರು ಧರಣಿ ನಡೆಸುವುದಾಗಿ ಆಗ್ರಹಿಸಿದ್ದಾರೆ.

## ಕಮಲನಗರದಲ್ಲಿ ನಕಲಿ ಕ್ಲಿನಿಕ್ ಸೀಜ್

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಕಮಲನಗರದಲ್ಲಿ ಗೌತಮ ಸಮದರ ಇವರು ಗಣೇಶ ಮೇಡಿಕಲ್‌ನಲ್ಲಿ ಕ್ಲಿನಿಕ್ ನಡೆಸುತ್ತಿರುತ್ತಾರೆ ಹಾಗೂ ಸಾಯಿಲಕ್ಷ್ಮಿ ಆಯುರ್ವೇದ ಆಸ್ಪತ್ರೆ ಇಲ್ಲಿ ಸುಜಲ್ ಕುಮಾರ ಸೇನ್ ಈ ಇಬ್ಬರೂ ಯಾವುದೇ ಅರ್ಹ ವೈದ್ಯಕೀಯ ಪದವಿ ಪಡೆಯದೆ ವೈದ್ಯ ವೃತ್ತಿ ನಡೆಸುತ್ತಿರುವುದು ತಿಳಿದು ಬಂದಿರುವುದರಿಂದ ಇಂದು (ಮೇ.13) ಸದರಿಯವರು ನಡೆಸುತ್ತಿರುವ ಕ್ಲಿನಿಕ್‌ಗಳ ಮೇಲೆ ಕಮಲನಗರ ತಹಸಿಲ್ದಾರ್ ಅಮಿತ್ ಕುಲಕರ್ಣಿ, ಜಿಲ್ಲಾ ಕೆ.ಪಿ.ಎಂ.ಇ ನೋಡಲ್ ಅಧಿಕಾರಿಗಳು ಡಾ. ದಿಲೀಪ ಡೋಂಗ್ರೆ, ತಾಲೂಕಾ ಆರೋಗ್ಯ ಅಧಿಕಾರಿಗಳು ಔರಾದ(ಬಿ) ಡಾ. ಅನೀಲ ಕುಮಾರ, ಕೆ.ಪಿ.ಎಂ.ಇ ವಿಷಯ ನಿರ್ವಾಹಕರು ಮಹೇಶ್ವರ ರೆಡ್ಡಿ ಹಾಗೂ ಪೋಲಿಸ್ ಸಿಬ್ಬಂದಿಯವರನ್ನೊಳಗೊಂಡ ತಂಡದೊಂದಿಗೆ ಆಕಸ್ಮಿಕ ದಾಳಿ ನಡೆಸಿ ಕ್ಲಿನಿಕ್‌ಗಳನ್ನು ಸೀಜ್ ಮಾಡಲಾಗಿದೆ.

ಈ ಹಿಂದೆ 2023ರಲ್ಲಿ ಗೌತಮ ಸಮದರ ಹಾಗೂ ಸುಜಲ್ ಕುಮಾರ ಸೇನ್ ಇವರ ಕ್ಲಿನಿಕ್‌ಗಳನ್ನು ಸೀಜ್ ಮಾಡಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಕೆಪಿಎಂಇ ನೋಂದಣಿ ಮತ್ತು ಕುಂದುಕೊರತೆ ಪ್ರಾಧಿಕಾರದಲ್ಲಿ ಮಂಡಿಸಿದಾಗ ಜಿಲ್ಲಾಧಿಕಾರಿಗಳು ತಲಾ 25000 ದಂಡ ವಿಧಿಸಿ ಆದೇಶಿಸಿರುತ್ತಾರೆ. ಆದರೂ ಈ ಇಬ್ಬರೂ ಪುನಃ ವೈದ್ಯ ವೃತ್ತಿ ನಡೆಸುತ್ತಿರುವುದರಿಂದ ಮುಂದಿನ ಕ್ರಮಕ್ಕಾಗಿ ಜಿಲ್ಲಾಧಿಕಾರಿಯವರಲ್ಲಿ ಸಲ್ಲಿಸಲಾಗುವುದೆಂದು ಬೀದರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾವೇಶ: ರಾಜಮಾತೆ ಲಲಿತಾರಾಣಿ ಶ್ರೀರಂಗದೇವರಾಯಲು ಅವರಿಗೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**



ಹೈದ್ರಾಬಾದ್–ಕರ್ನಾಟಕ ಜನಾಂದೋಲನ ಕೇಂದ್ರದ ವತಿಯಿಂದ ಇದೇ ತಿಂಗಳ 24 ರಂದು ರಾಯಚೂರಿನ ಕೊಠಾರಿ ಫಂಕ್ಷನ್ ಹಾಲ್ ನಲ್ಲಿ ಆಯೋಜಿಸಲಾಗಿರುವ “371(ಜೆ) ಹೋರಾಟಗಾರರ ಸಮಾವೇಶ, ದುಂಡು ಮೇಜಿನ ಸಭೆ ಹಾಗೂ ಕಲ್ಯಾಣ ಕರ್ನಾಟಕ ವಿಕಾಸ ವೇದಿಕೆ” ಸ್ಥಾಪನಾ ಸಮಾರಂಭಕ್ಕೆ ರಾಜಮಾತೆ ಲಲಿತಾರಾಣಿ ಶ್ರೀರಂಗದೇವರಾಯಲು ಅವರಿಗೆ ಅಧಿಕೃತವಾಗಿ ಆಹ್ವಾನ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜಮಾತೆ ಲಲಿತಾರಾಣಿ ಶ್ರೀರಂಗದೇವರಾಯಲು ಅವರು, ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿ 371(ಜೆ) ಕಲಂನ ಸಮರ್ಪಕ ಜಾರಿ ಹಾಗೂ ಪ್ರಾದೇಶಿಕ ಹಕ್ಕುಗಳ ಕುರಿತಾಗಿ ನಡೆಯುತ್ತಿರುವ ಹೋರಾಟಕ್ಕೆ ಜನಸಾಮಾನ್ಯರು ಬೆಂಬಲ ನೀಡಬೇಕು ಎಂದು ಹೇಳಿದರು. ವಿಶೇಷವಾಗಿ ಗಂಗಾವತಿ ಭಾಗದ ಪ್ರಜ್ಞಾವಂತ ನಾಗರಿಕರು, ಯುವಜನರು, ವಿದ್ಯಾರ್ಥಿಗಳು ಹಾಗೂ ಸಾಮಾಜಿಕ ಹೋರಾಟಗಾರರು ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕರೆ ನೀಡಿದರು. ಇದೆ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯರಾದ ಶರಣಪ್ಪ ಮಟ್ಟೂರು ರವರಿಗೂ ಆಹ್ವಾನಿಸಲಾಯಿತು.

ಕಾರ್ಯಕ್ರಮದಲ್ಲಿ ಹೈದ್ರಾಬಾದ್–ಕರ್ನಾಟಕ ಜನಾಂದೋಲನ ಕೇಂದ್ರದ ಪ್ರಮುಖರು ಉಪಸ್ಥಿತರಿದ್ದು, ಸಮಾವೇಶದ ಉದ್ದೇಶಗಳು ಹಾಗೂ ಮುಂದಿನ ಹೋರಾಟದ ರೂಪುರೇಷೆಗಳ ಕುರಿತು ಚರ್ಚಿಸಿದರು.

ಈ ಸಂದರ್ಭದಲ್ಲಿ ರಾಘವೇಂದ್ರ ಕುಷ್ಟಗಿ, ಈರಣ್ಣ ಶೆಟ್ಟಿ, ಎ.ಕೆ. ಮಹೇಶಕುಮಾರ್, ವಿಷ್ಣುತೀರ್ಥ ಜೋಷಿ ಹಾಗೂ ರಾಘವೇಂದ್ರ ತೂನ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ NTA ಪರಿಹಾರ ನೀಡಬೇಕೆಂದು ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**



ನೀಟ್ ಯುಜಿ (NEET UG) ಪರೀಕ್ಷೆ ಪ್ರಶ್ನೆ ಪತ್ರಿಕೆ ಸೋರಿಕೆಯ ಸರಿಯಾದ ತನಿಖೆ ಮಾಡುವಂತೆ ಹಾಗೂ ವಿದ್ಯಾರ್ಥಿಗಳಿಗೆ NTA ಪರಿಹಾರ ನೀಡಬೇಕೆಂದು ಹಾಗೂ NTA ರದ್ದು ಮಾಡುವಂತೆ ಎಸ್. ಎಫ್.ಐ. ಆಗ್ರಹ ಮಾಡುತ್ತದೆ.

ಈ ಸಂದರ್ಭದಲ್ಲಿ ಎಸ್ ಎಫ್ ಐ ತಾಲೂಕ ಅಧ್ಯಕ್ಷರಾದ ನಾಗರಾಜ ಯು ಮಾತನಾಡಿ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಮೇ.3ರಂದು ನಡೆಸಲಾದ NEET UG 2026 ಪರೀಕ್ಷೆಯಲ್ಲಿ ಸುಮಾರು 22 ಲಕ್ಷ ವಿದ್ಯಾರ್ಥಿಗಳು ಬರೆದಿದ್ದರು. ಆದರೆ, ಈ ಪರೀಕ್ಷೆಯ ಪ್ರಶ್ನೆಪತ್ರಿಕೆ ರಾಜಸ್ಥಾನದಲ್ಲಿ ಸೋರಿಕೆಯಾಗಿದ್ದು, ಈ ಹಿನ್ನಲೆಯಲ್ಲಿ NTA ಈ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಿದ್ದು, ಮರುಪರೀಕ್ಷೆ ಮಾಡುವುದಾಗಿ ಘೋಷಣೆ ಮಾಡಿದೆ.

ಮೇ 3 ರ ಪರೀಕ್ಷೆಯನ್ನು ರದ್ದುಗೊಳಿಸಲು ಕಾರಣವಾದ ನೀಟ್ ಯುಜಿ 2026 ಪರೀ–ಕ್ಷೆಯ ಪ್ರಮುಖ ಪ್ರಶ್ನೆಪತ್ರಿಕೆ ಸೋರಿಕೆಗೆ ಭಾರತ ವಿದ್ಯಾರ್ಥಿ ಫೆಡರೇಷನ್ ಗಂಗಾವತಿ ತಾಲೂಕ ಸಮಿತಿ ಖಂಡಿಸಿತ್ತದೆ. ಆರಂಭದಿಂದಲೂ ಪರೀಕ್ಷೆಗಳ ದುರುಪಯೋಗಕ್ಕೆ ಕುಖ್ಯಾತವಾಗಿರುವ ಎನ್‌ಟಿಎ, ಪರೀಕ್ಷೆಗಳ ನಿರ್ವಹಣೆಯಲ್ಲಿ ತನ್ನ ಅಸಮರ್ಥತೆಯನ್ನು ಮತ್ತೊಮ್ಮೆ ಸಾಬೀತುಪಡಿಸುತ್ತಿದೆ. ಈ ಹಿಂದೆ ಹಲವಾರು ಅಕ್ರಮ ಮಾಡಿರುವುದು ಬೆಳಕಿಗೆ ಬಂದಿದೆ ಇಂತಹ ಅಸಮರ್ಥ NTA ಸಂಸ್ಥೆಯನ್ನು ರದ್ದುಗೊಳಿಸಬೇಕು. ವರದಿಗಳ ಪ್ರಕಾರ, ಒಟ್ಟು 720 ಅಂಕಗಳಲ್ಲಿ ಸುಮಾರು 600 ಅಂಕಗಳ ಪ್ರಶ್ನೆಗಳು ಸೋರಿಕೆಯಾಗಿದೆ. ಪರೀಕ್ಷೆಯಲ್ಲಿನ 180 ಪ್ರಶ್ನೆಗಳಲ್ಲಿ ಸುಮಾರು 15 ಪ್ರಶ್ನೆಗಳನ್ನು ಸಂಭಾವ್ಯ ಪ್ರಶ್ನೆಪತ್ರಿಕೆಯ ಮೂಲಕ ಮುಂಚಿತವಾಗಿ ಪ್ರಸಾರ ಮಾಡಲಾಗಿದೆ ಮತ್ತು ರಸಾಯನಶಾಸ್ತ್ರ ವಿಭಾಗದಿಂದ ಸುಮಾರು 120 ಪ್ರಶ್ನೆಗಳನ್ನು ಅಕ್ಷರಶಃ ಸೋರಿಕೆ ಮಾಡಲಾಗಿದೆ ಎಂದು ವರದಿಯಾಗಿದೆ.

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದಕ್ಕೆ ಮೋದಿ ಸರ್ಕಾರ ನೇರ ಹೊಣೆಯಾಗಿದೆ. ಪರೀಕ್ಷೆ ನಡೆಸುವ ವಿವಿಧ ಸಂಸ್ಥೆಗಳ ಮಾನದಂಡಗಳು ಮತ್ತು ಅವಶ್ಯಕತೆಗಳನ್ನು ನಿರ್ಲಕ್ಷಿಸಿ ಪರೀಕ್ಷಾ ವ್ಯವಸ್ಥೆಯನ್ನು ಕೇಂದ್ರೀಕರಿಸಲು ಮೋದಿ ಸರ್ಕಾರ ತೆಗೆದುಕೊಂಡ ಕ್ರಮಗಳ ದುಷ್ಪರಿಣಾಮಗಳನ್ನು SFI ಮತ್ತು ಸಮಾಜದ ಇತರ ವಿಭಾಗಗಳು ಸೇರಿದಂತೆ ವಿದ್ಯಾರ್ಥಿ ಸಂಘಟನೆಗಳು ಆರಂಭದಿಂದಲೂ ಎತ್ತಿ ತೋರಿಸಿದ್ದವು. ಇದರಲ್ಲಿ ದೊಡ್ಡ ಪ್ರಮಾಣದ ಭ್ರಷ್ಟಾಚಾರ ಮತ್ತು ದೂರಾಡಳಿತದಿಂದ NTA ನಡೆಸುವ ಹೆಚ್ಚಿನ ಸಂಖ್ಯೆಯ ಪರೀಕ್ಷೆಗಳಲ್ಲಿ ನಿಜವಾಗಿದೆ ಎಂದು ಸಾಬೀತಾಗಿದೆ. ದೇಶದ ವಿವಿಧ ಭಾಗಗಳಲ್ಲಿ ಹಲವಾರು ಪರೀಕ್ಷಾ ಮಾಫಿಯಾಗಳು ಹುಟ್ಟಿಕೊಳ್ಳಲು ಮೋದಿ ಸರ್ಕಾರದ ಕೇಂದ್ರೀಕರಣ ಪ್ರಯತ್ನಗಳು ಮತ್ತು ದುಷ್ಪರಿಣಾಮಗಳು ಕಾರಣವಾಗಿವೆ. ಇದು ಭಾರತದ ಮಧ್ಯಮ ವರ್ಗವನ್ನು ಶೋಷಣೆ ಮತ್ತು ಅಭದ್ರತೆಗೆ ಹಾಗೂ ತಳ್ಳಿದ ದೊಡ್ಡ ಪ್ರಮಾಣದ ಕೋಚಿಂಗ್ (ಪ್ರವೇಶ ತರಬೇತಿ)ಪ್ರಶ್ನೆಪತ್ರಿಕೆ ಸೋರಿಕೆಯ ಬಗ್ಗೆ ಸರಿಯಾದ ತನಿಖೆಗೆ SFI ಒತ್ತಾಯಿಸುತ್ತದೆ. NDAಯ ದುರಾಡಳಿತ ವಿದ್ಯಾರ್ಥಿಗಳಿಗೆ ಆತಂಕವನ್ನು ಉಂಟುಮಾಡಿದೆ. ಇದಕ್ಕಾಗಿ NTA ಸಂಸ್ಥೆ ವಿದ್ಯಾರ್ಥಿಗಳಿಗೆ ಪರಿಹಾರವನ್ನು ನೀಡಬೇಕು. ಇದಲ್ಲದೆ, ಕೇಂದ್ರ ಸರ್ಕಾರವು ಪರೀಕ್ಷೆಗಳಿಗೆ ಸಂಬಂಧಿಸಿದಂತೆ ತನ್ನ ಅವೈಜ್ಞಾನಿಕ ಮತ್ತು ಅಸಮರ್ಥ ಕೇಂದ್ರೀಕರಣ ಪ್ರಯತ್ನಗಳನ್ನು ನಿಲ್ಲಿಸಬೇಕು ಮತ್ತು NTA ಅನ್ನು ರದ್ದುಗೊಳಿಸಬೇಕೆಂದು ಗಂಗಾವತಿ ತಾಲೂಕ ಸಮಿತಿ ಆಗ್ರಹ ಮಾಡುತ್ತದೆ. ಎಂದು ಮಾನ್ಯ ತಹಸೀಲ್ದಾರರು ಗಂಗಾವತಿ ಇವರ ಮುಖಾಂತರ, ಸನ್ಮಾನ್ಯ ಶ್ರೀ ರಾಷ್ಟ್ರಪತಿಗಳು ರವರು ರಾಷ್ಟ್ರಪತಿಗಳ ಭವನ ನವದೆಹಲಿಗೆ ಮನವಿ ಸಲ್ಲಿಸಿದ.

ಈ ಸಂದರ್ಭದಲ್ಲಿ ನಾಗರಾಜ ಯು ತಾಲೂಕ ಅಧ್ಯಕ್ಷರು ಬಸಯ್ಯ ಹಿರೇಮಠ, ತಾಲೂಕ ಸಹ ಕಾರ್ಯದರ್ಶಿ ದರ್ಶನ ಹೊಸಕೇರಾ, ಸಹ ಕಾರ್ಯದರ್ಶಿ ಮೌನೇಶ ಉಪಾಧ್ಯಕ್ಷರು ಸದಸ್ಯರಾದ ಶರಣ ಬಸವ, ಪ್ರವೀಣ್, ದುರ್ಗೇಶ್ ಬಸವರಾಜ್ ಉಪಸ್ಥಿತಿಯಲ್ಲಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)